ಸಂಪುಟ: 21, ಸಂಚಿಕೆ: 323, ಪುಟಗಳು: 8, ಶುಕ್ರವಾರ, 30 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ವೇಣು ಸಾರಥ್ಯದಲ್ಲಿ...

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

₹3





# ದಶಪ್ರಮತಿ ಮುದ್ರಣಾಲಯ

dashapramathi mudranalaya

PRE-PRESS PRINTERS

Contact: +91 9483589085 | e-mail: dashapramathimudranalaya@gmail.com

We Undertake Printing of Newspapers | Tabloids | Magazines




### ಸುಭಾಷಿತ

ನಿಮ್ಮ ಕನಸುಗಳ ಬೆನ್ನು ಹತ್ತಿ.. ಆದರೆ, ಅದಕ್ಕೆ ಅಡ್ಡದಾರಿಗಳು ಇಲ್ಲ ಎಂಬುದನ್ನು ಅರಿಯಿರಿ.

– ಸಚಿನ್ ತೆಂಡೂಲ್ಕರ್

### ಪಂಚಾಂಗ

(ಶುಕ್ರವಾರ 30, ಆಗಸ್ಟ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ, ದಕ್ಷಿಣಾಯಣ, ವರ್ಷ ಋತು, ಶ್ರಾವಣ ಮಾಸ, ಕೃಷ್ಣ ಪಕ್ಷ,
- ದ್ವಾದಶಿ, ಶುಕ್ರವಾರ, ಪುನರ್ವಸು ನಕ್ಷತ್ರ
- ರಾಹುಕಾಲ - 10:50 ರಿಂದ 12:23
- ಗುಳಿಕಕಾಲ - 07:44 ರಿಂದ 09:17
- ಯಮಗಂಡಕಾಲ - 03:29 ರಿಂದ 05:02

## ಸಂಕ್ಷಿಪ್ತ ಸುದ್ದಿ

## ಗೋವಾದಲ್ಲಿ ಲಾಯರ್ ಅರೆಸ್ಟ್

### ಕೋರ್ಟ್‌ಗೆ ಹಾಜರಾಗದೇ ಕಳ್ಳಾಟ



**ಬೆಂಗಳೂರು:** ಪ್ರಕರಣವೊಂದರಲ್ಲಿ ನ್ಯಾಯಾಲಯಕ್ಕೆ ಹಾಜರಾಗದೇ ತಲೆಮರೆಸಿಕೊಂಡಿದ್ದ ವಕೀಲ ಕೆ.ಎನ್. ಜಗದೀಶ್ ಕುಮಾರ್ ಅವರನ್ನು ಕೊಡಿಗೆಹಳ್ಳಿ ಪೊಲೀಸರು ಬಂಧಿಸಿದ್ದಾರೆ. ವಾರೆಂಟ್ ಜಾರಿಯಾದರೂ ಜಗದೀಶ್ ಕೋರ್ಟ್‌ಗೆ ಹಾಜರಾಗಿರಲಿಲ್ಲ. ಈ ಹಿನ್ನಲೆಯಲ್ಲಿ ಕೋರ್ಟ್ ಜಾಮೀನು ರಹಿತ ಅರೆಸ್ಟ್ ವಾರೆಂಟ್ ಹೊರಡಿಸಿತ್ತು. ಜಗದೀಶ್ ಗೋವಾದಲ್ಲಿ ಪತ್ತೆಯಾಗಿದ್ದು, ಪೊಲೀಸರು ಬಂಧಿಸಿ ಕರೆತರುತ್ತಿದ್ದಾರೆ. ಜಗದೀಶ್ ವಿರುದ್ಧ 2022ರಲ್ಲಿ ಜಾತಿ ನಿಂದನೆ ಕೇಸ್ ದಾಖಲಾಗಿತ್ತು. ಈ ಸಂಬಂಧ ಅವರ ವಿರುದ್ಧ ನ್ಯಾಯಾಲಯ ಜಾಮೀನು ರಹಿತ ವಾರೆಂಟ್ ಜಾರಿಯಾಗಿತ್ತು. ಆದರೆ ಅವರು ಕೋರ್ಟ್‌ಗೆ ಹಾಜರಾಗದೇ ತಲೆಮರೆಸಿಕೊಂಡಿದ್ದರು.

## ಆರ್ಥಿಕ ಮುಗ್ಗಟ್ಟು



ನವದೆಹಲಿ: ಆರ್ಥಿಕ ಸಂಕಷ್ಟ ಎದುರಿಸುತ್ತಿರುವ ಸ್ಪೈಸ್ ಜೆಟ್ ವಿಮಾನಯಾನ ಸಂಸ್ಥೆ 150 ಕ್ಯಾಬಿನ್ ಸಿಬ್ಬಂದಿಯನ್ನು ಮೂರು ತಿಂಗಳ ಕಾಲ ಕಡ್ಡಾಯ ರಜೆ ಘೋಷಿಸಿದೆ. ಹಣಕಾಸು ಸೇರಿದಂತೆ ಕಾನೂನು ಮತ್ತು ಗುತ್ತಿಗೆದಾರರ ಸಮಸ್ಯೆಗಳನ್ನು ಸ್ಪೈಸ್ ಜೆಟ್ ಎದುರಿಸುತ್ತಿದೆ. ಇದರ ಪರಿಣಾಮ ವಿಮಾನಗಳು ಕಡಿಮೆ ಸಂಖ್ಯೆಯಲ್ಲಿ ಕಾರ್ಯನಿರ್ವಹಿಸುತ್ತಿವೆ. ಆರ್ಥಿಕ ಸಮಸ್ಯೆಯನ್ನು ಸರಿದೂಗಿಸಲು 150 ಕ್ಯಾಬಿನ್ ಸಿಬ್ಬಂದಿಯನ್ನು ಮೂರು ತಿಂಗಳವರೆಗೆ ವೇತನವಿಲ್ಲದೆ ರಜೆಯ ಮೇಲೆ ಕಳುಹಿಸಲಾಗುವುದು ಎಂದು ವಕ್ತಾರರು ತಿಳಿಸಿದ್ದಾರೆ.

» 150 ಸಿಬ್ಬಂದಿಗೆ ಮೂರು ತಿಂಗಳ ಕಾಲ ರಜೆ ನೀಡಿದ ಸ್ಪೈಸ್ ಜೆಟ್

ಪುಟ 2



# ರಾತ್ರಿಯೆಲ್ಲ ನಿದ್ದೆ ಇಲ್ಲದೆ ಒದ್ದಾಡಿದ 'ಕರಿಯ'

## ಬಳ್ಳಾರಿ ಜೈಲಿಗೆ ಅಡ್ಜಸ್ಟ್ ಆಗದ ದರ್ಶನ್

**ಬೆಂಗಳೂರು:** ನಟ ದರ್ಶನ್ ಅವರಿಗೆ ದೊಡ್ಡ ಯಶಸ್ಸು ತಂದುಕೊಟ್ಟ ಸಿನಿಮಾ 'ಕರಿಯ'. ಈ ಚಿತ್ರ ರಿಲೀಸ್ ಆಗಿದ್ದು 2003ರ ಜನವರಿ 3ರಂದು. ಈ ಸಿನಿಮಾ ರಿಲೀಸ್ ಆಗುವ ಹಿಂದಿನ ದಿನ ಬಹುಶಃ ಅವರಿಗೆ ಎಗ್ಸೈಟ್‌ಮೆಂಟ್‌ನಲ್ಲಿ ನಿದ್ದೆ ಬಂದಿರಲಿಕ್ಕಿಲ್ಲ. ಇದೇ ಸಿನಿಮಾ ಇಂದು (ಆಗಸ್ಟ್ 30) ರೀ ರಿಲೀಸ್ ಆಗುತ್ತಿದೆ. ಇದರ ಹಿಂದಿನ ದಿನವೂ ಅವರಿಗೆ ಸರಿಯಾಗಿ ನಿದ್ದೆ ಬಂದಿಲ್ಲ. ಇದಕ್ಕೆ ಕಾರಣ ಎಗ್ಸೈಟ್‌ಮೆಂಟ್ ಅಲ್ಲ, ಜೈಲು ಸೆಟ್ ಆಗದೇ ಇರುವುದು. ಬೆಂಗಳೂರು ಕೇಂದ್ರ ಕಾರಾಗೃಹದಲ್ಲಿ ನಟ ದರ್ಶನ್‌ಗೆ ರಾಜಾತಿಥ್ಯ ನೀಡಲಾಗುತ್ತಿತ್ತು. ಹೀಗಾಗಿ, ಅವರು ಹಾಯಾಗಿ ನಿದ್ದೆ ಮಾಡುತ್ತಿದ್ದರು. ಆದರೆ, ಬಳ್ಳಾರಿ ಜೈಲಿನಲ್ಲಿ ವಿಶೇಷ ಆತಿಥ್ಯಕ್ಕೆ ಬ್ರೇಕ್ ಹಾಕಲಾಗಿದೆ. ಇದು ದರ್ಶನ್‌ಗೆ ನುಂಗಲಾರದ ತುತ್ತಾಗಿದೆ.

ರೇಣುಕಾಸ್ವಾಮಿ ಹತ್ಯೆ ಪ್ರಕರಣದ ನಂತರ ಬಂಧನಕ್ಕೆ ಒಳಗಾಗಿ ಹಾಯಾಗಿದ್ದ ಅವರು ಈಗ ನಿಜವಾದ ಸಂಕಷ್ಟ ಅನುಭವಿಸುತ್ತಿದ್ದಾರೆ. ಸದ್ಯ ಕುಟುಂಬದವರಿಗೆ ಮಾತ್ರ ಭೇಟಿಗೆ ಅವಕಾಶ ಇದೆ. ಅವರು ರಾತ್ರಿ ಇಡೀ ನಿದ್ದೆ ಇಲ್ಲದೆ ಒದ್ದಾಡಿದ್ದಾರೆ.

ಬಳ್ಳಾರಿ ಜೈಲಿನಲ್ಲಿ ದರ್ಶನ್ ಮೊದಲ ದಿನ ಕಳೆದಿದ್ದಾರೆ.

ಪುಟ 2

### ಸರ್, ನನ್ನ ಟೈಂ, ನನ್ನ ಗ್ರಹಚಾರ ಸರಿಯಿಲ್ಲ ಅಷ್ಟೇ

''ಸರ್, ನನ್ನ ಟೈಂ, ನನ್ನ ಗ್ರಹಚಾರ ಸರಿಯಿಲ್ಲ ಅಷ್ಟೇ'' ಇದು ನಟ ದರ್ಶನ್ ಆಡಿರುವ ಪಶ್ಚಾತ್ತಾಪದ ಮಾತು. ಬೆಂಗಳೂರಿನ ಪರಪ್ಪನ ಅಗ್ರಹಾರ ಜೈಲಿನಿಂದ ವ್ಯಾನ್‌ನಲ್ಲಿ ಬಳ್ಳಾರಿಗೆ ತೆರಳುವ ಐದು ಗಂಟೆಗಳ ಪ್ರಯಾಣದಲ್ಲಿ ತನ್ನ ಸಿನಿಮಾ ಜರ್ನಿ ಬಗ್ಗೆ ಪೊಲೀಸರ ಜೊತೆ ದರ್ಶನ್ ಮಾತನಾಡಿದ್ದಾರೆ. ಈ ವೇಳೆ ರೇಣುಕಾಸ್ವಾಮಿ ಕೊಲೆ ಪ್ರಕರಣ ನಂತರದ ಬೆಳವಣಿಗೆಯ ಬಗ್ಗೆ ಮಾ ತನಾಡುವ ವೇಳೆ ದರ್ಶನ್ ಭಾವುಕರಾಗಿದ್ದರು ಎಂಬ ವಿಚಾರ ಮೂಲಗಳಿಂದ ತಿಳಿದು ಬಂದಿದೆ. ರೇಣುಕಾಸ್ವಾಮಿ ಕೊಲೆ ಪ್ರಕರಣದ ಸಂಬಂಧ, ಈಗ ಏನು ಹೇಳಿದ್ರೂ ತಪ್ಪಾಗುತ್ತದೆ. ಕಾನೂನಿನ ಮೂಲಕ ಎಲ್ಲವನ್ನು ಎದುರಿಸುತ್ತೇನೆ ಎಂಬುದಾಗಿ ದರ್ಶನ್ ಮಾತನಾಡಿದ್ದಾರೆ. ಐದು ಗಂಟೆಗಳ ಪ್ರಯಾಣದಲ್ಲಿ ಕೆಲ ವಿಚಾರಗಳನ್ನು ಹೊರತುಪಡಿಸಿ ಹೆಚ್ಚಿನ ಸಮಯದಲ್ಲಿ ದರ್ಶನ್ ಮೌನವಾಗಿಯೇ ಕುಳಿತಿದ್ದರು.

## ರಾಜಾತಿಥ್ಯ ಸಚಿವನಿಗೆ ಸಿಎಂ ಕ್ಲಾಸ್




**ಬೆಂಗಳೂರು:** ದರ್ಶನ್ ಐಶಾರಾಮಿ ಜೈಲುವಾಸದ ಹಿಂದೆ ಸಚಿವರೊಬ್ಬರ ಹೆಸರು ಕೇಳಿ ಬಂದಿದ್ದಕ್ಕೆ ಸಿಎಂ ಸಿದ್ದರಾಮಯ್ಯ ಗರಂ ಆಗಿದ್ದಾರೆ. ಸಚಿವ ನಾಗೇಂದ್ರನಿಗೆ ಏನಾಯ್ತು? ನಿನಗೂ ಹಾಗೆ ಆದರೆ ಏನ್ಮಾಡ್ತಿಯಾ ಎಂದು ಪ್ರಶ್ನಿಸಿ ಕ್ಲಾಸ್ ತೆಗೆದುಕೊಂಡಿದ್ದಾರೆ ಎಂದು ತಿಳಿದು ಬಂದಿದೆ. ನೋಡಪ್ಪ ಇಂತಹ ವಿಚಾರಕ್ಕೆ ಹೋಗಬೇಡ. ಸಚಿವ ನಾಗೇಂದ್ರನಿಗೆ ಏನಾಯ್ತು, ನಿನಗೂ ಅದೇ ರೀತಿ ಆದ್ರೆ, ಏನ್ಮಾಡ್ತೀಯಾ? ಇದರ ಹಿಂದೆ ನಿನ್ನ ಪಾತ್ರ ಇದ್ದರೆ ನಾಗೇಂದ್ರ ಹೋದಂತೆ ನೀನು ಹೋಗಬಹುದು ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

ಪುಟ 2

## ದೋಸ್ತಿಗಳ ಮಧ್ಯೆ 3 ಒಪ್ಪಿತ ಸೂತ್ರ

**ನವದೆಹಲಿ:** ಚನ್ನಪಟ್ಟಣ ಉಪಚುನಾವಣೆ ಸಂಬಂಧ ದೋಸ್ತಿಗಳ ಟಿಕೆಟ್ ಫೈಟ್ ಜೋರಾಗಿದೆ. ಬಿಜೆಪಿ ರಾಜ್ಯ ನಾಯಕರು ಯೋಗೇಶ್ವರ್ ಪರ ಲಾಬಿ ಮಾಡಿದ್ದರೆ ಜೆಡಿಎಸ್ ತನ್ನ ಕೋಟೆ ಉಳಿಸಿಕೊಳ್ಳಲು ಹೆಚ್‌ಡಿಕೆ ಕಸರತ್ತು ನಡೆಸಿದ್ದಾರೆ.

ನಿನ್ನೆ ರಾತ್ರಿ ಪ್ರಹ್ಲಾದ್ ಜೋಷಿ ನಿವಾಸದಲ್ಲಿ ನಡೆದ ಸಭೆಯಲ್ಲಿ ಹೆಚ್‌ಡಿ ಕುಮಾರಸ್ವಾಮಿ, ಪ್ರತಿ ಪಕ್ಷದ ನಾಯಕ ಆರ್ ಅಶೋಕ್, ಕೇಂದ್ರ ಸಚಿವ ಸೋಮಣ್ಣ, ಸಂಸದ ಬೊಮ್ಮಾಯಿ, ಅಶ್ವತ್ಥ ನಾರಾಯಣ್, ಅರವಿಂದ್ ಬೆಲ್ಲದ್, ಪರಿಷತ್ ಸದಸ್ಯ ಸಿಟಿ ರವಿ ಭಾಗಿಯಾಗಿದ್ದರು. ಸಭೆ ಬಳಿಕ ಆರ್ ಅಶೋಕ್ ಮಾತನಾಡಿ, ಬಿಜೆಪಿ-ಜೆಡಿಎಸ್ ಒಟ್ಟಿಗೆ ಹೋದರೆ ಇಬ್ಬರಿಗೂ ಲಾಭ. ಉಪ ಚುನಾವಣೆಯಲ್ಲೂ ಕೂಡ ಒಟ್ಟಿಗೆ ಹೋಗುವ ಬಗ್ಗೆ ಚರ್ಚೆ ನಡೆದಿದೆ. ಟಿಕೆಟ್ ನೀಡುವ ಬಗ್ಗೆ ಹೈಕಮಾಂಡ್ ತೀರ್ಮಾನ ಮಾಡಲಿದೆ. ಗೆಲ್ಲಬೇಕೆಂಬ ಒಂದೇ ಉದ್ದೇಶದಿಂದ ಮೈತ್ರಿ ಪಕ್ಷ ಒಟ್ಟಿಗೆ ಹೋಗಬೇಕು ಎನ್ನುವುದರ ಬಗ್ಗೆ ಚರ್ಚೆ ನಡೆದಿದೆ. ಸೌಹಾರ್ದಯುತವಾಗಿ ಸಭೆ ನಡೆದಿದೆ ಎಂದು ತಿಳಿಸಿದರು. ಮೂಲಗಳ ಪ್ರಕಾರ ಟಿಕೆಟ್ ಯಾರಿಗೆ ನೀಡಬೇಕು ಎನ್ನುವುದು ಅಂತಿಮವಾಗಿಲ್ಲ. ಮಾಜಿ ಪ್ರಧಾನಿ ದೇವೇಗೌಡರ ಎಂಟ್ರಿ ಬಳಿಕವೇ ಟಿಕೆಟ್ ಗೊಂದಲ ಪರಿಹಾರವಾಗುವ ಸಾಧ್ಯತೆಯಿದೆ.

### ದೋಸ್ತಿಗಳ ಮಧ್ಯೆ 3 ಒಪ್ಪಿತ ಸೂತ್ರ

- ಹೆಚ್‌ಡಿಕೆ ಮನವೊಲಿಸಿ ಸಿಪಿ ಯೋಗೇಶ್ವರ್‌ಗೆ ಟಿಕೆಟ್ ಕೊಡಿಸುವುದು
- ಜೆಡಿಎಸ್ ಚಿನ್ಹೆಯಿಂದಲೇ ಸಿಪಿವೈ ಸ್ಪರ್ಧೆಗೆ ಒಪ್ಪಿಕೊಳ್ಳುವುದು
- ದೋಸ್ತಿಗಳಿಂದ ಒಪ್ಪಿತ 3ನೇ ವ್ಯಕ್ತಿಯನ್ನ ಅಭ್ಯರ್ಥಿ ಮಾಡುವುದು



## 8 ಜಿಲ್ಲೆಗಳಲ್ಲಿ ಮಳೆ



**ಬೆಂಗಳೂರು:** ಕರ್ನಾಟಕದ ಕರಾವಳಿ ಭಾಗಗಳಲ್ಲಿ ವ್ಯಾಪಕ ಹಗುರದಿಂದ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಮಲೆನಾಡಿನಲ್ಲಿ ಚದುರಿದಂತೆ ಮಳೆಯಾದರೆ, ಒಳನಾಡಿನಲ್ಲಿ ಮಧ್ಯಮ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆಯನ್ನು ನೀಡಿದೆ. ದಕ್ಷಿಣ ಒಳನಾಡಿನ ಬಳ್ಳಾರಿ, ಬೆಂಗಳೂರು ನಗರ, ಬೆಂಗಳೂರು ಗ್ರಾಮಾಂತರ, ಚಾಮರಾಜ ನಗರ, ಚಿಕ್ಕಬಳ್ಳಾಪುರ ಹಾಗೂ ಚಿತ್ರದುರ್ಗ, ದಾವಣಗೆರೆ, ಕೋಲಾರ, ಮಂಡ್ಯ, ಮೈಸೂರು, ರಾಮನಗರ, ತುಮಕೂರು, ವಿಜಯನಗರದಲ್ಲಿ ಹಗುರದಿಂದ ಕೂಡಿದ ಮಳೆಯಾಗುವ ಸಾಧ್ಯತೆಯಿದೆ. ಇನ್ನು ಉತ್ತರ ಒಳನಾಡಿನ ಬೆಳಗಾವಿ, ಹಾವೇರಿ, ರಾಯಚೂರು, ಯಾದಗಿರಿ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ. ಧಾರವಾಡ, ಬಾಗಲಕೋಟೆ, ಗದಗ, ಕೊಪ್ಪಳ, ವಿಜಯಪುರದಲ್ಲಿ ಸಣ್ಣ ಪ್ರಮಾಣದಲ್ಲಿ ಮಳೆಯಾಗಲಿದೆ.

### ಮೀನುಗಾರರಿಗೂ ಇನ್ನೆರಡು ದಿನ ಅಲರ್ಟ್

ಪುಟ 2

## ಬೇಕರಿ ತಿನಿಸುಗಳ ಮೇಲೆ ಕ್ರಮಕ್ಕೆ ಸಿದ್ಧತೆ

**ಬೆಂಗಳೂರು:** ಆರೋಗ್ಯ ಹಾಗೂ ಆಹಾರ ಸುರಕ್ಷತಾ ಇಲಾಖೆ ಜನರ ಹಿತದೃಷ್ಟಿ ಕಾಪಾಡುವ ಸಲುವಾಗಿ, ಅನೇಕ ಬದಲಾವಣೆಗಳನ್ನು ಮಾಡಲು ಮುಂದಾಗಿದೆ. ಜನರು ಸೇವಿಸುವ ಆಹಾರ ದಿನದಿಂದ ದಿನಕ್ಕೆ ಕಲುಷಿತವಾಗುತ್ತಿದ್ದು, ಕಲಬೆರಕೆ ಆಹಾರದ ವಿರುದ್ಧ ಸಮರ ಸಾರಿದೆ. ಗೋಬಿ, ಕಬಾಬ್, ಕಾಟನ್ ಕ್ಯಾಂಡಿ, ಪಾನಿಪುರಿ ತಿನಿಸುಗಳ ಮೇಲೆ ಆಹಾರ ಇಲಾಖೆ ಒಂದಷ್ಟು ನಿರ್ಬಂಧಗಳನ್ನು ವಿಧಿಸಿತ್ತು. ಜೊತೆಗೆ ಹೋಟೆಲ್‌ಗಳು ಹಾಗೂ ಬೀದಿ ಬದಿ ವ್ಯಾಪಾರಿಗಳ ಮೇಲೂ ಕೂಡಾ ಒಂದಷ್ಟು ನಿರ್ಬಂಧಗಳನ್ನು ಹೇರಲಾಗಿತ್ತು. ಇಲಾಖೆಯ ಮುಂದಿನ ಗುರಿ ಬೇಕರಿ ತಿನಿಸುಗಳಾಗಿವೆ.

ಬೇಕರಿಯ ತಿನಿಸುಗಳ ಮೇಲೆ ನಿರ್ಬಂಧ ತರಲು ಇಲಾಖೆ ಸಿದ್ಧತೆ ಮಾಡಿಕೊಳ್ಳುತ್ತಿದೆ. ಇದಕ್ಕೆ ಪೂರಕವಾಗಿ ಮೊದಲಿಗೆ ಸಾಮಾನ್ಯವಾಗಿ ಜನರು ಹೆಚ್ಚು ಸೇವನೆ ಮಾಡುವ ಕೇಕ್‌ಗಳ ಮೇಲೆ ನಿಗಾ ವಹಿಸಲಾಗುತ್ತಿದೆ. ಕೇಕ್‌ಗೆ ಬಳಸುವ ಮೈದಾಹಿಟ್ಟು, ಕೋಕೋ ಪೌಡರ್, ಕ್ರೀಮ್‌ಗಳಿಗೆ ಬಳಸುವ ಪದಾರ್ಥಗಳು, ಫ್ಲೇವರ್‌ಗಳು ಹಾಗೂ ಬಣ್ಣ ಬಣ್ಣವಾಗಿರಲು ಬಳಸುವ ಕಲರ್‌ಗಳನ್ನ ಪರಿಶೀಲನೆಗೆ ಒಳಪಡಿಸಲಾಗುತ್ತಿದೆ. ಪೈನಾಪಲ್, ರೆಡ್ ವೆಲ್ವೆಟ್, ಚಾಕೋಲೇಟ್ ಸೇರಿದಂತೆ ವಿವಿಧ



» ಗೋಬಿಮಂಚೂರಿ, ಕಬಾಬ್ ಮೇಲಿನ ಕ್ರಮದ ನಂತರ ಕ್ರಮ

ಫ್ಲೇವರ್‌ಗಳನ್ನ ಜನರು ಇಷ್ಟ ಪಡುವುದರಿಂದ ಅವುಗಳ ತಯಾರಿಕೆ ಅಥವಾ ಅದಕ್ಕೆ ಹಾಕುವ ಪದಾರ್ಥಗಳು ಜನರು ಆರೋಗ್ಯಕ್ಕೆ ಪೂರಕವಾ ಅಥವಾ ಮಾರಕವಾ ಎಂಬುದನ್ನು ತಿಳಿಯಲು ಮುಂದಾಗಿದೆ. ಸುಮಾರು 264 ಕಡೆಗಳಲ್ಲಿ ಕೇಕ್‌ಗಳ ಸ್ಯಾಂಪಲ್ ಪಡೆದು ಪ್ರಯೋಗಾಲಯಕ್ಕೆ ಕಳುಹಿಸಿಕೊಡಲಾಗಿದೆ. ಇದರ ವರದಿಗೆ ಇಲಾಖೆ ಕಾಯುತ್ತಿದೆ. ಒಂದು ವೇಳೆ, ವರದಿ ಪಾಸಿಟಿವ್ ಬಂದಿದ್ದೇ ಆದಲ್ಲಿ ಕೆಲವೊಂದು ಪದಾರ್ಥಗಳ ಮೇಲೆ ನಿರ್ಬಂಧ ಹೇರಲಾಗುವುದು ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ.

ಪುಟ 2



## ಈರುಳ್ಳಿ ಬೆಲೆ ದಿಢೀರ್ ಏರಿಕೆ

ಒಂದು ಕೆಜಿ ಈರುಳ್ಳಿಯ ಬೆಲೆ 60-70 ರೂಪಾಯಿ

**ಬೆಂಗಳೂರು:** ಕರ್ನಾಟಕದಲ್ಲಿ ಮಳೆ ಹೆಚ್ಚಳದ ಪರಿಣಾಮ ಈರುಳ್ಳಿಯ ಉತ್ಪಾದನೆಯಲ್ಲಿ ಭಾರಿ ಕುಸಿತವಾಗಿದೆ. ಮಾರುಕಟ್ಟೆಗೆ ಹೆಚ್ಚಿನ ಪ್ರಮಾಣದಲ್ಲಿ ಈರುಳ್ಳಿ ಬರ್ತಿಲ್ಲ. ಹೀಗಾಗಿ ರಾಜ್ಯಕ್ಕೆ ಪುಣೆ, ಮಹಾರಾಷ್ಟ್ರದಿಂದ ಈರುಳ್ಳಿ ತರುಹಿಸಿಕೊಳ್ಳಲಾಗುತ್ತಿದ್ದು, ಬೆಲೆ ಏರಿಕೆಯಾಗಿದೆ. ಒಂದು ಕೆಜಿ ಈರುಳ್ಳಿಯ ಬೆಲೆ 60-70 ರೂಪಾಯಿ ಆಗಿದೆ. ಹಬ್ಬದ ವೇಳೆಗೆ ಈರುಳ್ಳಿಯ ಬೆಲೆ ಮತ್ತಷ್ಟು ದುಬಾರಿಯಾಗುವ ಸಾಧ್ಯಾತೆ ಇದೆ ಎಂದು ಮಾರುಕಟ್ಟೆ ಮೂಲಗಳು ತಿಳಿಸಿವೆ. ಈ ಹಿಂದೆ ಉತ್ತರ ಕರ್ನಾಟಕ ಭಾಗದಿಂದ ರಾಜ್ಯಕ್ಕೆ ಈರುಳ್ಳಿ ಪೂರೈಕೆಯಾಗುತ್ತಿತ್ತು. ಆದರೆ, ಉತ್ತರ ಕರ್ನಾಟಕದಲ್ಲಿ ಹೆಚ್ಚು ಮಳೆಯಾಗುತ್ತಿದ್ದು, ಪರಿಣಾಮವಾಗಿ ಈರುಳ್ಳಿ ಬೆಳೆ ಕೊಳೆತು ಹೋಗುತ್ತಿದೆ. ಹೀಗಾಗಿ ಈರುಳ್ಳಿ ಪೂರೈಕೆ ಕಡಿಮೆಯಾಗಿದೆ. ಯಶವಂತಪುರ ಹಾಗೂ ದಾಸನಪುರ ಎಪಿಎಂಸಿಗೆ ಬುಧವಾರ 127 ಲಾರಿಗಳಲ್ಲಿ 38,415 ಚೀಲ ಈರುಳ್ಳಿ ಆವಕವಾಗಿತ್ತು. ಇದರಲ್ಲಿ ರಾಜ್ಯದ ಹತ್ತಿಪ್ಪತ್ತು ಲಾರಿಗಳು ಮಾತ್ರ ಸೇರಿವೆ. ಉಳಿದವೆಲ್ಲ ಪೂನಾದಿಂದ ಬಂದಿವೆ. ಸಗಟು ದರ ಕ್ವಿಂಟಲ್‌ಗೆ ಕನಿಷ್ಠ 2 ಸಾವಿರದಿಂದ ಗರಿಷ್ಠ 4500 ರೂ. ಇತ್ತು. ನಗರದ ಚಿಲ್ಲರೆ ಮಾರುಕಟ್ಟೆಯಲ್ಲಿ ಕೆಜಿಗೆ 55ರಿಂದ 60 ರೂ.ಗೆ ಮಾರಾಟವಾಗಿದೆ.

### ಬೆಳ್ಳುಳ್ಳಿಯೂ ದುಬಾರಿ

**ಈರುಳ್ಳಿ ಮಾತ್ರವಲ್ಲದೆ ಬೆಳ್ಳುಳ್ಳಿ ದರ ಕೂಡ ಕೆಜಿಗೆ 400 ರೂ.ಗೆ ಏರಿಕೆಯಾಗಿದೆ. ಇದಕ್ಕೂ ಅತಿವೃಷ್ಟಿಯೇ ಕಾರಣ ಎನ್ನಲಾಗಿದೆ. ಬುಧವಾರ ಮಾರುಕಟ್ಟೆಯಲ್ಲಿ ಕೇಜಿಗೆ 400 ರೂ. ದರವಿತ್ತು. ಕಳೆದ ಡಿಸೆಂಬರ್, ಜನವರಿ ವೇಳೆಗೆ ಬೆಳ್ಳುಳ್ಳಿ ಕೆಜಿಗೆ ದಾಖಲೆಯ 500ವರೆಗೆ ಏರಿಕೆಯಾಗಿ ಬಳಿಕ 280, 250 ರೂ.ವರೆಗೆ ಇಳಿಕೆಯಾಗಿತ್ತು.**

**ಕರ್ನಾಟಕಕ್ಕೆ ಮಧ್ಯಪ್ರದೇಶ ಹಾಗೂ ರಾಜಸ್ಥಾನದಿಂದಲೇ ಬೆಳ್ಳುಳ್ಳಿ ಪೂರೈಕೆಯಾಗುತ್ತಿದೆ. ಆ ರಾಜ್ಯಗಳಲ್ಲಿ ಮಳೆ ಹೆಚ್ಚಾಗಿ ಬೆಳ್ಳುಳ್ಳಿ ಉತ್ಪಾದನೆ ಕುಸಿತವಾಗಿರುವುದೇ ದರ ಹೆಚ್ಚಳಕ್ಕೆ ಕಾರಣ. ಬೆಳ್ಳುಳ್ಳಿ ದರ ಕೆಜಿಗೆ 450 ರೂ.ವರೆಗೂ ಏರಿಕೆಯಾಗಬಹುದು ಎಂದು ವ್ಯಾಪಾರಿಗಳು ಅಂದಾಜಿಸಿದ್ದಾರೆ. ಈರುಳ್ಳಿ, ಬೆಳ್ಳುಳ್ಳಿ ಜತೆಗೆ ತರಕಾರಿಗಳ ಬೆಲೆ ಕೂಡ ಕೊಂಚ ಜಾಸ್ತಿಯಾಗಿದೆ. ಇದೆ ರೀತಿ ಮಳೆ ಜಾಸ್ತಿಯಾದರೆ ತರಕಾರಿಗಳ ಬೆಲೆ ಮತ್ತಷ್ಟು ಏರಿಕೆಯಾಗುವ ಸಾಧ್ಯತೆ ಇದೆ ಎಂದು ವ್ಯಾಪಾರಸ್ಥರು ಆತಂಕ ವ್ಯಕ್ತಪಡಿಸಿದ್ದಾರೆ.**

## ಯತ್ನಾಳ್ ಒಡೆತನದ ಕಾರ್ಖಾನೆಗೆ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳ ಭೇಟಿ

**ಕಲಬುರಗಿ:** ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಒಡೆತನದ ಸಿದ್ದಸಿರಿ ಎಥೆನಾಲ್ ಕಂಪನಿಗೆ ಬೆಳಗಾವಿ ವಿಭಾಗದ ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಚಿಂಚೋಳಿಯ ಹೊರವಲಯದಲ್ಲಿರುವ ಕಾರ್ಖಾನೆಗೆ ಅಧಿಕಾರಿಗಳು ಭೇಟಿ ನೀಡಿದ್ದರು. ಮಾಲಿನ್ಯ ನಿಯಂತ್ರಣ ಮಂಡಳಿ ಪರಿಶೀಲನೆ ನಡೆಸುವಂತೆ ಅಧಿಕಾರಿಗಳಿಗೆ ಆದೇಶ ನೀಡಿತ್ತು. ಆದೇಶದ ಮೇರೆಗೆ ಮಾಲಿನ್ಯ ನಿಯಂತ್ರಣ ಮಂಡಳಿಯ ನಿಯಮಗಳ ಪಾಲನೆ ಬಗ್ಗೆ ಅಧಿಕಾರಿಗಳು ಪರಿಶೀಲನೆ ನಡೆಸಿದ್ದಾರೆ. ಕಾರ್ಖಾನೆಯ ಒಳಭಾಗದಲ್ಲಿ ವಿಡಿಯೋ ಮಾಡಿಕೊಂಡು ಅಧಿಕಾರಿಗಳು ತೆರಳಿದ್ದಾರೆ. ಇಂದು (ಶುಕ್ರವಾರ) ಮಾಲಿನ್ಯ ನಿಯಂತ್ರಣ ಮಂಡಳಿ ಕೇಂದ್ರ ಕಚೇರಿಗೆ ವರದಿ ಸಲ್ಲಿಸಲಿದ್ದಾರೆ. ಮೇಲ್ನೋಟಕ್ಕೆ ನಿಯಮಗಳ ಪಾಲನೆ ಆಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಪರಿಶೀಲನೆ ಮುಗಿಯುತ್ತಿದ್ದಂತೆ ಕಾರ್ಖಾನೆ ಪ್ರಾರಂಭಕ್ಕೆ ಅನುಮತಿ ನೀಡುವಂತೆ ಅಧಿಕಾರಿಗಳಿಗೆ ರೈತರು ಮನವಿ ಮಾಡಿದ್ದಾರೆ.



# ಸಕ್ಕರೆ ಕಾರ್ಖಾನೆಗಳು ವ್ಯಾಪ್ತಿ ಮೀರಿ ಕಬ್ಬನ್ನು ಕಟಾವು ಮಾಡಬಾರದು



**ಮಂಡ್ಯ:** ಜಿಲ್ಲೆಯಲ್ಲಿರುವ ಎಲ್ಲಾ ಸಕ್ಕರೆ ಕಾರ್ಖಾನೆಗಳು ಮ್ಯಾಪಿಂಗ್ ಆಗಿರುವ ಪ್ರದೇಶವನ್ನು ಹೊರತುಪಡಿಸಿ ಬೇರೆ ಪ್ರದೇಶದ ಕಬ್ಬನ್ನು ಕಟಾವು ಮಾಡುವಂತಿಲ್ಲ. ಈ ಕುರಿತಂತೆ ಈಗಾಗಲೇ ಎಚ್ಚರಿಕೆ ನೀಡಲಾಗಿದೆ. ಇದೇ ಮರುಕಳಿಸಿದರೆ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಜಿಲ್ಲಾಧಿಕಾರಿ ಡಾ ಕುಮಾರ ಅವರು ಎಚ್ಚರಿಕೆ ನೀಡಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಮಂಡ್ಯ ಜಿಲ್ಲೆಯ 2024 ನೇ ಸಾಲಿನ ಸಕ್ಕರೆ ಕಾರ್ಖಾನೆಗಳ ಪ್ರಗತಿ ಪರಿಶೀಲನೆ ಹಾಗೂ ಇತರೆ ವಿಷಯಗಳ ಬಗ್ಗೆ ಸಭೆ ನಡೆಸಿ ಮಾತನಾಡಿದರು.

2024 – 25 ನೇ ಸಾಲಿನ ಸಕ್ಕರೆ ಕಾರ್ಖಾನೆಗೆ ಸಂಬಂಧಿಸಿದಂತೆ ಈಗಾಗಲೇ ಜಿಲ್ಲೆಯಲ್ಲಿರುವ 5 ಸಕ್ಕರೆ ಕಾರ್ಖಾನೆಗಳಲ್ಲಿ ಕಬ್ಬು ಅರೆಯುವ ಪ್ರಕ್ರಿಯೆ ನಡೆಯುತ್ತಿದೆ. ಕಾರ್ಖಾನೆಗಳು ತಮ್ಮ ವ್ಯಾಪ್ತಿ ಮೀರಿ ಕಬ್ಬನ್ನು ಖರೀದಿ ಮಾಡುತ್ತಿರುವ ಬಗ್ಗೆ ಸಾಕಷ್ಟು ದೂರು ಕೇಳಿ ಬರುತ್ತಿವೆ ಎಂದರು.

ಜಿಲ್ಲೆಯ 5 ಸಕ್ಕರೆ ಕಾರ್ಖಾನೆಗಳು ಒಗ್ಗೂಡಿ ಸಾಮರಸ್ಯದಿಂದ ಕಾರ್ಯ ನಿರ್ವಹಿಸಿ. ಜೊತೆಗೆ ರೈತರಿಗೆ ಸಕಾಲದಲ್ಲಿ ಎಫ್ ಆರ್ ಪಿ ಪ್ರಕಾರವ14 ದಿನದೊಳಗಾಗಿ ಕಬ್ಬು ಖರೀದಿ ವೆಚ್ಚವನ್ನು ಪಾವತಿಸಿ ಎಂದರು.

ಮಂಡ್ಯ ಜಿಲ್ಲೆಗೆ ಹೊರ ಜಿಲ್ಲೆಯಿಂದ ಕಬ್ಬು ಕಟಾವು ಮಾಡಲು ಬರುವ ಕೂಲಿ ಕಾರ್ಮಿಕರಿಗೆ ಮೂಲಭೂತ ಸೌಕರ್ಯವನ್ನು ಕಲ್ಪಿಸುವುದು ಕಾರ್ಖಾನೆಯ ಮಾಲೀಕರ ಕರ್ತವ್ಯವಾಗಿದ್ದು, ಅವರಿಗೆ ಮೂಲಭೂತ ವ್ಯವಸ್ಥೆ ಕಲ್ಪಿಸಿ ಎಂದರು.

ಮೈಶುಗರ್ ಸಕ್ಕರೆ ಕಾರ್ಖಾನೆಯ ವ್ಯವಸ್ಥಾಪಕ ನಿರ್ದೇಶಕ ಡಾ: ಹೆಚ್ ಎಲ್ ನಾಗರಾಜು ಅವರು ಮಾತನಾಡಿ ಮೈಶುಗರ್ ಸಕ್ಕರೆ ಕಾರ್ಖಾನೆ ಸರ್ಕಾರಿ ಸೌಮ್ಯದ ಕಾರ್ಖಾನೆಯಾಗಿದ್ದು, ಸೇವಾ ವಲಯದಲ್ಲಿ ಕಾರ್ಯನಿರ್ವಹಿಸಲಾಗುತ್ತಿದೆ. ಸೆಪ್ಟೆಂಬರ್ ಅಂತ್ಯದೊಳಗೆ 2.50 ಲಕ್ಷ ಟನ್ ಕಬ್ಬು ಅರೆಯುವ ಗುರಿ ಹೊಂದಲಾಗಿದೆ. ಈ ಕಬ್ಬು ಅರಿದ ನಂತರ ಉಳಿದ ಮೈಶುಗರ್ ವ್ಯಾಪ್ತಿಯ ಕಬ್ಬನ್ನು ಬೇರೆ ಆಸಕ್ತ ಕಬ್ಬು ಕಾರ್ಖಾನೆಗೆ ನೀಡಲಾಗುವುದು ಎಂದರು.

ಇದಕ್ಕೆ ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿಗಳು ಐ.ಸಿ.ಎಲ್, ಚಾಮ್ ಶುಗರ್ ಸೇರಿದಂತೆ ಬೇರೆ ಕಾರ್ಖಾನೆಯ ಕಬ್ಬು ಕಟಾವು ಕಾರ್ಮಿಕರು ಒಟ್ಟು 100 ಬ್ಯಾಚ್ ನ್ನು 15 ದಿನಗಳ ಕಾಲ ಮೈಶುಗರ್ ಕಬ್ಬು ಕಟಾವಿಗೆ ನಿಯೋಜಿಸಿಕೊಡುವಂತೆ ತಿಳಿಸಿದರು.

ಸಭೆಯಲ್ಲಿ ಶ್ರೀ ಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತ ಅಧ್ಯಕ್ಷ ಹಾಗೂ ಶ್ರೀರಂಗಪಟ್ಟಣ ಶಾಸಕ ಎ ಬಿ ರಮೇಶ್ ಬಂಡಿಸಿದ್ದೇಗೌಡ, ಮೈಸೂರು ಸಕ್ಕರೆ ಕಂಪನಿ ನಿಯಮಿತದ ಅಧ್ಯಕ್ಷ ಸಿ ಡಿ ಗಂಗಾಧರ,ಜಿಲ್ಲಾ ಪಂಚಾಯತ್ ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಶೇಖ್ ತನ್ವೀರ್ ಆಸೀಫ್, ಆಹಾರ ಮತ್ತು ನಾಗರೀಕ ಸರಬರಾಜು ಇಲಾಖೆಯ ಉಪ ನಿರ್ದೇಶಕ ಕೃಷ್ಣಕುಮಾರ್, ಕೃಷಿ ಇಲಾಖೆ ಜಂಟಿ ನಿರ್ದೇಶಕ ಅಶೋಕ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಉದ್ಯೋಗಾಕಾಂಕ್ಷಿಗಳು ನೋಂದಾಯಿಸಿಕೊಳ್ಳಿ: ಜಿಲ್ಲಾಧಿಕಾರಿ

**ಬೆಂಗಳೂರು ಗ್ರಾಮಾಂತರ:** ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾ ಕೌಶಲ್ಯ ಮಿಷನ್ ವತಿಯಿಂದ ಸೆಪ್ಟೆಂಬರ್ 13ರಂದು ದೇವನಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಬೃಹತ್ ಉದ್ಯೋಗಮೇಳವನ್ನು ಆಯೋಜಿಸಲು ಉದ್ದೇಶಿಸಲಾದ ಅಂಗವಾಗಿ ಜಿಲ್ಲಾ ಉಸ್ತುವಾರಿ ಸಚಿವರು ಆಗಸ್ಟ್ 15ರ ಸ್ವಾತಂತ್ರ್ಯ ದಿನಾಚರಣೆ ದಿನದಂದು ಉದ್ಯೋಗಕಾಂಕ್ಷಿಗಳ ಮತ್ತು ಉದ್ಯೋಗದಾತರ ನೋಂದಣಿ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಜಿಲ್ಲಾ ಮಟ್ಟದ ಬೃಹತ್ ಉದ್ಯೋಗಮೇಳದಲ್ಲಿ ಅಂದಾಜು 100 ನಿಯೋಜಕರು/ಕಂಪನಿಗಳು ಭಾಗವಹಿಸಲ್ಲಿದ್ದು, ತಮ್ಮಲ್ಲಿ ಖಾಲಿ ಇರುವ ಹುದ್ದೆಗಳಿಗೆ ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಎಸ್‌ಎಸ್‌ಎಲ್ಸಿ, ಪಿಯುಸಿ, ಐಟಿಐ, ಡಿಪ್ಲೋಮಾ, ಇಂಜಿನಿಯರಿಂಗ್, ಯಾವುದೇ ಪದವಿ ಹಾಗೂ ಸ್ನಾತಕೋತ್ತರ ಪದವಿ ಹೊಂದಿರುವ ಮತ್ತು ವಿವಿಧ ತರಬೇತಿ ಸಂಸ್ಥೆಗಳಲ್ಲಿ ಕೌಶಲ್ಯ ತರಬೇತಿ ಪಡೆದ ಅಭ್ಯರ್ಥಿಗಳು ಉದ್ಯೋಗಮೇಳದಲ್ಲಿ ಭಾಗವಹಿಸಬಹುದಾಗಿರುತ್ತದೆ. ಉದ್ಯೋಗಮೇಳದಲ್ಲಿ ಭಾಗವಹಿಸುವ ಉದ್ಯೋಗಕಾಂಕ್ಷಿಗಳು https://bangalorerural.nic.in/en/job-fair/5 ನೋಂದಾಯಿಸಿಕೊಳ್ಳಬಹುದಾಗಿರುತ್ತದೆ. ಬೃಹತ್ ಉದ್ಯೋಗಮೇಳವು ಸೆಪ್ಟೆಂಬರ್ 13ರಂದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 4:00 ಗಂಟೆಯವರೆಗೆ ದೇವನಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ನಡೆಯಲ್ಲಿದ್ದು, ಭಾಗವಹಿಸುವ ಅಭ್ಯರ್ಥಿಗಳು ಬಯೋಡಾಟ ಹಾಗೂ ವಿದ್ಯಾರ್ಹತೆಗೆ ಸಂಬಂಧಿಸಿದ ದಾಖಲಾತಿಗಳೊಂದಿಗೆ ಉದ್ಯೋಗ ಮೇಳದಲ್ಲಿ ಭಾಗವಹಿಸಲು ಈ ಮೂಲಕ ತಿಳಿಸಲಾಗಿದೆ. ಆನ್ಲೈನ್ನಲ್ಲಿ ನೋಂದಾಯಿಸಿಕೊಳ್ಳದ ಉದ್ಯೋಗಕಾಂಕ್ಷಿಗಳು, ಉದ್ಯೋಗಮೇಳ ನಡೆಯುವ ಸ್ಥಳದಲ್ಲಿಯೇ ''ಅಭ್ಯರ್ಥಿಗಳ ನೋಂದಣಿ ಕೌಂಟರ್ ಗಳಲ್ಲಿಯೂ ಹೆಸರನ್ನು ನೋಂದಾಯಿಸಿಕೊಂಡು ಭಾಗವಹಿಸಬಹುದಾಗಿರುತ್ತದೆ. ಉದ್ಯೋಗಮೇಳದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಅಭ್ಯರ್ಥಿಗಳು ಹತ್ತಿರದ ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ಪುರಸಭೆ, ನಗರಸಭೆ ಹಾಗೂ ತಾಲ್ಲೂಕು ಪಂಚಾಯಿತಿ ಕಛೇರಿಗಳಿಗೆ ಭೇಟಿ ನೀಡಿಯೂ ಕೂಡ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎನ್ ಶಿವಶಂಕರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸೆ.25 ರಂದು ಸಾಮಾನ್ಯ ಸಭೆ

**ಮಂಡ್ಯ:** ಜಿಲ್ಲೆಯಲ್ಲಿನ ಎಲ್ಲಾ ಸಹಕಾರ ಸಂಘಗಳು ಸಪ್ಟೆಂಬರ್ 25 ರೊಳಗೆ ಸರ್ವ ಸದಸ್ಯರ ಸಾಮಾನ್ಯ ಸಭೆ ನಡೆಸುವುದು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 ರ ಪ್ರಕರಣ 27 ರ ರೀತ್ಯಾ ಕಡ್ಡಾಯವಾಗಿದ್ದು, ಜಿಲ್ಲೆಯಲ್ಲಿನ ಸಹಕಾರ ಸಂಘಗಳ ಕಾರ್ಯದರ್ಶಿ/ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳು ಸಪ್ಟೆಂಬರ್ 25 ರೊಳಗೆ ಸರ್ವಸದಸ್ಯರ ಸಾಮಾನ್ಯ ಸಭೆ ಜರುಗಿಸಿ ವರದಿ ಸಲ್ಲಿಸುವಂತೆ ಮಂಡ್ಯ ಜಿಲ್ಲೆ ಸಹಕಾರ ಸಂಘಗಳ ಉಪ ನಿಬಂಧಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ವೈದ್ಯರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ

# ಸರ್ಕಾರಿ ಆಸ್ಪತ್ರೆಗಳಲ್ಲಿ ಗುಣಮಟ್ಟ ಕಾಯ್ದುಕೊಳ್ಳಿ



**ಬೆಂಗಳೂರು:** ಸರ್ಕಾರಿ ಆಸ್ಪತ್ರೆಗಳ ವೈದ್ಯರುಗಳು ಖಾಸಗಿ ಆಸ್ಪತ್ರೆಗಳ ವೈದ್ಯರುಗಳಿಗಿಂತ ಯಾವುದರಲ್ಲೂ ಕಡಿಮೆ ಇಲ್ಲ. ಸರ್ಕಾರಿ ಆಸ್ಪತ್ರೆಗಳೂ ಖಾಸಗಿ ಆಸ್ಪತ್ರೆಗಳ ರೀತಿಯಲ್ಲಿಯೇ, ಉತ್ತಮ ಗುಣಮಟ್ಟ ಕಾಯ್ದುಕೊಂಡು ರೋಗಿಗಳಿಗೆ ಸ್ಪಂದಿಸಿ ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸಬೇಕು ಎನ್ನುವುದು ಸರ್ಕಾರದ ಗುರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಗಾಂಧಿನಗರ ವಿಧಾನಸಭಾ ಕ್ಷೇತ್ರದ ಕೆ.ಸಿ.ಜನರಲ್ ಆಸ್ಪತ್ರೆ ಆವರಣದಲ್ಲಿ ನೂತನ ತಾಯಿ-ಮಕ್ಕಳ ಆಸ್ಪತ್ರೆ, ಬೋಧನಾ ಕಟ್ಟಡ, ಶವಾಗಾರ ಕಟ್ಟಡ, ನೂತನ ಮಾದರಿ ಅಡುಗೆ ಮನೆ, ಲಾಂಡ್ರಿ ಕಟ್ಟಡ, ವೈದ್ಯಕೀಯ ಘನ ತ್ಯಾಜ್ಯ ಘಟಕದ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಮುಖ್ಯ ಮಂತ್ರಿಗಳು, ಜಯದೇವ ಆಸ್ಪತ್ರೆ 24 ಗಂಟೆ ಕಾರ್ಯನಿರ್ವಹಿಸಲು ಅಗತ್ಯ ಸಿಬ್ಬಂದಿ ಮತ್ತು ಹಣ ಒದಗಿಸಲಾಗುವುದು. ಕಾರ್ಯಕ್ರಮದ ವೇದಿಕೆಯಲ್ಲೇ ಜಯದೇವ ನಿರ್ದೇಶಕರನ್ನು ದೂರವಾಣಿ ಮೂಲಕ ಸಂಪರ್ಕಿಸಿ ಇನ್ನು ಮುಂದೆ ದಿನದ 24 ಗಂಟೆ ಜಯದೇವ ಆಸ್ಪತ್ರೆಯಲ್ಲಿ ಎಲ್ಲಾ ರೀತಿಯ ಆರೋಗ್ಯ ಸೇವೆ ಒದಗಿಸಬೇಕು. ಇದಕ್ಕೆ ತಕ್ಕ ಸಿದ್ದತೆಗಳನ್ನು ಮಾಡಿಕೊಳ್ಳುವಂತೆ ತಿಳಿಸಿದರು.

ಜಯದೇವ ಆಸ್ಪತ್ರೆಯಲ್ಲಿರುವ ಗುಣಮಟ್ಟ ಮತ್ತು ಶುಚಿತ್ವ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲೂ ಬರಬೇಕು. ಆಗ ಮಾತ್ರ ಸರ್ಕಾರ ಕೊಡುವ ಅನುದಾನಕ್ಕೆ ಅರ್ಥ ಬರುತ್ತದೆ. ನಾನು ಸೇರಿ ಮಂತ್ರಿಗಳು, ರಾಜರಣಿಗಳು ಸರ್ಕಾರಿ ಆಸ್ಪತ್ರೆಗಳಿಗೆ ಹೋಗುವುದಿಲ್ಲ, ಇದರಲ್ಲಿ ನಮ್ಮಗಳ ತಪ್ಪು ಕೂಡ ಇದೆ. ಆದರೆ ಖಾಸಗಿ ಆಸ್ಪತ್ರೆಗಳ ಗುಣಮಟ್ಟ ಮತ್ತು ಶುಚಿತ್ವ ಸರ್ಕಾರಿ ಆಸ್ಪತ್ರೆಗಳಲ್ಲೂ ಇರುವಂತೆ ನೋಡಿಕೊಳ್ಳಲು ಅಗತ್ಯ ಅನುದಾನ ಕೊಡುತ್ತಲೇ ಇದ್ದೇವೆ. ಆಸ್ಪತ್ರೆಯ ಆಡಳಿತ ಪಾರದರ್ಶಕವಾಗಿ, ಪ್ರಾಮಾಣಿಕವಾಗಿ ಕರ್ತವ್ಯ ನಿರ್ವಹಿಸಿ, ಸೇವೆ ಸಲ್ಲಿಸಿದರೆ ಇದು ಸಾಧ್ಯವಿದೆ ಎಂದರು.

ಅಪಘಾತ ವಲಯಗಳ ಹತ್ತಿರದಲ್ಲೇ ಟ್ರಾಮಾ ಸೆಂಟರ್ಗಳನ್ನು ತೆರೆಯಲು ಸರ್ಕಾರ ಮುಂದಾಗಿದೆ. ಗಾಯಾಳುಗಳ ಜೀವ ಉಳಿಸಲು ಸಮಯದ ಪ್ರಾಮುಖ್ಯತೆ ಬಹಳ ಮುಖ್ಯ ಎನ್ನುವುದನ್ನು ಪರಿಗಣಿಸಿ ಕಾರ್ಯ ನಿರ್ವಹಿಸಬೇಕು. ಸಕಾಲದಲ್ಲಿ ಚಿಕಿತ್ಸೆ ನಿಡುವುದರ ಮೂಲಕ ರೋಗಗಳನ್ನು, ಗಾಯಾಳುಗಳನ್ನು ರಕ್ಷಿಸಬೇಕು ಎಂದು ತಿಳಿಸಿದರು.

ಬಜೆಟ್ನಲ್ಲಿ ಘೋಷಿಸಿರುವ ಎಲ್ಲಾ ಕಾರ್ಯಕ್ರಮಗಳನ್ನು ಜವಾಬ್ದಾರಿಯಿಂದ ಜಾರಿ ಮಾಡಿ ಎಂದು ಆರೋಗ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ಹರ್ಷಗುಪ್ತ ಅವರಿಗೆ ವೇದಿಕೆಯಿಂದಲೇ ಸೂಚನೆ ನೀಡಿದರು. ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮುಂದಿಟ್ಟ ಬೇಡಿಕೆಗಳನ್ನು ಅನುಮೋದಿಸಿ ಹಣ ಬಿಡುಗಡೆ ಮಾಡಲಾಗಿದೆ. ನೂತನ ಆಸ್ಪತ್ರೆ ಕಟ್ಟಡವನ್ನೂ ನಾನೇ ಉದ್ಘಾಟಿಸುತ್ತೇನೆ. ಬೇಗ ಕೆಲಸ ಮುಗಿಸಿ ಎಂದು ತಿಳಿಸಿದರು.

ರೋಗಿಗಳ ಸಮಸ್ಯೆಗಳನ್ನು ಸಂಯಮದಿಂದ ಕೇಳಿಸಿಕೊಂಡರೆ ಅರ್ಧ ಕಾಯಿಲೆ ಗುಣಮುಖವಾಗುತ್ತದೆ. ವೈದ್ಯರು ಮೊದಲು ರೋಗಿಗಳ ಸಮಸ್ಯೆಗಳನ್ನು ಆಲಿಸಬೇಕು. ನಂತರ ಸೂಕ್ತ ಚಿಕಿತ್ಸೆ ನೀಡುವುದು ವೈದ್ಯರ ಕರ್ತವ್ಯ. ಇದನ್ನು ಮನಗಂಡು ವೈದ್ಯರುಗಳು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಚಲನಚಿತ್ರ ಅಕಾಡೆಮಿ ಅಧ್ಯಕ್ಷರಾದ ಸಾಧುಕೋಕಿಲಾ, ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಹೆಚ್.ಎಂ.ರೇವಣ್ಣ ಸೇರಿ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ರಾಜ್ಯಮಟ್ಟದ ಬಾಪೂಜಿ ಪ್ರಬಂಧ ಸ್ಪರ್ಧೆ

**ಬೆಂಗಳೂರು ಗ್ರಾಮಾಂತರ:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ ಆಚರಿಸುತ್ತಿರುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 155ನೇ ಜಯಂತಿಯ ದಿನಾಚರಣೆಯ ಅಂಗವಾಗಿ ವಿದ್ಯಾರ್ಥಿ ಹಾಗೂ ಯುವಜನರಲ್ಲಿ ಮಹಾತ್ಮ ಗಾಂಧೀಜಿಯವರ ಬದುಕು, ಸ್ವಾತಂತ್ರ್ಯ ಚಳುವಳಿ, ಸರಳತೆ, ಅಹಿಂಸಾ ಮಾರ್ಗ, ಅಸ್ಪೃಶ್ಯತೆ ನಿವಾರಣೆಗಾಗಿ ನಡೆಸಿದ ಪ್ರಯೋಗಗಳು ಇತ್ಯಾದಿ ವಿಚಾರಗಳ ಬಗ್ಗೆ ಪ್ರೌಢಶಾಲೆ, ಪದವಿ ಪೂರ್ವ ಹಾಗೂ ಪದವಿ / ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ಜಿಲ್ಲಾ ಮತ್ತು ರಾಜ್ಯ ಮಟ್ಟದಲ್ಲಿ ಹಮ್ಮಿಕೊಳ್ಳಲಾಗುತ್ತಿದೆ. ವಿವಿಧ ವಿಷಯಗಳ ಕುರಿತು ಪ್ರೌಢಶಾಲೆ, ಪದವಿ ಪೂರ್ವ ಶಿಕ್ಷಣ ಹಾಗೂ ಪದವಿ-ಸ್ನಾತಕೋತ್ತರ ಪದವಿಗಳ ಹಂತದ ವಿದ್ಯಾರ್ಥಿಗಳಿಗೆ ಒಟ್ಟು 3 ವಿಭಾಗಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಆಯೋಜಿಸಲು ಉದ್ದೇಶಿಸಲಾಗಿದೆ. ವಿಜೇತರಿಗೆ ರಾಜ್ಯಮಟ್ಟದಲ್ಲಿ ಪ್ರಥಮ 31 ಸಾವಿರ ರೂ. ದ್ವಿತೀಯ 21 ಸಾವಿರ ರೂ. ಮತ್ತು ತೃತೀಯ 11 ಸಾವಿರ ರೂ. ಹಾಗೂ ಜಿಲ್ಲಾಮಟ್ಟದಲ್ಲಿ ಪ್ರಥಮ 3 ಸಾವಿರ ರೂ. ದ್ವಿತೀಯ 2 ಸಾವಿರ ರೂ ಮತ್ತು ತೃತೀಯ 1 ಸಾವಿರ ರೂ. ಬಹುಮಾನ ನೀಡಲಾಗುವುದು. ಪ್ರೌಢ ಶಾಲಾ ವಿಭಾಗ :- 1) ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ, 2) ಗಾಂಧೀಜಿಯವರ ವಿಚಾರದಲ್ಲಿ ಸತ್ಯಾಗ್ರಹ, 3) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗೆ, 4) ಗಾಂಧೀಜಿಯವರ ತತ್ವಗಳಿಂದ ದೇಶ ಕಟ್ಟುವ ಬಗೆ, ಪ್ರೌಢಶಾಲಾ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 900 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.



ಪದವಿ ಪೂರ್ವ ಶಿಕ್ಷಣ ವಿಭಾಗ :- 1) ಮಹಾತ್ಮ ಗಾಂಧೀಜಿ ಹಾಗೂ ಪ್ರಜಾಪ್ರಭುತ್ವ, 2) ದೇಶದ ಕಳಂಕವಾದ ಅಸ್ಪೃಶ್ಯತೆ ನಿವಾರಿಸುವಲ್ಲಿನ ಗಾಂಧೀಜಿಯವರ ಪ್ರಯೋಗಗಳು, 3) ಗಾಂಧೀಜಿಯವರನ್ನು ಜಗತ್ತು ಗ್ರಹಿಸಿದ ರೀತಿ, 4) ನನ್ನ ಬದುಕಿನಲ್ಲಿ ಗಾಂಧೀಜಿ ತತ್ವಗಳನ್ನು ಅಳವಡಿಸಿಕೊಳ್ಳುವ ಬಗ್ಗೆ, ಪದವಿ ಪೂರ್ವ ಶಿಕ್ಷಣ ವಿಭಾಗದ ವಿದ್ಯಾರ್ಥಿಗಳು ಈ ನಾಲ್ಕು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 1500 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗ :- 1) ಇಂದಿನ ಪ್ರಜಾಪ್ರಭುತ್ವದಲ್ಲಿ ಸತ್ಯಾಗ್ರಹದ ಮಹತ್ವ, 2) ದೇಶ ನಿರ್ಮಾಣದಲ್ಲಿ ಗಾಂಧೀಜಿಯವರ ಜಾತ್ಯಾತೀತ ನಿಲುವುಗಳು, 3) ಗಾಂಧೀಜಿಯವರ ಧಾರ್ಮಿಕ ಸಹಿಷ್ಣುತೆ ಚಿಂತನೆ, ಸ್ವಾತಂತ್ರ್ಯ ಮತ್ತು ಸಮಾನತೆಯ ಪರಿಕಲ್ಪನೆಗಳು, 4) ಗಾಂಧೀಜಿಯವರ ವಿಚಾರದಲ್ಲಿ ಸತ್ಯದ ಪರಿಕಲ್ಪನೆ, 5) ಗಾಂಧೀಜಿಯವರು ಕಂಡ ಸ್ವರಾಜ್ಯ ಮತ್ತು ಆರ್ಥಿಕ ಚಿಂತನೆಗಳು. ಪದವಿ ಹಾಗೂ ಸ್ನಾತಕೋತ್ತರ ಪದವಿ ವಿಭಾಗದ ವಿದ್ಯಾರ್ಥಿಗಳು ಈ ಐದು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು ಸುಮಾರು 2000 ಪದಗಳಿಗೆ ಮೀರದಂತೆ ಪ್ರಬಂಧ ಬರೆಯಬೇಕು.

ಸೆಪ್ಟೆಂಬರ್ 06 ರೊಳಗೆ ಕೊಠಡಿ ಸಂಖ್ಯೆ 210, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ,ಜಿಲ್ಲಾಡಳಿತ ಭವನ, ಬೀರಸಂದ್ರ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಈ ಕಚೇರಿಗೆ ಅಂಚೆ ಮೂಲಕ ಅಥವಾ ಖುದ್ದಾಗಿ ಪ್ರಬಂಧಗಳನ್ನು ಕಳುಹಿಸಬಹುದಾಗಿದೆ.

## ವಿವಿಧ ಪ್ರಶಸ್ತಿಗಳಿಗಾಗಿ ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನ

**ಬೆಂಗಳೂರು ಗ್ರಾಮಾಂತರ:** ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಏಕಲವ್ಯ ಪ್ರಶಸ್ತಿ, ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಮತ್ತು ಜೀವಮಾನ ಸಾಧನೆ ಹಾಗೂ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯ ಅರ್ಜಿಗಳನ್ನು ಅರ್ಹ ಕ್ರೀಡಾಪಟುಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಏಕಲವ್ಯ ಪ್ರಶಸ್ತಿ: ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಪ್ರತಿಭಾನ್ವಿತ ಕ್ರೀಡಾಪಟುಗಳಿಂದ 2023 ನೇ ಸಾಲಿನ ಏಕಲವ್ಯ ಪ್ರಶಸ್ತಿಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ: 2023-24ನೇ ಸಾಲಿನಲ್ಲಿ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ ಯೋಜನೆಯಡಿಯಲ್ಲಿ ಕರ್ನಾಟಕ ರಾಜ್ಯದ ಕ್ರೀಡಾ ಪೋಷಕರನ್ನು ಗುರುತಿಸಿ ಗೌರವಿಸಲು ಅವರಿಗೆ ''ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿ'' ಯನ್ನು ನೀಡಲಾಗುತ್ತಿದೆ. ಈ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಕರ್ನಾಟಕ ಕ್ರೀಡಾ ಪೋಷಕ ಪ್ರಶಸ್ತಿಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಜೀವಮಾನ ಸಾಧನೆ ಹಾಗೂ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿ: 2022 ನೇ ಸಾಲಿನ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಕ್ರೀಡಾ ಕ್ಷೇತ್ರದಲ್ಲಿ ಅಸಾಧಾರಣ ಪ್ರತಿಭೆಯನ್ನು ತೋರಿರುವ ರಾಜ್ಯದ ಕ್ರೀಡಾಪಟುಗಳಿಗೆ ಜೀವಮಾನ ಸಾಧನೆ ಪ್ರಶಸ್ತಿ ನೀಡಿ ಗೌರವಿಸಲಾಗುತ್ತಿದೆ. ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗುತ್ತಿದೆ.

ಅದರಂತೆ 2023ನೇ ಸಾಲಿನ ಹಿರಿಯ ಕ್ರೀಡಾಪಟು/ ತರಬೇತುದಾರರಾಗಿ ಸಾಧನೆ ಮಾಡಿರುವ ಕರ್ನಾಟಕದ ಹಿರಿಯ ಕ್ರೀಡಾಪಟುಗಳು/ ತರಬೇತುದಾರರುಗಳಿಂದ ಜೀವಮಾನ ಸಾಧನೆ ಪ್ರಶಸ್ತಿಗಾಗಿ ಹಾಗೂ ಗ್ರಾಮೀಣ ಪ್ರತಿಭೆಗಳಿಗೆ ಪ್ರೋತ್ಸಾಹ ನೀಡಲು ಕರ್ನಾಟಕ ಕ್ರೀಡಾ ರತ್ನ ಪ್ರಶಸ್ತಿಗಾಗಿ ಸೇವಾಸಿಂಧು ಆನ್ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಈ ಪ್ರಶಸ್ತಿಗಳಿಗೆ ಅರ್ಜಿ ಗಳನ್ನು ಸೆಪ್ಟೆಂಬರ್ 18 ರೊಳಗೆ ಸಲ್ಲಿಸುವುದು. ಹೆಚ್ಚಿನ ವಿವರಗಳಿಗೆ ಸಹಾಯಕ ನಿರ್ದೇಶಕರ ಕಛೇರಿಯ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೂರವಾಣಿ ಸಂಖ್ಯೆ ಹಾಗೂ ಗಣಕಯಂತ್ರ ನಿರ್ವಾಹಕರ ಮೊಬೈಲ್ ಸಂಖ್ಯೆ : 080-29787442 / 9632778567 ನಲ್ಲಿ ಸಂಪರ್ಕಿಸುವುದು ಎಂದು ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

## ಹತ್ತು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ

**ಮಂಡ್ಯ:** ಮಂಡ್ಯ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಬೆಂಗಳೂರು ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ, (ಸಿಡಾಕ್) ಧಾರವಾಡ ಹಾಗೂ ಜಿಲ್ಲಾ ಕೈಗಾರಿಕಾ ಕೇಂದ್ರ, ಇವರ ಸಂಯುಕ್ತ ಆಶ್ರಯದಲ್ಲಿ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಮಂಡ್ಯ ಜಿಲ್ಲೆಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಹತ್ತು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಸೆಪ್ಟೆಂಬರ್ 2 ರಂದು ಮಂಡ್ಯ, ಹರ್ಡಿಕರ್ ಭವನ ದಲ್ಲಿ ಆಯೋಜಿಸಲಾಗಿದೆ. ಈ ಕಾರ್ಯಕ್ರಮದಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಬಯಸುವ ಆಸಕ್ತಿಗೆ ಪ್ರೇರಣೆ, ಸ್ವಂತ ಉದ್ಯಮ ಸ್ಥಾಪನೆಗೆ ಸರ್ಕಾರ ಹಾಗೂ ಹಣಕಾಸು ಸಂಸ್ಥೆಗಳಿಂದ ದೊರೆಯುವ ನೆರವು/ಪ್ರೋತ್ಸಾಹ, ಉದ್ಯಮಗಳ ಆಯ್ಕೆ, ಯೋಜನ ವರದಿ ತಯಾರಿಕೆ, ಮಾರುಕಟ್ಟೆ ಬಗ್ಗೆ ಮಾಹಿತಿ ಹಾಗೂ ಇತರೆ ಕೈಗಾರಿಕಾ ವಿಷಯಗಳ ಕುರಿತು ಮಾಹಿತಿಯನ್ನು ನೀಡಲಾಗುವುದು. ಇದರ ಪೂರ್ವಭಾವಿಯಾಗಿ ಅಭ್ಯರ್ಥಿಗಳ ಆಯ್ಕೆ ಕುರಿತು ವಯಕ್ತಿಕ ಸಮಾಲೋಚನೆ ಸಭೆಯನ್ನು ಆಗಸ್ಟ್ 31 ರಂದು ಶನಿವಾರ ಬೆಳಗ್ಗೆ 10 ಗಂಟೆಗೆ ಮಂಡ್ಯ ಜಂಟಿ ನಿರ್ದೇಶಕರ ಕಛೇರಿಯಲ್ಲಿ ಆಯೋಜಿಸಲಾಗಿದೆ, ಆದರಿಂದ ಆಸಕ್ತ ಪರಿಶಿಷ್ಟ ಜಾತಿ ಪುರುಷ ಮತ್ತು ಮಹಿಳೆಯರು ಸಮಾಲೋಚನ ಸಭೆಯಲ್ಲಿ ಭಾಗವಹಿಸಬಹುದು. ಭಾಗವಹಿಸುವವರು ಕನಿಷ್ಠ 18 ವರ್ಷಗಳ ವಯಸ್ಸಿನವರಾಗಿರಬೇಕು ಹಾಗೂ ಓದಲು/ ಬರೆಯಲು ಬರುತ್ತಿರಬೇಕು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 9008194396, 7760145784 ಅನ್ನು ಸಂಪರ್ಕಿಸಬಹುದು ಎಂದು ಮಂಡ್ಯ ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯಿಂದ ಹೊಸ ಮಾರ್ಗಗಳ ಪರಿಚಯ

**ಬೆಂಗಳೂರು:** ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರಿಗೆ ದಕ್ಷ, ವಿಶ್ವಾಸನೀಯ, ಆರಾಮದಾಯಕ ಹಾಗೂ ಮಿತವ್ಯಯಕರ ದರದಲ್ಲಿ ಉತ್ತಮ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಾ ಬಂದಿದೆ. ಸದ್ಯ ಸಂಸ್ಥೆಯು ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ನೆಲಮಂಗಲದಿಂದ ಸೊಂಡೆಕೊಪ್ಪ, ತಾವರಕೆರೆ, ಸುಂಕದ ಕಟ್ಟೆ ಮಾರ್ಗವಾಗಿ ಸುಮನಹಳ್ಳಿ ಜಂಕ್ಷನ್ ವರಗೆ ಮಾರ್ಗ ಸಂಖ್ಯೆ 374 ಎಸ್ ಹಾಗೂ ನೆಲಮಂಗಲದಿಂದ ಮಾದನಾಯಕನಹಳ್ಳಿ, ಗಂಗೊಂಡನಹಳ್ಳಿ, ಕಾಚೋಹಳ್ಳಿ, ಗೊಲ್ಲರಹಟ್ಟಿ, ಕನ್ನಲ್ಲಿ, ಸೂಲಿಕೆರೆ ಮಾರ್ಗವಾಗಿ ಕೆಂಗೇರಿ ಬಸ್ ನಿಲ್ದಾಣದ ವರೆಗೆ ಮಾರ್ಗ ಸಂಖ್ಯೆ 516 ನ್ನು ನೂತನವಾಗಿ ಪರಿಚಯಿಸಿದೆ. ಸಾರ್ವಜನಿಕರು ಈ ಸೌಲಭ್ಯದ ಉಪಯೋಗವನ್ನು ಪಡೆದುಕೊಳ್ಳುವಂತೆ ಪ್ರಕಟಣೆಯಲ್ಲಿ ತಿಳಿಸಿದೆ.

## ಅಂಗನವಾಡಿ ಹುದ್ದೆಗಳಿಗೆ ಅರ್ಜಿ

**ಮಂಡ್ಯ:** ನಾಗಮಂಗಲ ತಾಲ್ಲೂಕು ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 01 ಅಂಗನವಾಡಿ ಕಾರ್ಯಕರ್ತೆ, 12 ಮಿನಿ ಅಂಗನವಾಡಿ ಕಾರ್ಯಕರ್ತೆ ಹಾಗೂ 39 ಅಂಗನವಾಡಿ ಸಹಾಯಕಿಯರ ಹುದ್ದೆಯನ್ನು ಗೌರವಧನದ ಆಧಾರದ ಮೇಲೆ ಗುರುತಿಸಲು ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಮಹಿಳೆಯರಿಂದ ಆನ್ಲೈನ್ ಮುಖಾಂತರ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 20 ಕೊನೆಯ ದಿನಾಂಕವಾಗಿದ್ದು, https://Karnemakaone.kar.nic.in/abcd/ ವೆಬ್ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ನಾಗಮಂಗಲ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿಯನ್ನು ಸಂಪರ್ಕಿಸಬಹುದು ಎಂದು ನಾಗಮಂಗಲ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪರೀಕ್ಷಾ ಕೇಂದ್ರಗಳಿಗೆ ಭೇಟಿ: ಡಾ.ಕುಮಾರ

**ಮಂಡ್ಯ:** ಕರ್ನಾಟಕ ಲೋಕಸೇವಾ ಆಯೋಗದಿಂದ ಗೆಜೆಟೆಡ್ ಪ್ರೊಬೇಷನರ್ ಗ್ರೂಪ್ 'ಎ' ಮತ್ತು ಗ್ರೂಪ್ 'ಬಿ' ಹುದ್ದೆಗಳ ಪೂರ್ವಭಾವಿ ಪರೀಕ್ಷೆ ಜಿಲ್ಲೆಯ 12 ಪರೀಕ್ಷಾ ಕೇಂದ್ರಗಳಲ್ಲಿ ನಡೆಯುತ್ತಿದ್ದು, ಜಿಲ್ಲಾಧಿಕಾರಿ ಡಾ: ಕುಮಾರ ಅವರು ಪರೀಕ್ಷಾ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪರೀಕ್ಷೆಗಳನ್ನು ಪಾರದರ್ಶಕವಾಗಿ ಯಾವುದೇ ಅವ್ಯವಹಾರಗಳಿಗೆ ಆಸ್ಪದ ನೀಡದೆ ನಿಷ್ಪಕ್ಷಪಾತವಾಗಿ ನಡೆಸುತ್ತಿರುವ ಬಗ್ಗೆ ಪರೀಕ್ಷಾ ಕೇಂದ್ರಕ್ಕೆ ನಿಯೋಜನೆಗೊಂಡಿರುವ ಪರೀಕ್ಷಾ ಕೇಂದ್ರದ ಮುಖ್ಯಸ್ಥರಿಂದ ಮಾಹಿತಿ ಪಡೆದುಕೊಂಡರು.

## ಪ್ರೋತ್ಸಾಹಧನಕ್ಕೆ ಅರ್ಜಿ ಆಹ್ವಾನ

**ಮಂಡ್ಯ:** ಸಮಾಜ ಕಲ್ಯಾಣ ಇಲಾಖೆಯು 2023-24ನೇ ಶೈಕ್ಷಣಿಕ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಪ್ರಥಮ ಭಾರಿಗೆ ಪ್ರಥಮ ದರ್ಜೆಯಲ್ಲಿ ಉತ್ತೀರ್ಣರಾದ ಪ.ಜಾತಿಯ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ ಮಂಜೂರು ಮಾಡುವ ಸಂಬಂಧ ನೂತನ ತಂತ್ರಾಂಶವನ್ನು ಇಲಾಖಾ ವೆಬ್ ತಾಣದಲ್ಲಿ ಪ್ರಕಟಿಸಲಾಗಿದ್ದು ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಹ ಪ.ಜಾತಿ ವಿದ್ಯಾರ್ಥಿಗಳು ಅರ್ಜಿಯನ್ನು www.sw.kar.nic.in (SMIS) ವೆಬ್ ಸೈಟ್ ಮೂಲಕ ಸಲ್ಲಿಸತಕ್ಕದ್ದು ಎಂದು ಮಂಡ್ಯ ಜಿಲ್ಲೆ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

## ಅಮೇರಿಕಾದಲ್ಲಿ ನಡೆಯುವ 12ನೇ ಅಕ್ಕ ವಿಶ್ವ ಕನ್ನಡ ಸಮ್ಮೇಳನ

**ಬೆಂಗಳೂರು:** ಆಗಸ್ಟ್ 30 ರಿಂದ ಸೆಪ್ಟಂಬರ್ 01 ರ ವರೆಗೆ ಅಮೇರಿಕಾದ ವರ್ಜೀನಿಯಾದ ರಿಚ್ಮಂಡ್ನಲ್ಲಿ 12ನೇ ಅಕ್ಕ ವಿಶ್ವ ಕನ್ನಡ ಸಮ್ಮೇಳನ ಜರುಗಲಿದ್ದು, ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ಈ ಸಮ್ಮೇಳನದಲ್ಲಿ ಪಾಲ್ಗೊಳ್ಳಲಿದ್ದಾರೆ.

ಗ್ರೇಟರ್ ರಿಚ್ಮಂಡ್ ಕನ್ವೆನ್ಷನ್ ಸೆಂಟರ್ನಲ್ಲಿ ಸಮ್ಮೇಳನ ನಡೆಯಲಿದ್ದು ಸಭಾಪತಿ ಬಸವರಾಜ ಹೊರಟ್ಟಿ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅಮೇರಿಕಾ ಸೇರಿದಂತೆ ಸುತ್ತಲಿನ ದೇಶಗಳಲ್ಲಿ ವಾಸಿಸುವ ಕನ್ನಡಿಗರನ್ನು ಉದ್ದೇಶಿಸಿ ಮಾತನಾಡಲಿದ್ದಾರೆ.



ಕನ್ನಡ ನಾಡು, ನುಡಿ, ಭಾಷೆ, ಬೆಳವಣಿಗೆ, ಕನ್ನಡದ ಅಸ್ಮಿತೆ, ಕನ್ನಡ ಭಾಷೆಯ ಪ್ರಚಾರಕ್ಕೆ ಕೈಗೊಳ್ಳಬೇಕಾದ ಇಂದಿನ ತುರ್ತು ಅವಶ್ಯಕತೆಗಳು ಸೇರಿದಂತೆ ಹಲವಾರು ಮಹತ್ವದ ವಿಷಯಗಳ ಕುರಿತು ಬಸವರಾಜ ಹೊರಟ್ಟಿ ಅವರು ತಮ್ಮ ನಾಲ್ಕು ದಶಗಳಿಗಿಂತಲೂ ಹೆಚ್ಚು ಕಾಲದ ಅನುಭವ, ವಿಚಾರಗಳನ್ನು ಹಂಚಿಕೊಳ್ಳಲಿದ್ದಾರೆ.

ಅಕ್ಕ ಸಮ್ಮೇಳನದಲ್ಲಿ ಪಾಲ್ಗೊಳ್ಳಲು ಆಗಸ್ಟ್ 28ರ ರಾತ್ರಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ಅಮೇರಿಕಾದ ವರ್ಜೀನಿಯಾ ರಾಜ್ಯದ ರಿಚ್ಮಂಡ್ ನಗರಕ್ಕೆ ಪ್ರಯಾಣ ಬೆಳೆಸಲಿದ್ದಾರೆ. ಕರ್ನಾಟಕದ ಹೊರಗಡೆಯಿಂದ ನಡೆಯುತ್ತಿರುವ ಅತಿದೊಡ್ಡ ಕನ್ನಡದ ಉತ್ಸವ ಎಂದೇ ಪರಿಗಣಿಸಲಾಗುವ ಅಕ್ಕ ವಿಶ್ವ ಕನ್ನಡ ಸಮ್ಮೇಳನ ಈ ಬಾರಿ, ಅಮೇರಿಕಾದ ರಾಜಧಾನಿ ವಾಷಿಂಗ್ಟನ್ ಡಿಸಿ ಇಂದ ದಕ್ಷಿಣಾಭಿಮುಖವಾಗಿ ಸುಮಾರು 110 ಮೈಲು ದೂರದಲ್ಲಿರುವ ವರ್ಜೀನಿಯಾ ರಾಜ್ಯದ ರಾಜಧಾನಿಯಾಗಿರುವ ರಿಚ್ಮಂಡ್ ನಗರದಲ್ಲಿ ನಡೆಯಲಿದ್ದು, ಸುಮಾರು 5 ಸಾವಿರಕ್ಕೂ ಹೆಚ್ಚು ಕನ್ನಡಿಗರು ಒಂದೇ ಸೂರಿನಡಿಯಲ್ಲಿ ಸೇರುತ್ತಿರುವುದು ವಿಶೇಷವಾಗಿದೆ. ಸಮ್ಮೇಳನದಲ್ಲಿ ಕನ್ನಡ ನಾಡು, ನುಡಿ, ರಕ್ಷಣೆ ಕುರಿತು ವಿವಿಧ ಗೋಷ್ಠಿಗಳು, ಚಿಂತನ-ಮಂಥನ, ಸಂವಾದಗಳು ಜರುಗಲಿದ್ದು, ಅತ್ಯುತ್ತಮ ಮನರಂಜನಾ ಕಾರ್ಯಕ್ರಮಗಳನ್ನು ಸಹ ಆಯೋಜಿಸಲಾಗಿದೆ. ಕರ್ನಾಟಕದ ವಿವಿಧ ಬಗೆಯ ರುಚಿಕರ ತಿಂಡಿ-ತಿನಿಸುಗಳು, ವಿವಿಧ ವಾಣಿಜ್ಯ ಮತ್ತು ವ್ಯಾಪಾರ ಮೇಳ ಹಾಗೂ ಮಳಿಗೆಗಳು, ಕಲೆ ಮತ್ತು ಸಾಹಿತ್ಯಿಕ ವೇದಿಕೆಗಳು, ಮಹಿಳಾ ವೇದಿಕೆ, ಯುವ ವೇದಿಕೆ, ವಿದ್ಯಾ ಸಂಸ್ಥೆಗಳ ಹಳೇ ವಿದ್ಯಾರ್ಥಿಗಳ ಮಹಾಸಂಗಮ, ವಿವಿಧ ಕ್ರೀಡಾಕೂಟಗಳು, ಆರೋಗ್ಯ ಮತ್ತು ಅಧ್ಯಾತ್ಮಿಕ ವೇದಿಕೆಗಳು ಸೇರಿದಂತೆ ಹತ್ತು ಹಲವು ಕಾರ್ಯಕ್ರಮಗಳು ಈ ಬಾರಿಯ ಅಕ್ಕ ಸಮ್ಮೇಳನದ ವಿಶೇಷ ಆಕರ್ಷಣೆಗಳಾಗಿವೆ.

## ಪೋಕ್ಸೋ ಆರೋಪಿಗೆ 20 ವರ್ಷಗಳ ಕಠಿಣ ಸಜಾ



**ಮೈಸೂರು:** ಸಾಲಿಗ್ರಾಮ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಬರುವ ಹಲಗೆ ಗೌಡನ ಕೊಪ್ಪಲು ಗ್ರಾಮದ ವಾಸಿ ಚಿತ್ರ ಕೋಂ ಮಹಾದೇವ ಅವರ ಅಪ್ರಪ್ತ ವಯಸ್ಸಿನ ಬಾಲಕಿ ಭಾವನ (ಹೆಸರನ್ನು ಬದಲಾಯಿಸಲಾಗಿದೆ) ಹಾಡ್ಯ ಗ್ರಾಮದ ಜೆಎಸ್ಎಸ್ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿದ್ದಾಗ ಅದೇ ಗ್ರಾಮದ ವಾಸಿ ಧರ್ಮ ಬಿನ್ ಸೋಮೇಗೌಡ ಎಂಬುವನು ಅಪ್ರಾಪ್ತ ಭಾವನಳನ್ನು ಪರಿಚಯ ಮಾಡಿಕೊಂಡು ಪ್ರೀತಿಸುವುದಾಗಿ ಮತ್ತು ಮದುವೆ ಮಾಡಿಕೊಳ್ಳುವುದಾಗಿ ನಂಬಿಸಿ ಪುಸಲೈಸಿ ದಿನಾಂಕ 18-01-2023 ರಂದು ಮನೆಯಲ್ಲಿ ಯಾರೂ ಇಲ್ಲದಿರುವಾಗ ಆರೋಪಿ ಧರ್ಮನು ಬಾಲಕಿಯನ್ನು ತನ್ನ ಮನೆಗೆ ಕರೆದುಕೊಂಡು ಹೋಗಿ ಬಲವಂತವಾಗಿ ಲೈಂಗಿಕ ಸಂಪರ್ಕ ಮಾಡಿದ್ದು, ನಂತರದ ದಿನಗಳಲ್ಲಿಯೂ ಸಹ ಲೈಂಗಿಕ ಸಂಪರ್ಕ ಮಾಡಿರುತ್ತಾನೆ. ಇದರ ಪರಿಣಾಮವಾಗಿ ಬಾಲಕಿಯು ಗರ್ಭಿಣಿಯಾಗಿ ದಿನಾಂಕ 18-10-2024 ರಂದು ಚೆಲುವಾಂಬ ಆಸ್ಪತ್ರೆಯಲ್ಲಿ ಒಂದು ಗಂಡು ಮಗುವಿಗೆ ಜನನ ನೀಡಿರುತ್ತಾಳೆ. ಈ ಬಗ್ಗೆ ಬಾಲಕಿಯ ಹೇಳಿಕೆ ದೂರನ್ನು ದಾಖಲಿಸಿ ಕೊಂಡು ತನಿಖೆ ನಡೆಸಿದ ಸಾಲಿಗ್ರಾಮ ಪೊಲೀಸ್ ಠಾಣೆಯ ಪೊಲೀಸ್ ನಿರೀಕ್ಷಕರಾದ ಕೃಷ್ಣರಾಜುರವರು ಆರೋಪಿಯ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸಿದ್ದರು. ಪ್ರಕರಣದ ವಿಚಾರಣೆಯನ್ನು ನಡೆಸಿದ ಪೋಕ್ಸೋ ವಿಶೇಷ ನ್ಯಾಯಾಲಯದ ನ್ಯಾಯಾಧೀಶರಾದ ಶ್ರೀ ಆನಂದ್ ಹೊಗಾಡೆರವರು ಆರೋಪಿಯ ವಿರುದ್ಧ ಆರೋಪ ಸಾಬೀತಾಗಿದೆ ಎಂದು ತಿಳಿಸಿ ದಿನಾಂಕ:27/8/ 2024 ರಂದು ಆರೋಪಿಗೆ ಪೋಕ್ಸೋ ಕಾಯ್ದೆ ಅಡಿಯಲ್ಲಿನ ಅಪರಾಧಗಳಿಗೆ 20 ವರ್ಷಗಳ ಕಠಿಣ ಸಜಾ ಹಾಗೂ ರೂ 50 ಸಾವಿರ ದಂಡವನ್ನು ವಿಧಿಸಿದ್ದು, ದಂಡದ ಪೂರ್ತಿ ಹಣವನ್ನು ಪರಿಹಾರದ ರೂಪದಲ್ಲಿ ನೊಂದ ಬಾಲಕಿಗೆ ನೀಡಬೇಕೆಂದು ತೀರ್ಪು ನೀಡಿದೆ ಎಂದು ಪೋಕ್ಸೋ ವಿಶೇಷ ನ್ಯಾಯಾಲಯದ ವಿಶೇಷ ಸರ್ಕಾರಿ ಅಭಿಯೋಜಕರಾದ ಕೆ.ಬಿ ಜಯಂತಿ ತಿಳಿಸಿದ್ದಾರೆ.

## ವಿದ್ಯುತ್ ಲಿಲೋ ನಿರ್ಮಾಣದ ಮಾರ್ಗಕ್ಕೆ ಚಾಲನೆ

**ಮೈಸೂರು:** ಕೆ.ಆರ್ ತಾಲ್ಲೂಕಿನ ಮಾರಗೌಡನಹಳ್ಳಿ ಗ್ರಾಮದಲ್ಲಿ ಕೆ.ವಿ. ವಿದ್ಯುತ್ ಉಪ-ಕೇಂದ್ರಕ್ಕೆ ಹಾಲಿ ಇರುವ ಚುಂಚನಕಟ್ಟೆ-ಕೆ.ಆರ್ ನಗರ ಮಾರ್ಗದಿಂದ ಸುಮಾರು 6.195 ಕಿ.ಮೀ ವಿದ್ಯುತ್ ಲಿಲೋ ನಿರ್ಮಾಣದ ಮಾರ್ಗವನ್ನು ಸೆಪ್ಟೆಂಬರ್ 03 ಅಥವಾ ನಂತರ ದಿನದಂದು ಚಾಲನೆಗೊಳಿಸಲು ಉದ್ದೇಶಿಸಲಾಗಿದೆ.

ವಿದ್ಯುತ್ ಮಾರ್ಗವು ಸುಮಾರು 6.195 ಕಿ.ಮೀ ವರೆಗೆ ವಿಸ್ತಾರಗೊಂಡಿದ್ದು, ಹಾಲಿ ಇರುವ ಚುಂಚನಕಟ್ಟೆ-ಕೆ.ಆರ್ ನಗರ ವಿದ್ಯುತ್ ಮಾರ್ಗದಿಂದ ಸಂಪರ್ಕಗೊಂಡು ಸಿದ್ದಾಪುರ, ಕೆಂಚುಗಾರನಕೊಪ್ಪಲು, ಕೆಸ್ತೂರು. ಮಳಲ್ಲಿ, ಮಾವತ್ತೂರು ಮತ್ತು ಮಾರಗೌಡನಹಳ್ಳಿ ಗ್ರಾಮಗಳ ಎಲ್ಲೆಯಲ್ಲಿ ಹಾದು ಹೋಗಿ ನೂತನವಾಗಿ ನಿರ್ಮಾಣವಾಗಿರುವ ಮಾರಗೌಡನಹಳ್ಳಿ ವಿದ್ಯುತ್ ವಿತರಣಾ ಕೇಂದ್ರಕ್ಕೆ ಪ್ರವಹಿಸುತ್ತದೆ.

ಆದ್ದರಿಂದ ಸಾರ್ವಜನಿಕರು ಗೋಪುರಗಳಿಗೆ ದನಕರುಗಳನ್ನು ಕಟ್ಟುವುದು, ಲೋಹದ ಪಟ್ಟಿಯನ್ನು ತೆಗೆಯುವುದು, ಗೋಪುರಗಳನ್ನು ಹತ್ತುವುದು, ತಂತಿಗಳನ್ನು ಮುಟ್ಟುವುದು, ಗೋಪುರಗಳ ಕೆಳಗಡೆ ಮರಗಿಡಗಳನ್ನು ನೆಡುವುದು, ಗೋಪುರಗಳಿಗೆ ಬಳ್ಳಿ ಮತ್ತು ಹಗ್ಗ ಮುಂತಾದುವುಗಳನ್ನು ಎಸೆಯುವುದು ಹಾಗೂ ಗಾಳಿಪಟವನ್ನು ಗೋಪುರದ ಹತ್ತಿರ ಹಾರಿಸುವುದು ತುಂಬಾ ಅಪಾಯಕಾರಿಯಾಗಿ ಹಾಗೂ ಪ್ರಾಣ ಹಾನಿಯಾಗುತ್ತದೆ. ಈ ಸೂಚನೆಯನ್ನು ಉಲ್ಲಂಘಿಸಿದಲ್ಲಿ ಯಾವುದೇ ತರಹದ ಅಪಘಾತ ಅಥವಾ ಪ್ರಾಣ ಹಾನಿಗೆ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ ಜವಾಬ್ದಾರರಲ್ಲ ಎಂದು ಕವಿಪ್ರನಿನಿ ನ ಬೃಹತ್ ಕಾಮಗಾರಿ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


**ಪೌರಾಡಳಿತ ನಿರ್ದೇಶನಾಲಯ**

9ನೇ ಮಹಡಿ, ವಿಶ್ವೇಶ್ವರಯ್ಯ ಗೋಪುರ, ಡಾ॥ ಅಂಬೇಡ್ಕರ್ ವೀಧಿ, ಬೆಂಗಳೂರು-560001.
ದೂ.ಸಂ.080- 22866302/22867172,
ಇ-ಮೇಲ್: dmablr@gmail.com ವೆಬ್‌ಸೈಟ್: www.municipaladmn.gov.in

ಸಂಖ್ಯೆ: 119374/DMA/SWM/NGT/16/2023 ದಿನಾಂಕ: 27.08.2024

**ಟೆಂಡರ್ ಪ್ರಕಟಣೆ**

ಅಧೀಕ್ಷಕ ಅಭಿಯಂತರರುರವರು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ ಬೆಂಗಳೂರುರವರ ಪರವಾಗಿ, ಸಕ್ಷಮ ಪ್ರಾಧಿಕಾರದಲ್ಲಿ ನೊಂದಾಯಿತ Original Equipment Manufatures(OEMs)/Authorized Dealer/OEM Dealer having Consortium ರವರಿಂದ ದ್ವಿ-ಲಕೋಟೆ ಪದ್ಧತಿಯಲ್ಲಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್(ಕೆಪಿಪಿಪಿ) ಮೂಲಕ ಕೆಟಿಪಿಪಿ ಕಾಯ್ದೆ 1999 ಮತ್ತು ನಿಯಮ 2000ರ ಪ್ರಕಾರ, ಕೆ/ಜಿ-2 ದಸ್ತಾವೇಜಿನಲ್ಲಿ ಟೆಂಡರ್ ಅಹ್ವಾನಿಸಲಾಗಿದ್ದು, ವಿವರಗಳು ಈ ಕೆಳಕಂಡಂತಿವೆ.

| ಕ್ರ ಸಂ | ಕಾಮಗಾರಿಯ ಇಂಡೆಂಟ್ ಸಂಖ್ಯೆ | ಟೆಂಡರ್‌ಗಿಟ್ಟ ಮೊತ್ತ ರೂ.ಲಕ್ಷಗಳಲ್ಲಿ | ಇ.ಎಂ.ಡಿ ಮೊತ್ತ ರೂ.ಲಕ್ಷಗಳಲ್ಲಿ | ವಾಹನಗಳನ್ನು ಸರಬರಾಜು ಮಾಡಲು ನಿಗಧಿಪಡಿಸಿರುವ ಕಾಲಾವಧಿ |
|---|---|---|---|---|
| 1 | DMA/2024-25/IND2005 (ಪ್ಯಾಕೇಜ್ ಸಂಖ್ಯೆ.01) | 550.00 | 8.25 | 90 ದಿನಗಳು |
| 2 | DMA/2024-25/IND2006 (ಪ್ಯಾಕೇಜ್ ಸಂಖ್ಯೆ.02) | 825.00 | 12.375 | |
| 3 | DMA/2024-25/IND2007 (ಪ್ಯಾಕೇಜ್ ಸಂಖ್ಯೆ.03) | 1250.00 | 15.00 | |
| 4 | DMA/2024-25/IND3206 (ಪ್ಯಾಕೇಜ್ ಸಂಖ್ಯೆ.04) | 1050.00 | 15.00 | |

ಆಸಕ್ತ ಗುತ್ತಿಗೆದಾರರು ಟೆಂಡರನ್ನು ಎಲೆಕ್ಟ್ರಾನಿಕ್ ಕೆಪಿಪಿಪಿ ಪೋರ್ಟಲ್ ಮೂಲಕವೇ ಸಲ್ಲಿಸಬೇಕಾಗಿದ್ದು, ಮುಂಗಡ ಠೇವಣಿ ಮತ್ತು ಪ್ರೊಸೆಸ್ಸಿಂಗ್ ಫೀನ್ನು ಕೆಪಿಪಿಪಿ ಪೋರ್ಟಲ್ ಮೂಲಕ ಮಾತ್ರ ಸಲ್ಲಿಸಬೇಕಿರುತ್ತದೆ ಹಾಗೂ ಟೆಂಡರ್ ಡಾಕ್ಯುಮೆಂಟ್‌ಗಳನ್ನು ವೆಬ್ ಸೈಟ್ **https://kppp.karnataka.gov.in** ಮೂಲಕ **ದಿನಾಂಕ: 27.08.2024** ರಿಂದ **27.09.2024ರವರೆಗೆ** ಪಡೆಯಬಹುದು (Available for download), ಪ್ರೀ ಬಿಡ್ ಮೀಟಿಂಗ್ ನಡೆಯುವ **ದಿನಾಂಕ: 11.09.2024, ಬೆಳಿಗ್ಗೆ 11.00 ಗಂಟೆಗೆ** ಸ್ಥಳ:- 9ನೇ ಮಹಡಿ ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು, ಟೆಂಡರ್ ಸಲ್ಲಿಸುವ ಅಂತಿಮ **ದಿನಾಂಕ: 27.09.2024 ಸಂಜೆ 05.00 ಗಂಟೆಯವರೆಗೆ,** ತಾಂತ್ರಿಕ ಬಿಡ್‌ನ್ನು ತೆರೆಯುವ **ದಿನಾಂಕ: 30.09.2024, ಬೆಳಿಗ್ಗೆ 11.00** ಗಂಟೆಯ ನಂತರ, ತಾಂತ್ರಿಕ ಬಿಡ್ ಅನುಮೋದನೆಗೊಂಡ ತದನಂತರ ಆರ್ಥಿಕ ಬಿಡ್‌ನ್ನು ತೆರೆಯಲಾಗುವುದು, ಮೇಲಿನ ಟೆಂಡರ್ ನಿಯಮ ಮತ್ತು ವೇಳಾ ಪಟ್ಟಿಯಲ್ಲಿ ಯಾವುದೇ ಬದಲಾವಣೆಯನ್ನು ಇ-ಪ್ರೊಕ್ಯೂರ್‌ಮೆಂಟ್ ಮೂಲಕ ಮಾತ್ರ ತಿಳಿಸಲಾಗುವುದು ಮತ್ತು ಯಾವುದೇ ವಾರ್ತಾ/ಸುದ್ದಿ ಪತ್ರಿಕೆಯಲ್ಲಿ ಪ್ರಕಟಿಸಲಾಗುವುದಿಲ್ಲ.

ಸಹಿ/-
ಅಧೀಕ್ಷಕ ಅಭಿಯಂತರರು,
ಪೌರಾಡಳಿತ ನಿರ್ದೇಶನಾಲಯ, ಬೆಂಗಳೂರು

ವಾಸಾಸಂಇ/ವಾ.ಪ್ರ/1715/ಶಿರಡಿ ಸಾಯಿ/2024-25

## ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ಕೃಷಿ ಯಂತ್ರೋಪಕರಣಗಳನ್ನು ರೈತರಿಗೆ ಬಾಡಿಗೆ ಆಧಾರದಲ್ಲಿ ಒದಗಿಸಲು ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ವೈಯಕ್ತಿಕ ಫಲಾನುಭವಿ, ಸಂಘ-ಸಂಸ್ಥೆಗಳು (ಚಾಲ್ತಿಯಲ್ಲಿರುವ ಕೃಷಿ ಯಂತ್ರಧಾರೆ ಕೇಂದ್ರಗಳು, ಸೇವಾದಾರ ಸಂಸ್ಥೆಗಳು, ಕೃಷಿ ಯಂತ್ರೋಪಕರಣಗಳ ಬ್ಯಾಂಕ್ ಹಾಗೂ ನೊಂದಾಯಿತ ಸಂಘ-ಸಂಸ್ಥೆಗಳು.) ಗಳಿಗೆ ಅವಕಾಶವಿರುತ್ತದೆ. ಹೈಟೆಕ್ ಹಾರ್ವೆಸ್ಟರ್ ಹಬ್ ಯೋಜನೆಯಡಿ ಕಡ್ಡಾಯವಾಗಿ ಕಂಬೈನ್ಡ್ ಹಾರ್ವೆಸ್ಟರ್, ಟ್ರಾಕ್ಟರ್ ಚಾಲಿತ ಬೇಲರ್ ಕಡ್ಡಾಯವಾಗಿದ್ದು, ಇತರೆ ಕೃಷಿ ಯಂತ್ರೋಪಕರಣಗಳನ್ನು ಹಬ್ನಲ್ಲಿ ಪಡೆಯಲು ಅವಕಾಶವಿರುತ್ತದೆ. ವೈಯಕ್ತಿಕ ಫಲಾನುಭವಿ (ಸಾಮಾನ್ಯ-ಶೇ. 50 ರಸಹಾಯಧನ), ಸಂಘ-ಸಂಸ್ಥೆಗಳು (ಸಾಮಾನ್ಯ-ಶೇ. 70 ರಸಹಾಯಧನ), ಹಾಗೂ ವೈಯಕ್ತಿಕ ಫಲಾನುಭವಿ (ವಿಶೇಷ ಘಟಕ ಯೋಜನೆಶೇ.70ರ ಸಹಾಯಧನ) ದಲ್ಲಿ ಹೈಟೆಕ್ ಹಾರ್ವೆಸ್ಟರ್ ಹಬ್ ಸ್ಥಾಪಿಸಲು ಈ ಯೋಜನೆಯಡಿ ಅವಕಾಶವಿರುತ್ತದೆ. 2024-25ನೇ ಸಾಲಿಗೆ ಕೋಲಾರ ಜಿಲ್ಲೆಗೆ ಸಾಮಾನ್ಯ ವರ್ಗದಡಿ ಒಂದು (01)ವೈಯಕ್ತಿಕ ಫಲಾನುಭವಿ (ರೂ.40.00 ಲಕ್ಷ ಗರಿಷ್ಟ ಸಹಾಯಧನ) ಹಾಗೂ ವಿಶೇ? ಘಟಕ ಯೋಜನೆ (ಖಅಕ) ವರ್ಗದಡಿ ಒಂದು (01) ವೈಯಕ್ತಿಕ ಫಲಾನುಭವಿ (ರೂ.50.00 ಲಕ್ಷ ಗರಿಷ್ಟ ಸಹಾಯಧನ) ಪಡೆಯಲು ಈ ಯೋಜನೆಯಡಿ ಅವಕಾಶವಿರುತ್ತದೆ ಮತ್ತು ಅರ್ಜಿಯನ್ನು ಸೆಪ್ಟೆಂಬರ್ 17 ರೊಳಗೆ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಸಲ್ಲಿಸಬಹುದು. ಈ ಯೋಜನೆಯನ್ನು ಸದುಪಯೋಗ ಮಾಡಿಕೊಳ್ಳಲು ಆಸಕ್ತರು ಹತ್ತಿರದ ರೈತ ಸಂಪರ್ಕ ಕೇಂದ್ರ, ಹಾಗೂ ಸಹಾಯಕ ಕೃಷಿ ನಿರ್ದೇಶಕರ ಕಛೇರಿಯನ್ನು ಭೇಟಿ ನೀಡಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಬಂಗಾರಪೇಟೆ ಪುರಸಭೆ ವ್ಯಾಪ್ತಿಯಲ್ಲಿ ನೈಜ ಮ್ಯಾನ್ಯುಯಲ್ ಸ್ಕ್ಯಾವೆಂಜರ್‌ಗಳ ಸಮೀಕ್ಷೆ ಮಾಡಿ ಕೇಂದ್ರ ಸರ್ಕಾರ ತಂತ್ರಾಂಶ ನಮಸ್ತೆ ಆನ್‌ಲೈನ್ ಪೋರ್ಟಲ್‌ನಲ್ಲಿ ಅಪ್ ಲೋಡ್ ಮಾಡಲು ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ವೃತ್ತಿಯಲ್ಲಿ ನಿರತ ವ್ಯಕ್ತಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಪುರಸಭೆಯ ವ್ಯಾಪ್ತಿಯಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ವೃತ್ತಿ ಮಾಡುತ್ತಿರುವಂತಹ ನೈಜ ಫಲಾನುಭವಿಗಳು ಕಛೇರಿಗೆ ಸೆಪ್ಟೆಂಬರ್ 05 ರೊಳಗೆ ಕಛೇರಿ ಸಮಯ ಬೆಳಿಗ್ಗೆ 10 ರಿಂದ ಸಂಜೆ 5.00 ಗಂಟೆಯೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಪುರಸಭೆ ಬಂಗಾರಪೇಟೆ ಆರೋಗ್ಯ ಶಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಕೋಲಾರ ಜಿಲ್ಲೆಯ ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕ/ಬಾಲಕಿಯರ ವಿದ್ಯಾರ್ಥಿನಿಲಯಗಳಾದ ಕೋಲಾರ, ಬಂಗಾರಪೇಟೆ, ಮಾಲೂರು ಮತ್ತು ಮುಳಬಾಗಿಲು ತಾಲ್ಲೂಕುಗಳಲ್ಲಿನ ವಿದ್ಯಾರ್ಥಿನಿಲಯಗಳಿಗೆ ಸಾಮಾನ್ಯ ಪದವಿ ಮಟ್ಟದ ಕೋರ್ಸುಗಳ ವಿದ್ಯಾರ್ಥಿಗಳಿಗೆ ಮಾತ್ರ ರಾಜ್ಯ ವಿದ್ಯಾರ್ಥಿನಿಲಯ (ಎಸ್.ಹೆಚ್,ಪಿ) ತಂತ್ರಾಂಶದ ಮೂಲಕ ಆನ್ ಲೈನ್‌ನಲ್ಲಿ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಮತೀಯ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಶೇ.75 ರಷ್ಟು (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಸಿಖ್, ಬೌದ್ಧ ಮತ್ತು ಪಾರ್ಸಿ) ಹಾಗೂ ಶೇ.25 ರಷ್ಟು ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮೀಸಲಾಗಿರುತ್ತದೆ. ವಿದ್ಯಾರ್ಥಿಗಳು ಅರ್ಜಿಗಳನ್ನು ಸಲ್ಲಿಸಲು ರಾಜ್ಯದ ನಿವಾಸಿಯಾಗಿರಬೇಕು, ಹಿಂದಿನ ವರ್ಷದ ತರಗತಿಯಲ್ಲಿ ವಾರ್ಷಿಕ ಅಥವಾ ಸೆಮಿಸ್ಟರ್‌ನಲ್ಲಿ ಎಲ್ಲಾ ವಿಷಯದಲ್ಲಿ ಉತ್ತೀರ್ಣರಾಗಿರಬೇಕು, ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯವು ರೂ. 2.50 ಲಕ್ಷ ಮೀರಿರಬಾರದು, ಮೂಲಪ್ರತಿಯನ್ನು ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವ ಕಾಲೇಜಿನ ಪ್ರಾಂಶುಪಾಲರಿಂದ ದೃಢೀಕರಿಸಿ, ಆದಾಯ ಪ್ರಮಾಣ ಪತ್ರ ಹಿಂದಿನ ವರ್ಷದ ಅಂಕಪಟ್ಟಿ, ಆಧಾರ್ ಕಾರ್ಡ್, ಇತರೆ ದಾಖಲೆಗಳನ್ನು ಸಲ್ಲಿಸುವುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಅಧಿಕಾರಿಗಳ ಕಾರ್ಯಾಲಯ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ನೆಲ ಮಹಡಿ, ಮೌಲಾನಾ ಆಜಾದ್ ಭವನ, ಶ್ರೀ ದೇವರಾಜ್ ಅರಸು ಬಡಾವಣೆ, 2ನೇ ಬ್ಲಾಕ್, ಟಮಕ ವಾರ್ಡ್ ನಂ.1, ಕೋಲಾರ ದೂರವಾಣಿ : 08152-295257 ಅನ್ನು ಸಂಪರ್ಕಿಸಬಹುದೆಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಬೆಂಗಳೂರು:** 2024 - 25 ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಹಾಗೂ ಅಲೆಮಾರಿ/ಅರೆಅಲೆಮಾರಿ ಪ್ರವರ್ಗ -1 ರ ವಿದ್ಯಾರ್ಥಿಗಳಿಂದ ಪಿಯುಸಿ ಸಮಾನಾಂತರ, ಸಾಮಾನ್ಯ ಪದವಿ ಮತ್ತು ಸಂಯೋಜಿತ ಉಭಯ ಪದವಿ ಕೋರ್ಸ್ ಗಳಿಗೆ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ,ಶುಲ್ಕ ವಿನಾಯಿತಿ, ವಿದ್ಯಾಸಿರಿ, ಊಟ ಮತ್ತು ವಸತಿ ಸಹಾಯ ಯೋಜನೆ ಸೌಲಭ್ಯಕ್ಕಾಗಿ ಆನ್ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು ದಿನಾಂಕ15-9-2024 ರ ಒಳಗಾಗಿ ಅರ್ಜಿಗಳನ್ನು ಸಲ್ಲಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಕೃಷ್ಣೇಗೌಡ ಹೊಸಹಳ್ಳಿ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದರು.

## ವಿದ್ಯಾರ್ಥಿಗಳಿಗೆ ಮ್ಯಾಟ್ ವಿತರಣೆ

**ಪಿರಿಯಾಪಟ್ಟಣ:** ಡಾಕ್ಟರ್ ಬಿ.ಆರ್ ಅಂಬೇಡ್ಕರ್ ವಸತಿ ನಿಲಯದ ವಿದ್ಯಾರ್ಥಿಗಳಿಗೆ ರೋಟರಿ ಮಿಡ್ ಟೌನ್ ಪಿರಿಯಾಪಟ್ಟಣದ ವತಿಯಿಂದ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಮ್ಯಾಟ್ ಗಳನ್ನು ವಿತರಿಸಲಾಯಿತು. ಈ ಸಂದರ್ಭದಲ್ಲಿ ರೋಟರಿ ಮಿಟ್ ಟೌನ್ ಅಧ್ಯಕ್ಷ ಎಂ.ಎಂ ರಾಜೇಗೌಡ , ಕಾರ್ಯದರ್ಶಿ ಐಪಿ ಹೆಗಡೆ ,ಹಿರಿಯ ಸದಸ್ಯರಾದ ವಕೀಲ ಬಿ.ವಿ.ಜವರೇಗೌಡ , ಹರೀಶ್ ಆರೋಗ್ಯ ನಿರೀಕ್ಷಕ ಕೆಎಸ್ ಪ್ರಕಾಶ್ , ವಿದ್ಯಾರ್ಥಿ ನಿಲಯದ ಪ್ರಾಂಶುಪಾಲ ಜಯಕುಮಾರ್ ಹಾಜರಿದ್ದರು



ಬೆಂಗಳೂರಿನ ಚಾಮಮರಾಜಪೇಟೆಯ ಪಂಡಿತ್ ಜವಹರಲಾಲ್ ನೆಹರು ಮೆಮೊರಿಯಲ್ ಶಾಲೆಯಲ್ಲಿ ಕೃಷ್ಣಜನ್ಮಾಷ್ಟಮಿ ನಿಮಿತ್ತ ಚಿಣ್ಣರು ವಿವಿಧ ಬಗೆಯ ವೇಷಧರಿಸಿ ಸಂಭ್ರಮಿಸಿದರು.

## ಸೆ.15 ರಂದು ಬೃಹತ್ ಮಾನವ ಸರಪಳಿ ನಿರ್ಮಿಸಿ ಪ್ರಜಾಪ್ರಭುತ್ವ ದಿನ ಆಚರಿಸಲು ಡಿಸಿ ಸೂಚನೆ

**ಚಿಕ್ಕಬಳ್ಳಾಪುರ:** ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಜಿಲ್ಲೆಯಲ್ಲಿ ಬೃಹತ್ ಮಾನವ ಸರಪಳಿ ನಿರ್ಮಿಸಿ ಅರ್ಥಪೂರ್ಣವಾಗಿ ಆಚರಣೆ ಮಾಡಲು ಸರ್ಕಾರದ ಸೂಚನೆ ಇದೆ. ಅದರಂತೆ ಸೂಕ್ತ ಸಿದ್ದತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ಅವರು ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸೂಚನೆ ನೀಡಿದರು.ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್. ಎಂ.ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಡೆದ ''ಪ್ರಗತಿ ಪರಿಶೀಲನಾ ಸಭೆ''ಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೀದರ್ ನಿಂದ ಚಾಮರಾಜನಗರದ ವರೆಗೆ ಬೃಹತ್ ಮಾನವ ಸರಪಳಿಯನ್ನು ನಿರ್ಮಿಸಿ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆಯನ್ನು ಸೆಪ್ಟೆಂಬರ್ 15 ರಂದು ಬೆಳಿಗ್ಗೆ 8:30 ರಿಂದ 10:30ರ ಸಮಯದಲ್ಲಿ ರಾಜ್ಯದಾದ್ಯಂತ ಏಕ ಕಾಲಕ್ಕೆ ಆಚರಣೆ ಮಾಡಲು ಸರ್ಕಾರದ ನಿರ್ದೇಶನವಿದೆ. ಅದರಂತೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿಯೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗಡಿಯಿಂದ ಕೋಲಾರ ಜಿಲ್ಲೆಯ ಗಡಿಯವರೆಗೆ ಒಟ್ಟು 65 ಕಿಲೋ ಮೀಟರ್ ಉದ್ದದ ಮಾನವ ಸರಪಳಿಯನ್ನು ನಿರ್ಮಿಸಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಣೆ ಮಾಡಬೇಕಾಗಿದೆ. ಸಾರ್ವಜನಿಕರು, ಶಾಲಾ ಕಾಲೇಜು ವಿದ್ಯಾರ್ಥಿಗಳು, ಸರ್ಕಾರೇತರ ಸಂಸ್ಥೆಗಳು, ಸ್ವ-ಸಹಾಯ ಸಂಘಗಳ ಸದಸ್ಯರು ಪದಾಧಿಕಾರಿಗಳೆಲ್ಲರ ಸಹಕಾರ ಪಡೆದು ಆಚರಣೆ ಮಾಡಲು ಎಲ್ಲಾ ಇಲಾಖೆಗಳು ಸಮನ್ವಯ, ಸಹಕಾರದೊಂದಿಗೆ ಕಾರ್ಯ ನಿರ್ವಹಿಸಬೇಕು. ಅದಕ್ಕೆ ಬೇಕಾದ ಎಲ್ಲಾ ಸಿದ್ದತೆಗಳನ್ನು ಈಗಿನಿಂದಲೇ ಕೈಗೊಳ್ಳಬೇಕೆಂದು ಕಟ್ಟುನಿಟ್ಟಿನ ಸೂಚನೆಗಳನ್ನು ಜಿಲ್ಲಾಧಿಕಾರಿಗಳು ನೀಡಿದರು. ಜನವರಿಯಿಂದ ಈವರೆಗೆ ಜಿಲ್ಲೆಯಲ್ಲಿ 271 ಡೆಂಗ್ಯು ಪ್ರಕರಣಗಳು ದಾಖಲಾಗಿವೆ. ಜುಲೈ ಮಾಹೆಯಲ್ಲಿ 120 ಡೆಂಗ್ಯು ಪ್ರಕರಣಗಳು ದಾಖಲಾಗಿದ್ದವು. ಆಗಸ್ಟ್ ಮಾಹೆಯಲ್ಲಿ 57 ಪ್ರಕರಣಗಳು ದಾಖಲಾಗಿವೆ. ಶೇ. 50 ರಷ್ಟು ಪ್ರಮಾಣದಲ್ಲಿ ಪ್ರಕರಣಗಳು ಇಳಿಕೆಯಾಗಿದ್ದರೂ ಕೂಡ ಗ್ರಾಮಾಂತರ ಪ್ರದೇಶಗಳಲ್ಲಿಯೇ ಶೇ. 79 ರಷ್ಟು ಪ್ರಕರಣಗಳು ವರದಿಯಾಗುತ್ತಿವೆ. ಪ್ರಕರಣಗಳು ಇಳಿಕೆ ಯಾಗುತ್ತಿವೆ ಎಂದು ನಿರ್ಲಕ್ಷ್ಯ ದೋರಣೆ ತೋರಬೇಡಿ. ಎಂದಿನಂತೆ ಡೆಂಗ್ಯು ನಿಯಂತ್ರಣಕ್ಕೆ ಕೈಗೊಳ್ಳುತ್ತಿರುವ ಮುನ್ನೆಚ್ಚರಿಕೆ ಕ್ರಮಗಳನ್ನು ಮುಂದುವರೆಸಲು ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ತಿಳಿಸಿದರು. ಗ್ರಾಮ ಮತ್ತು ವಾರ್ಡ್ ಮಟ್ಟದಲ್ಲಿ ಕುಡಿಯುವ ನೀರಿನ ಪೂರೈಕೆಗೆ ಎಂದಿನಂತೆ ಕ್ರಮವಹಿಸಬೇಕು. ಜೂನ್-2024ರ ಮಾಹೆಯವರೆಗೆ ಖಾಸಗಿ ಕೊಳವೆಬಾವಿಗಳಿಂದ ನೀರು ಖರೀದಿಸಿರುವುದನ್ನು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅನುದಾನದಿಂದ ಪಾವತಿಸುವುದು. ಜುಲೈ ಮಾಹೆಯ ನಂತರ ಬಿಲ್ಲುಗಳನ್ನು ಸ್ಥಳೀಯಾಡಳಿದಿಂದ ಸೃಜನೆಯಾಗುವ ಅನುದಾನದಿಂದ ಪಾವತಿಸಲು ಕ್ರಮವಹಿಸಬೇಕು. ಕುಡಿಯುವ ನೀರಿನ ಪೂರೈಕೆಯಲ್ಲಿ ವ್ಯತ್ಯಯ ಆಗದಂತೆ ಕ್ರಮ ವಹಿಸಲು ಸೂಚನೆ ನೀಡಿದರು.

## ಚುನಾವಣೆಯಲ್ಲಿ ಅಧಿಕಾರ ಹಿಡಿಯುವ ಮೂಲಕ ಮತ್ತಷ್ಟು ಬಲವರ್ಧನೆಯನ್ನು ಮಾಡಿಕೊಳ್ಳಬೇಕು

**ಚಾಮರಾಜನಗರ:** ಜಿಲ್ಲೆ ಕಾಂಗ್ರೆಸ್ ಪಕ್ಷದ ಭದ್ರಕೋಟೆಯಾಗಿದ್ದರು ಸಹ ಪಕ್ಷದ ಕಾರ್ಯಕರ್ತರು ಹಾಗೂ ಮುಖಂಡರು ಇನ್ನು ಹೆಚ್ಚಿನ ರೀತಿಯಲ್ಲಿ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ ಅಧಿಕಾರ ಹಿಡಿಯುವ ಮೂಲಕ ಮತ್ತಷ್ಟು ಬಲವರ್ಧನೆಯನ್ನು ಮಾಡಿಕೊಳ್ಳಬೇಕು ಎಂದು ಕಾಂಗ್ರೆಸ್ ಮೈಸೂರು ವಿಭಾಗದ ಸತ್ಯ ಶೋಧನಾ ಸಮಿತಿಯ ಅಧ್ಯಕ್ಷ ರಾದ ಮಾಜಿ ಉಪ ಸಭಾಪತಿ ವಿ.ಆರ್. ಸುದರ್ಶನ್ ತಿಳಿಸಿದರು.

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಗೆ ಆಗಮಿಸಿದ್ದ ಸತ್ಯ ಶೋಧನಾ ಸಮಿತಿ ಪರಿಶೀಲನಾ ತಂಡದ ನೇತೃತ್ವ ವಹಿಸಿ ಮಾತನಾಡಿದ ಅವರು, ಮಾಜಿ ಸಚಿವರಾದ ದಿ. ಎಚ್.ಎಸ್. ಮಹದೇವಪ್ರಸಾದ್, ಮಾಜಿ ಸಂಸದರಾದ ದಿ. ಆರ್. ಧ್ರುವನಾರಾಯಣ್ ಅವರು ಲೋಕಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಪಕ್ಷವನ್ನು ಸದೃಢವಾಗಿ ಕಟ್ಟುವ ಜೊತೆಗೆ ಕಾರ್ಯಕರ್ತರನ್ನು ಗುರುತಿಸಿ ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಿದ್ದಾರೆ. ಅವರ ಹಾಕಿದ ಭದ್ರಬುನಾದಿಯಲ್ಲಿ ಜಿಲ್ಲೆಯ ಶಾಸಕರು ಹಾಗು ಸಚಿವರು, ಸಂಸದರು ಇನ್ನು ಹೆಚ್ಚಿನ ರೀತಿಯಲ್ಲಿ ಪಕ್ಷವವನ್ನು ಬಲವರ್ಧನೆ ಮಾಡಬೇಕು. ಎರಡನೇ ಹಂತದ ಮುಖಂಡರು ಹಾಗು ಕಾರ್ಯಕರ್ತರನ್ನು ಬೆಳೆಸುವ ನಿಟ್ಟಿನಲ್ಲಿ ಚಿಂತನೆ ನಡೆಬೇಕು ಎಂದರು. ಚಾಮರಾಜನಗರ ಲೋಸಕಭಾ ಕ್ಷೇತ್ರದ ಚುನಾವಣೆಯ ಗೆಲುವು ಇತರೇ ಜಿಲ್ಲೆಗಳು ಹಾಗೂ ಕ್ಷೇತ್ರಗಳಿಗೆ ಮಾದರಿಯಾಗಿದೆ. ಎಂಟು ವಿಧಾನ ಸಭಾ ಕ್ಷೇತ್ರಗಳಲ್ಲಿ ಪಕ್ಷದ ಅಭ್ಯರ್ಥಿಗೆ ಲೀಡ್ ಕೊಡಿಸುವ ಮೂಲಕ ಅಭೂತ ಪೂರ್ವ ಗೆಲುವು ತಂದು ಕೊಟ್ಟಿದ್ದೀರಿ. ಈ ಗೆಲುವು ಪಕ್ಷದ ಮುಖಂಡರು ಹಾಗೂ ಪದಾಧಿಕಾರಿಗಳು ಅನುಸರಿಸಿ ಕ್ರಮಗಳು ಮತ್ತು ಕಾರ್ಯ ವಿಧಾನಗಳನ್ನು ಹಂಚಿಕೊಳ್ಳ ಬೇಕು. ಇತರೇ ಕ್ಷೇತ್ರಗಳಿಗೂ ಇದನ್ನು ಅನ್ವಯಿಸಿ ಗೆಲುವು ಸಾಧ್ಯವಾಗುತ್ತದೆ. 10 ವರ್ಷಗಳ ಕಾಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾಗಿ ಸೇವೆ ಸಲ್ಲಿಸಿರು ವವರನ್ನು ಗುರುತಿಸಿ ಅವರಿಗೆ ಹೆಚ್ಚುವರಿ ಅಧಿಕಾರವನ್ನು ನೀಡುವ ಮೂಲಕ ಹೊಸಬರಿ ಗೆ ಬ್ಲಾಕ್ ಅಧ್ಯಕ್ಷ ಸ್ಥಾನವನ್ನು ನೀಡಲು ಕೆಪಿಸಿಸಿ ಚಿಂತನೆ ಮಾಡಿದೆ. ಇಂಥವರ ಪಟ್ಟಿಯನ್ನು ನೀಡಬೇಕು. ಯುವ ಕಾಂಗ್ರೆಸ್ ಚುನಾವಣೆ ನಡೆಯುತ್ತಿದ್ದು, ಯುವಕರು ಸಕ್ರಿಯವಾಗಿ ಭಾಗವಹಿಸುವ ಮೂಲಕ ಸಕ್ರಿಯ ರಾಜಕಾರಣಕ್ಕೆ ಬರಬೇಕು ಎಂದು ಸುದರ್ಶನ ತಿಳಿಸಿದರು.



ಪಕ್ಷದ ಮೊದಲ, ನಂತರ ವ್ಯಕ್ತಿ, ಇತರೇ, ಪಕ್ಷಕ್ಕಿಂತ ಯಾರು ದೊಡ್ಡವರಲ್ಲ. ಸಂಘಟನೆಯಂತ ಬಂದಾಗ ಸಂಸದರು, ಶಾಸಕರು ಹಾಗೂ ಮುಖಂಡರು ಒಗ್ಗಟ್ಟು ಪ್ರದರ್ಶನ ಮಾಡಬೇಕು. ವೈಯಕ್ತಿಕ ವಿಚಾರಗಳನ್ನು ಪ್ರಸ್ತಾಪ ಮಾಡಿ, ಸಂಘಟನೆಗೆ ಮುಜುಗರ ತರುವುದು ಬೇಡ. ಕಾರ್ಯಕರ್ತರು ಹಾಗೂ ಮುಖಂಡರು ಸಹ ಪಕ್ಷಕ್ಕೆ ನಿಷ್ಠೆಯಿಂದ ದುಡಿದರೆ, ಖಂಡಿತ ಅಧಿಕಾರ ದೊರೆಯುತ್ತದೆ. ಇದನ್ನು ಪಡೆದುಕೊಳ್ಳಲು ಸಹನೆ, ತಾಳ್ಮೆ ಇರಬೇಕು. ಕ್ಷೇತ್ರದ ಶಾಸಕರು, ಸಂಸದರು, ಸ್ಥಳೀಯ ಸಂಸ್ಥೆಗಳ ಅಧ್ಯಕ್ಷ, ಉಪಾಧ್ಯಕ್ಷರ ಆಯ್ಕೆಯಲ್ಲಿ ಪಕ್ಷದ ಕಾರ್ಯಕರ್ತರಿಗೆ ಅಧಿಕಾರ ದೊರೆಯುವಂತೆ ಮಾಡಬೇಕು. ಮುಂಬರುವ ಜಿ.ಪಂ. ತಾ.ಪಂ. ಚುನಾವಣೆಯಲ್ಲಿ ಅಧಿಕಾರ ಹಿಡಿಯುವ ನಿಟ್ಟಿನಲ್ಲಿ ಒಗ್ಗಟ್ಟಿನಿಂದ ಎಲ್ಲರು ಹೊಂದಾಣಿಕೆಯೊಂದಿಗೆ ಗೆಲ್ಲುವ ಅಭ್ಯರ್ಥಿಯನ್ನು ಕಣಕ್ಕಿಳಿಸಬೇಕು ಎಂದರು. ಶಾಸಕರಾದ ಸಿ. ಪುಟ್ಟರಂಗಶೆಟ್ಟಿ, ಎ.ಆರ್. ಕೃಷ್ಣಮೂರ್ತಿ, ಎಚ್.ಎಂ. ಗಣೇಶ್ ಪ್ರಸಾದ್ ಮಾತನಾಡಿ ಜಿಲ್ಲೆಯಲ್ಲಿ ನಮ್ಮ ಪಕ್ಷ ಸದೃಢವಾಗಿ ಸಂಘಟನೆಯಾಗುತ್ತಿದೆ. ಇದರೊಟ್ಟಿಗೆ ವಿರೋಧ ಪಕ್ಷಗಳ ಟೀಕೆ ಟಿಪ್ಪಣಿಗಳಿಗೆ ಉತ್ತರ ನೀಡುವ ಜೊತೆಗೆ ಇತರೇ ಚುನಾವಣೆಗಳು ಬಂದಾಗ ಅವರಿಗೆ ತಕ್ಕ ಉತ್ತರವನ್ನು ನಾವು ನೀಡಬೇಕಾಗಿದೆ. ನಮ್ಮದು ಜಾತ್ಯತೀತ ಹಾಗೂ ಎಲ್ಲಾ ವರ್ಗದವರನ್ನು ಒಳಗೊಂಡಿರುವ ಪಕ್ಷವಾಗಿದೆ. ದಲಿತರು, ಹಿಂದುಳಿದವರು ಹಾಗೂ ಅಲ್ಪಸಂಖ್ಯಾತರ ಬಗೆಗೆ ಹೆಚ್ಚಿನ ಕಾಳಜಿಯನ್ನು ಹೊಂದಿ ಅವರ ಶ್ರೇಯೋಭಿವೃದ್ಧಿಗೆ ದುಡಿಯುತ್ತಿದೆ. ಸಹಕಾರ ಸಂಘಗಳ ಚುನಾವಣೆಯಲ್ಲಿ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಸಕ್ರಿಯವಾಗಬೇಕು. ಜನರಿಗೆ ಉತ್ತಮ ಕೆಲಸವನ್ನು ಮಾಡಿಕೊಡಲು ಮುಂದಾಗಬೇಕು ಎಂದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ಅದ ಕಾಡಾ ಅಧ್ಯಕ್ಷ ಪಿ.ಮರಿಸ್ವಾಮಿ ಅಧ್ಯಕ್ಷತೆ ವಹಿಸಿ ಪ್ರಸ್ತಾವಿಕವಾಗಿ ಮಾತನಾಡಿ, ಚಾಮರಾಜನಗರ ಜಿಲ್ಲೆಗೆ ಕಾಂಗ್ರೆಸ್ ಸತ್ಯ ಶೋಧನಾ ಸಮಿತಿಯ ತಂಡ ಆಗಮಿಸಿರುವುದು ನಮ್ಮೆಲ್ಲರಿಗೂ ಸಂತಸ ತಂದಿದೆ. ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಅವರ ನೀಡುವ ಸಲಹೆ ಸೂಚನೆಗಳನ್ನು ಪಾಲಿಸಿ, ಜಿಲ್ಲೆಯಲ್ಲಿ ಮತ್ತಷ್ಟು ಗಟ್ಟಿಯಾಗಿ ಪಕ್ಷವನ್ನು ಸಂಘಟಿಸಲು ಮುಂದಾಗಬೇಕು ಎಂದರು. ಸಭೆಯಲ್ಲಿ, ಸತ್ಯ ಶೋಧನಾ ಸಮಿತಿಯ ಸದಸ್ಯರಾದ ಶಾಸಕ ಸಿ. ರಘುಮೂರ್ತಿ, ಮಾಜಿ ಶಾಸಕ ವೆಂಕಟರಣಯ್ಯ, ಕೆಪಿಸಿಸಿ ಉಪಾಧ್ಯಕ್ಷ ಸೂರಾಜ್ ಹೆಗಡೆ, ಸಿ.ಎಸ್. ದ್ವಾರಕ ನಾಥ್ ಮಾಜಿ ಶಾಸಕರಾದ ಎಸ್. ಜಯಣ್ಣ, ಆರ್. ನರೇಂದ್ರ, ಕೆಪಿಸಿಸಿ ವೀಕ್ಷಕರಾದ ಬಸವರಾಜು, ಸದಸ್ಯರಾದ ಶಿವನಾಗಪ್ಪ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಪ್ರಧಾನ ಕಾರ್ಯದರ್ಶಿಗಳಾದ ಚಿಕ್ಕಮಹದೇವ್, ಆರ್. ಮಹದೇವ್, ಜಿಲ್ಲಾ ಗ್ಯಾರಂಟಿ ಯೋಜನೆ ಸಮಿತಿಯ ಅಧ್ಯಕ್ಷ ಹೊಂಗನೂರು ಚಂದ್ರು, ಚುಡಾ ಅಧ್ಯಕ್ಷ ಮಹಮದ್ ಅಸ್ಗರ್, ಬ್ಲಾಕ್ ಅಧ್ಯಕ್ಷರಾದ ಗುರುಸ್ವಾಮಿ,ಜಿ.ಪಂ. ಮಾಜಿ ಸದಸ್ಯರಾದ ಸದಾಶಿವಮೂರ್ತಿ, ಮಹೇಶ್, ಪು. ಶ್ರೀನಿವಾಸನಾಯಕ, ಸಿ.ಎ. ಮಹದೇವಶೆಟ್ಟಿ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಲತಾ ರಾಜಶೇಖರ್ ಜತ್ತಿ, ನಗರಸಭಾ ಸದಸ್ಯರಾದ ಚಿನ್ನಮ್ಮ, ಕಲಾವತಿ, ನೀಲಮ್ಮ, ಭಾಗ್ಯಮ್ಮ, ಹೊಂಗನೂರು ಜಯರಾಜ್, ಗೌಡಹಳ್ಳಿ ರಾಜೇಶ್, ಕಾರ್ಮಿಕರ ವಿಭಾಗದ ಅಧ್ಯಕ್ಷ ಮಹೇಶ್ ಮೊದಲಾಧವರು ಇದ್ದರು.

## ಜಿಲ್ಲೆಯಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಆಯಾವ್ಯಯ ಭಾಷಣದಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೆಂದು ಸರ್ಕಾರ ಘೋಷಿಸಲಾಗಿರುತ್ತದೆ. ಈ ವ್ಯವಸ್ಥೆಯನ್ನು 2011ರಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ, ಮಾರ್ಚ್ 2024ರಲ್ಲಿ ತುಮಕೂರು ಮತ್ತು ಬೆಳಗಾವಿ ಜಿಲ್ಲೆಯಲ್ಲಿ ನೋಂದಣಿ ಕಾಯ್ದೆ-1908ರ ಕಲಂ (5) ಹಾಗೂ ಕಲಂ (6) ರಡಿಯಲ್ಲಿ ಅನುಷ್ಠಾನಗೊಳಿಸಲಾಗಿದೆ. ಎನಿವೇರ್ ನೋಂದಣಿ ವ್ಯವಸ್ಥೆಯು ಈ ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದೆ. ಈ ಕಾರಣದಿಂದ ಎನಿವೇರ್ ನೋಂದಣಿಯನ್ನು ಚಿಕ್ಕಬಳ್ಳಾಪುರ ಜಿಲ್ಲೆಯ ಉಪನೋಂದಣಿ ಕಚೇರಿಗೂ ವಿಸ್ತರಿಸಲು ನಿರ್ಧರಿಸಲಾಗಿದೆ.

ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿರುತ್ತದೆ. ಆದರೆ ಎನಿವೇರ್ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ.

ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಚೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಚೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ. ಉಪನೋಂದಣಿ ಕಚೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ. ಕಚೇರಿ ಸಿಬ್ಬಂದಿಗಳ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಚೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ. ಆದ್ದರಿಂದ ಸಾರ್ವಜನಿಕರು ಎನಿವೇರ್ ನೋಂದಣಿಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಚೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳು ಜಿಲ್ಲಾಧಿಕಾರಿಗಳು ಮನವಿ ಮಾಡಿದರು. ವಾಡಿಕೆ ಮಳೆಗಿಂತಲ್ಲೂ ಮಳೆಯ ಪ್ರಮಾಣ ಉತ್ತಮವಾಗಿದೆ. ಮುಂದಿನ ದಿನಗಳಲ್ಲಿ ಶೇ 100 ರಷ್ಟು ಬಿತ್ತನೆ ಕಾರ್ಯವಾಗಲು ರೈತರಿಗೆ ಅಧಿಕಾರಿಗಳು ನೆರವಾಗಬೇಕೆಂದು ಸೂಚಿಸಿದರು.

## ಕೃಷಿಭಾಗ್ಯ ಯೋಜನೆ

**ಚಿಕ್ಕಬಳ್ಳಾಪುರ:** ಬರ ಮತ್ತು ಪ್ರವಾಹಗಳಿಂದ ಮಳೆಯಾಶ್ರಿತ ಕೃಷಿ ಅನಿಶ್ಚಿತವಾಗಿರುತ್ತದೆ.ನೀರಾವರಿ ಪ್ರದೇಶದ ರೈತರಿಗೆ ನೀರಿನ ಲಭ್ಯತೆ ಖಚಿತವಾದ ಕಾರಣ ನಿರೀಕ್ಷಿತ ಆದಾಯ ಸಿಗುತ್ತದೆ. ಒಣ ಭೂಮಿರೈತರ ಆದಾಯ ಮಳೆ ಮೇಲೆ ಅವಲಂಬಿತವಾಗಿರುವುದರಿಂದ ಇವರ ಜೀವನೋಪಾಯದ ಮೇಲೆ ಪ್ರಭಾವ ಬೀರುತ್ತದೆ.ಕಡಿಮೆ ಮಳೆ ಬೀಳುವ ಪ್ರದೇಶಗಳಲ್ಲಿ ರೈತರು 1000-1500 ಅಡಿ ಕೊಳವೆಬಾವಿ ಕೊರೆಸಲು 2-3 ಲಕ್ಷಗಳವರೆಗೆ ವೆಚ್ಚ ಮಾಡುತ್ತಾರೆ. ಕೊಳವೆಬಾವಿ ವಿಫಲವಾದರೆ ಅಥವಾ ಕೆಲವು ವರ್ಷಗಳನಂತರ ಬತ್ತಿಹೋದ ಸಂದರ್ಭದಲ್ಲಿ ರೈತರು ಸಾಲಭಾದೆಗೆ ಸಿಲುಕುತ್ತಾರೆ. ಆದ್ದರಿಂದ ಮಳೆಯಾಶ್ರಿತ ಕೃಷಿಯಲ್ಲಿ ಜೀವನಾಧರಿತ ಕೃಷಿಯಿಂದ ಸುಸ್ಥಿರ ಕೃಷಿಯನ್ನಾಗಿ ರೈತರ ಜೀವನ ಮಟ್ಟವನ್ನು ಉತ್ತಮಪಡಿಸಲು ಕೃಷಿಭಾಗ್ಯ ಯೋಜನೆಯಡಿ 2023-24 ನೇ ಸಾಲಿನಿಂದ ಮಂಜೂರು ಮಾಡಲಾಗಿದೆ. ಸದರಿ ಯೋಜನೆಯು ವಿವಿಧ ಘಟಕಗಳ ಪ್ಯಾಕೇಜ್ ಯೋಜನೆಯಾಗಿದ್ದು ಈ ಕೆಳಕಂಡ ಸೌಲಭ್ಯಗಳನ್ನು ಒಳಗೊಂಡಿರುತ್ತದೆ.



ಈ ದಿನ ಕೋಲಾರ ಜಿಲ್ಲೆಯಲ್ಲಿ ರಾಷ್ಟ್ರೀಯ ಕ್ರೀಡಾ ದಿನಾಚರಣೆಯ ಪ್ರಯುಕ್ತ ರಸ್ತೆ ಓಟವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮಕ್ಕೆ ಮಾನ್ಯ ಅಪರ ಜಿಲ್ಲಾಧಿಕಾರಿಗಳು, ಕ್ರೀಡಾ ಸಂಸ್ಥೆಯ ಪದಾಧಿಕಾರಿಗಳು ಓಟಕ್ಕೆ ಚಾಲನೆಯನ್ನು ನೀಡಿ ವಿಜೇತರಾದವರನ್ನು ಶುಭ ಕೋರಿದರು.

## ನಾಗದೇವತೆಗಳ ಪುನರ್‌ಪ್ರತಿಷ್ಠಾಪನೆ

**ಕೋಲಾರ:** ಕೋಲಾರ ನಗರದ ಪಾಲಸಂದ್ರ ಲೇಔಟ್ ಏಳನೇ ಮುಖ್ಯರಸ್ತೆಯಲ್ಲಿನ ಶಿಥಿಲಾವಸ್ಥೆಯಲ್ಲಿದ್ದ ನಾಗದೇವತೆಗಳು ಮತ್ತು ದೇವರ ವಿಗ್ರಹಗಳನ್ನು ಸುರಕ್ಷಿತವಾಗಿರಿಸಿ ಇಂದು ಮುಂಜಾನೆ ಸಕಲ ಪೂಜಾ ಕೈಕರ್ಯಗಳೊಂದಿಗೆ ಪ್ರತಿಷ್ಠಾಪಿಸಲಾಯಿತು .

ಶ್ರೀಮತಿ ತಾರಾ ರಾಮರಾಜು,ಹರ್ಷಿತಾ ಎಂ, ಮಾನಸ, ತೇಜಸ್ ರಾಜು ಕೆಆರ್ ಮತ್ತು ಕುಟುಂಬಸ್ಥರು ದೇವತಾ ಕಾರ್ಯವನ್ನು ನೆರವೇರಿಸಿದರು.

ನಾಗದೇವತೆಗಳ ಪುನಪ್ರ್ರತಿಷ್ಠಾಪನೆ, ಶ್ರೀ ಗಣಪತಿ ಪ್ರತಿಷ್ಠಾಪನೆ, ನವಗ್ರಹ ಪೂಜೆ, ಹೋಮ ನಡೆಯಿತು. ಪಂಡಿತರಾದ ವೇಧಬ್ರಹ್ಮಶ್ರೀ ಶಂಕರ್ ಶರ್ಮಾ, ಬಾಲಾಜಿಶಿವಪ್ರಸಾಸ್, ಸುಹಾಸ್ ಶರ್ಮಾ ರವರು ನಾಗದೇವತೆಗಳ ಪುನಪ್ರ್ರತಿಷ್ಠಾಪನೆ ,ಶ್ರೀ ಗಣಪತಿ ಪ್ರತಿಷ್ಠಾಪನೆ ,ನವಗ್ರಹ ಪೂಜೆ ,ಹೋಮ ಇತ್ಯಾದಿ ಪೂಜಾ ಕಾರ್ಯಗಳನ್ನು ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಮಂಜುನಾಥ್ ,ನಾಗರಾಜ್ ಪಾಲಸಂದ್ರ, ಬಡಾವಣೆಯ ನಿವಾಸಿಗಳು ಇದ್ದರು.



## ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಪ್ರತಿಭಟನೆ

**ಚಾಮರಾಜನಗರ:** ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ರಾಜ್ಯಪಾ ಲರು ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಡಿ.ಜಿ.ಸಾಗರ್ ಬಣದ ಜಿಲ್ಲಾ ಸಮಿತಿ ವತಿಯಿಂದ ಚಾಮರಾಜನಗರದಲ್ಲಿ ಪ್ರತಿಭಟನೆ ನಡೆಯಿತು.

ಚಾಮರಾಜನಗರದ ಜಿಲ್ಲಾಡಳಿತ ಭವನದ ಎದುರು ಸಮಿತಿಯ ಜಿಲ್ಲಾ ಸಂಚಾಲಕ ಸಿ.ಎಂ.ಶಿವಣ್ಣ ಅವರ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ರಾಜ್ಯಪಾಲರ ವಿರುದ್ಧ ಘೋಷಣೆ ಕೂಗಿ ಆಕ್ರೋಶ ವ್ಯಕ್ತ ಪಡಿಸಿದರು. ನಂತರ ಜಿಲ್ಲಾಧಿ , ಕಾರಿ ಮುಖಾಂತರ ರಾಷ್ಟ್ರಪತಿಗೆಮನವಿ ಸಲ್ಲಿಸಿದರು.

ಸಮಿತಿಯ ಜಿಲ್ಲಾ ಸಂಚಾಲಕ ಸಿ.ಎಂ.ಶಿವಣ್ಣ ಮಾತನಾಡಿ, ಸಿಎಂ ಸಿದ್ದರಾಮಯ್ಯ, ಮಲ್ಲಿ ಕಾರ್ಜುನ ಖರ್ಗೆ, ಡಿ.ಕೆ.ಶಿವ ಕುಮಾರ್ ಅವರ ನೇತೃತ್ವದಲ್ಲಿ 135 ಸೀಟುಗಳನ್ನು ಗಳಿಸಿ

ರಾಜ್ಯದಲ್ಲಿ ಸುಭದ್ರ ಸರ್ಕಾರವಾಗಿ ಆಡಳಿತ ನಡೆಸುತ್ತಿದ್ದು, ದಲಿತರು, ಹಿಂದುಳಿದ ವರ್ಗಗಳ ಪರ ಅನೇಕ ಯೋಜನೆಗಳನ್ನು ರೂಪಿಸಿ ರಾಜ್ಯವನ್ನು ಅಭಿವೃದ್ಧಿಯತ್ತ ಕೊಂಡೊಯ್ಯಲಾಗುತ್ತಿದೆ. ಇದನ್ನು ಸಹಿಸದೆ ವಾಮಮಾರ್ಗದಲ್ಲಿ ಬಿಜೆಪಿ, ಜೆಡಿಎಸ್ ಪಕ್ಷಗಳು ಹಾಗೂ ಕೇಂದ್ರ, ಸರ್ಕಾರ ರಾಜ್ಯಪಾಲರ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪಿತೂರಿ ಮಾಡಿ ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡಿಸಿ ರಾಜ್ಯ ಸರ್ಕಾರವನ್ನು ಅಸ್ಥಿರಗೊಳಿಸುವ ಕೆಲಸ ಮಾಡುತ್ತಿರುವುದು ಖಂಡನೀಯ ಎಂದರು.



ಸಂವಿಧಾನ ಪರವಾಗಿರುವ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸಲು ಕೇಂದ್ರ, ಬಿಜೆಪಿ ಜೊತೆಗೂಡಿ ರಾಜ್ಯ ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಇಲ್ಲಸಲ್ಲದ ನೆಪವನ್ನು ಮಾಡಿ ಗೂಬೆ ಕೂರಿಸುವುದು ಸರಿಯಲ್ಲ. ಜನರು ಮುಂದಿನ ದಿನಗಳಲ್ಲಿ ತಮಗೆ ತಕ್ಕಪಾಠ ಕಲಿಸಲಿದ್ದಾರೆ ಎಂದರು.ಪ್ರತಿಭಟನೆಯಲ್ಲಿ ದಸಂಸ ಜಿಲ್ಲಾ ಸಂಯೋಜಕರಾದ ಕೆ.ಎಂ.ನಾಗರಾಜು, ಬೆಳ್ಳಿಯಪ್ಪ, ಪದಾಧಿಕಾರಿಗಳಾದ ಆಟೋ ಉಮೇಶ್, ಕೊತ್ತಲವಾಡಿ ಶಿವು, ಯಜಮಾನರಾದ ಮಹದೇವಯ್ಯ, ಮರಿಯಯ್ಯ, ಕಲಾವಿದ ವೆಂಕಟರಮಣ, ರಂಗಸ್ವಾಮಿ, ಚಿನ್ನಸ್ವಾಮಿ, ಚಿಕ್ಕ, ಗೌರಮ್ಮ, ರಾಜಮ್ಮ, ಪುಟ್ಟಬಸಮ್ಮ, ಮಹದೇವಮ್ಮ, ರಾಜಮ್ಮ ಸೇರಿದಂತೆ ಇತರರು ಭಾಗವಹಿಸಿದ್ದರು.

## ಮಲೆ ಮಹದೇಶ್ವರ ಬೆಟ್ಟದ ಹುಂಡಿ ಹಣ ಎಣಿಕೆ

**ಚಾಮರಾಜನಗರ:** ಮೂವತ್ತು ದಿನಗಳ ಅಂತರದಲ್ಲಿ ಒಂದು ಕೋಟಿ ಎಪ್ಪತ್ತಾರು ಲಕ್ಷ ಇಪ್ಪತ್ತೊಂಭತ್ತು ಸಾವಿರದ ಎಂಟನೂರು ನಲವತ್ತೊಂಭತ್ತು ರೂಪಾಯಿಗಳ ಪವಾಡ ಪುರುಷ ಮಲೆ ಮಹದೇಶ್ವರ ಬೆಟ್ಟದ ಹುಂಡಿಯಲ್ಲಿ ಸಂಗ್ರಹವಾಗಿದೆ.

ಕರ್ನಾಟಕ ತಮಿಳುನಾಡು ಗಡಿ ಭಾಗದಲ್ಲಿರುವ ಚಾಮರಾಜನಗರ ಜಿಲ್ಲೆಯ ಹನುರು ತಾಲ್ಲೂಕಿನ ಶ್ರೀಮಲೈಮಹದೇಶ್ವರ ಸ್ವಾಮಿಕ್ಷೇತ್ರ ಅಭಿವೃದ್ಧಿಪ್ರಾಧಿಕಾರದಲ್ಲಿ ಶ್ರೀಸಾಲೂರುಬೃಹನ್ಮಠಾಧ್ಯಕ್ಷ ಶ್ರೀಶಾಂತಮಲ್ಲಿಕಾರ್ಜುನಸ್ವಾಮಿಗಳ ದಿವ್ಯಸಾನಿದ್ಯದಲ್ಲಿ, ಶ್ರೀಮಲೈಮಹದೇಶ್ವರ ಸ್ವಾಮಿಕ್ಷೇತ್ರಅಭಿವೃದ್ಧಿಪ್ರಾಧಿಕಾರದ ಕಾರ್ಯದರ್ಶಿ ರಘುನೇತೃತ್ವದಲ್ಲಿಹುಂಡಿಪರ್ಕಾವಣೆಕಾರ್ಯಪ್ರಾರಂಭವಾಗಿ ಸಂಜೆ ತನಕ ತಡೆಯಿತು.

ಹುಂಡಿ ಮತ್ತು ಈ ಹುಂಡಿಯಿಂದ ಒಂದು ಕೋಟಿ ಎಪ್ಪತ್ತಾರು ಲಕ್ಷ ಇಪ್ಪತ್ತೊಂಭತ್ತು ಸಾವಿರದ ಎಂಟನೂರು ನಲವತ್ತೊಂಭತ್ತು ರೂಪಾಯಿ ಸಂಗ್ರಹವಾಗಿದೆ. ಇದರ ಜೊತೆಗೆ 45 ಗ್ರಾಂ ಚಿನ್ನ, ಒಂದು ಕೆ.ಜಿ ಮುನ್ನೂರು ಗ್ರಾಂ ಬೆಳ್ಳಿ ಆಭರಣಗಳು ಸಂಗ್ರಹವಾಗಿದೆ.

ನಗದು ಮತ್ತು ಚಿನ್ನಾಭರಣದೊಂದಿಗೆ ಅಮೇರಿಕಾದ 20 ಡಾಲರ್, ಶ್ರೀಲಂಕಾ 20 ರೂ, ಅರಬ್ ದೇಶದ ಮೂರು ನೋಟುಗಳು, ಥೈಲ್ಯಾಂಡ್ ನ ಒಂದು ನೋಟ್ ಹುಂಡಿಯಲ್ಲಿ ಸಿಕ್ಕಿದೆ ಎಂದು ಪ್ರಾಧಿಕಾರದ ಅಧಿಕಾರಿಗಳು ತಿಳಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಮಲೆ ಮಹದೇಶ್ವರ ಬೆಟ್ಟದಲ್ಲಿ ಗುರುವಾರ ನಡೆಯುತ್ತಿರುವ ಹುಂಡಿ ಕಾರ್ಯದಲ್ಲಿ ಪ್ರಾಧಿಕಾರದ ಉಪಕಾರ್ಯದರ್ಶಿ ಚಂದ್ರಶೇಖರ ಜಿ.ಎಲ್., ಹಣಕಾಸು ಮತ್ತು ಲೆಕ್ಕಪತ್ರ ಸಲಹೆಗಾರ ನಾಗೇಶ್ ಹಾಗೂ ಚಾಮರಾಜನಗರ ಜಿಲ್ಲಾಡಳಿತ ಕಛೇರಿಯ ಭಾರತಿ.ಡಿ,ಬೆರಳಚ್ಚುಗಾರರು ಹಾಗೂ ಪ್ರಾಧಿಕಾರದ ಸಿಬ್ಬಂದಿಗಳು, ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಗು ಬ್ಯಾಂಕ್ಆಫ್ ಬರೋಡ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಹಾಜರಿದ್ದರು.



# ಆತ್ಮ ಯೋಜನೆ ಸಮರ್ಪಕ ಅನುಷ್ಠಾನ ಅಧಿಕಾರಿಗಳ ಕರ್ತವ್ಯ

**ಕೋಲಾರ:** 'ಕೇಂದ್ರ ಸರ್ಕಾರದ ಆತ್ಮ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸಿ' ಎಂದು ಅಪರ ಜಿಲ್ಲಾಧಿಕಾರಿ ಮಂಗಳ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಆತ್ಮ ಯೋಜನೆ ಸಮಿತಿ ಸಭೆಯಲ್ಲಿ ಮಾತನಾಡಿ, 'ರೈತರಿಗೆ ನೂತನ ಕೃಷಿ ತಂತ್ರಜ್ಞಾನ ಕುರಿತು ಅರಿವು ಮೂಡಿಸಲು ಹಾಗೂ ಕೃಷಿ ಅಭಿವೃದ್ಧಿಗೆ ಪೂರಕವಾಗಿ ತರಬೇತಿ ಕಾರ್ಯಾಗಾರ ನಡೆಸಬೇಕು' ಎಂದು ಹೇಳಿದರು.



'ಕೃಷಿ ಚಟುವಟಿಕೆಗಳಲ್ಲಿ ಹೆಚ್ಚು ಇಳುವರಿ ತೆಗೆಯುವ ನಿಟ್ಟಿನಲ್ಲಿ ರೈತರಿಗೆ ವಿವಿಧ ರೀತಿಯ ತರಬೇತಿ ನೀಡಲು ಕೇಂದ್ರ ಸರ್ಕಾರವೇ ಸೂಚಿಸಿದೆ. ಇದನ್ನು ಕಾರ್ಯಗತಗೊಳಿಸುವ ಜವಾಬ್ದಾರಿ ಅಧಿಕಾರಿಗಳದು. ಗ್ರಾಮಗಳಿಗೆ ತೆರಳಿ ರೈತರನ್ನು ಸಂಪರ್ಕಿಸಿ ಅವರ ಸಮಸ್ಯೆಗಳ ಬಗ್ಗೆ ಚರ್ಚಿಸಬೇಕು. ಜತೆಗೆ ಸಮಸ್ಯೆ ನಿವಾರಣೆಗೆ ಕ್ರಮ ಕೈಗೊಳ್ಳಬೇಕು' ಎಂದು ಸಲಹೆ ನೀಡಿದರು.

'ಜಿಲ್ಲೆಯಲ್ಲಿ ಬರಗಾಲ ಎದುರಾಗಿದ್ದು, ಕೊಳವೆ ಬಾವಿಗಳಲ್ಲಿ ಅಂತರ್ಜಲ ಬತ್ತಿದೆ. ನೀರಿನ ಸಮಸ್ಯೆಯ ಕಾರಣಕ್ಕೆ ರೈತರು ತೋಟಗಾರಿಕೆ, ಕೃಷಿ ಚಟುವಟಿಕೆಗಳಿಂದ ದೂರ ಸರಿಯುತ್ತಿದ್ದಾರೆ. ನೀರು ಲಭ್ಯವಿರುವ ರೈತರು ಮಾಹಿತಿ ಕೊರತೆಯಿಂದ ಹೆಚ್ಚು ಇಳುವರಿ ಪಡೆಯಲು ಸಾಧ್ಯವಾಗುತ್ತಿಲ್ಲ. ಹೀಗಾಗಿ ರೈತರಿಗೆ ಕೃಷಿ ಕುರಿತು ಮಾಹಿತಿ ನೀಡಬೇಕು' ಎಂದು ತಿಳಿಸಿದರು.

ರೂ.1.48ಕೋಟಿ ಅನುದಾನ: 'ಯೋಜನೆಗೆ ರೂ.1.48 ಕೋಟಿ ಅನುದಾನ ಮೀಸಲಿಟ್ಟಿದ್ದು, ಈ ಪೈಕಿ ಈವರೆಗೆ ರೂ.0.32ಕೋಟಿ ಬಿಡುಗಡೆಯಾಗಿದ್ದು, ರೂ.28ಲಕ್ಷ ವೆಚ್ಚವಾಗಿದೆ' ಎಂದು ಜಂಟಿ ಕೃಷಿ ನಿರ್ದೇಶಕಿ ಎಂ. ಆರ್. ಸುಮ ಮಾಹಿತಿ ನೀಡಿದರು.

'ಯೋಜನೆಯಡಿ ಹಮ್ಮಿಕೊಂಡಿರುವ ಕಾರ್ಯಕ್ರಮಗಳನ್ನು ರೈತರಿಗೆ ತಲುಪಿಸಲು ಹೋಬಳಿ ಮಟ್ಟದಿಂದ ಜಿಲ್ಲಾ ಮಟ್ಟದವರೆಗೂ ಸಿಬ್ಬಂದಿ ಇರುತ್ತಾರೆ. ಇವರು ನೇರವಾಗಿ ರೈತರನ್ನು ಸಂಪರ್ಕಿಸಿ ಚರ್ಚೆ ನಡೆಸುತ್ತಾರೆ. ಕೃಷಿ ಅಭಿವೃದ್ಧಿಗೆ ಪೂರಕವಾದ ತರಬೇತಿ, ಗುಂಪು ರಚನೆ, ಬೀಜ ಧನ ಹೀಗೆ ಅನೇಕ ಕಾರ್ಯಕ್ರಮ?ನಡೆಸಲಾಗುವುದು. ಪ್ರತಿ ಗ್ರಾಮದಲ್ಲೂ ರೈತರ ಗುಂಪು ರಚಿಸಿ ಸೌರ್ಕಯ ಕಲ್ಪಿಸಲಾಗುವುದು' ಎಂದರು.

ಕೃಷಿ ಇಲಾಖೆ ಉಪ ನಿರ್ದೇಶಕರಾದ ಭವ್ಯರಾಣಿ, ರೇಷ್ಮೆ ಇಲಾಖೆ ಉಪ ನಿರ್ದೇಶಕ ಶ್ರೀನಿವಾಸ್, ಪಶುಸಂಗೋಪನ ಉಪನಿರ್ದೇಶಕ ತುಲಸಿ ರಾಮಯ್ಯ, ಎಲ್ಲಾ ಕೃಷಿ ಸಹಾಯಕ ನಿರ್ದೇಶಕರು, ಸಮಿತಿಯ ಸದಸ್ಯರಾದ ಪ್ರಗತಿಪರ ರೈತರು ಸೇರಿದಂತೆ ಮತ್ತಿತರರು ಪಾಲ್ಗೊಂಡಿದ್ದರು.

# 4ನೇ ವಾರ್ಷಿಕ ಘಟಿಕೋತ್ಸವ

**ಕೋಲಾರ:** ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ 4ನೇ ವಾರ್ಷಿಕ ಘಟಿಕೋತ್ಸವವನ್ನು ಸೆಪ್ಟೆಂಬರ್ 02ರ ಸೋಮವಾರ ಬೆಳಿಗ್ಗೆ 11.00 ಗಂಟೆಗೆ ಎನ್.ಹೆಚ್-75, ಕಾಳಹಸ್ತಿಪುರ ಗೇಟ್ ಶ್ರೀ ನಂದಿನಿ ಪ್ಯಾಲೇಸ್‌ನಲ್ಲಿ ಏರ್ಪಡಿಸಲಾಗಿದೆ.

ಘಟಿಕೋತ್ಸವದ ಅಧ್ಯಕ್ಷತೆಯನ್ನು ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕರ್ನಾಟಕ ರಾಜ್ಯದ ರಾಜ್ಯಪಾಲರು ಹಾಗೂ ಮಾನ್ಯ ಕುಲಾಧಿಪತಿ ಶ್ರೀ ಥಾವರ್ ಚಂದ್ ಗೆಹ್ಲೋಟ್ ರವರು ವಹಿಸುವರು. ಮುಖ್ಯ ಅತಿಥಿಗಳಾಗಿ ಬೆಂಗಳೂರು ವಿಶ್ವವಿದ್ಯಾಲಯ ವಾಣಿಜ್ಯಶಾಸ್ತ್ರ ವಿಭಾಗದ ನಿವೃತ್ತ ಪ್ರಾಧ್ಯಾಪಕ ಪ್ರೊ. ಈರೇಶಿ.ಕೆ. ಅವರು ಘಟಿಕೋತ್ಸವದ ಭಾಷಣವನ್ನು ಮಾಡುವವರು. ಸನ್ಮಾನ್ಯ ಡಾ.ಎಂ.ಸಿ ಸುಧಾಕರ್, ಕರ್ನಾಟಕ ಸರ್ಕಾರದ ಉನ್ನತ ಶಿಕ್ಷಣ ಸಚಿವರು ಹಾಗೂ ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಸಮ-ಕುಲಾಧಿಪತಿಗಳು ಘಟಿಕೋತ್ಸವದಲ್ಲಿ ಉಪಸ್ಥಿತರಿರುವರು.



**ಹುಳಿಯಾರು ಸಮೀಪದ ಮತಿಘಟ್ಟ ಗ್ರಾಮದಲ್ಲಿ 20 ಲಕ್ಷ ರೂ ವೆಚ್ಚದಲ್ಲಿ ಸಿ.ಸಿ ರಸ್ತೆ ಅಭಿವೃದ್ಧಿ ನಿರ್ಮಾಣ ಕಾಮಗಾರಿಗೆ ಶಾಸಕರಾದ ಸಿ.ಬಿ.ಸುರೇಶ್‌ಬಾಬು ಚಾಲನೆ ನೀಡಿದರು.**

# ಕೋಲಾರ ಜಿಲ್ಲೆಯಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ

**ಕೋಲಾರ:** ನಾಗರೀಕ ಕೇಂದ್ರಿತ ಸುಧಾರಣೆ ಭಾಗವಾಗಿ ಪ್ರಸಕ್ತ 2024-25 ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಕೋಲಾರ ಜಿಲ್ಲೆಯಾದ್ಯಂತ ಸ್ಥಿರಾಸ್ತಿಯನ್ನು ಜಿಲ್ಲೆಯ ಯಾವುದೇ ಉಪ ನೊಂದಣಿ ಕಚೇರಿಯಲ್ಲಿ ನೋಂದಣಿ ಮಾಡಲು ಅನುಕೂಲವಾಗುವಂತೆ ''ಎನಿವೇರ್ ನೋಂದಣಿ'' ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದ್ದಾರೆ.



ನೋಂದಣಿ ಕಾಯ್ದೆ-1908ರ ಕಲಂ (5) ಹಾಗೂ ಕಲಂ(6) ರಂತೆ 2011ರಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಮತ್ತು ಕಳೆದ ಮಾರ್ಚ್ ಮಾಹೆಯಲ್ಲಿ ತುಮಕೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಈ ವ್ಯವಸ್ಥೆಯನ್ನು ಪ್ರಾಯೋಗಿಕವಾಗಿ ಜಾರಿಗೆ ತರಲಾಗಿತ್ತು. ಅಲ್ಲಿ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಇದೀಗ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ರಾಜ್ಯದ ಎಲ್ಲಾ ಜಿಲ್ಲಾ ಘಟಕವನ್ನು ಒಂದು ಯೂನಿಟ್ ಎಂದು ಪರಿಗಣಿಸಿ ಆ ಜಿಲ್ಲೆಯ ಎಲ್ಲಾ ಉಪ ನೋಂದಣಿ ಕಛೇರಿಗಳಿಗೂ ವಿಸ್ತರಿಸಿ ಸರ್ಕಾರ ಆದೇಶಿಸಿದೆ ಎಂದರು. ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪ ನೋಂದಣಿ ಕಛೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದೆ. ಎನಿವೇರ್ ನೋಂದಣಿ ವ್ಯವಸ್ಥೆ ಜಾರಿಯಿಂದ ಸಿರಾಸ್ತಿ ಇರುವ ಕೋಲಾರ ಜಿಲ್ಲೆಯ ಯಾವುದಾದರೂ ಉಪ ನೋಂದಣಿ ಕಛೇರಿಯಲ್ಲಿ ದಸ್ತಾವೇಜು ನೋಂದಾಯಿಸಿಕೊಳ್ಳಬಹುದಾಗಿದೆ.

ಸಾರ್ವಜನಿಕರು ಎನಿವೇರ್ ನೋಂದಣಿ ವ್ಯವಸ್ಥೆಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಛೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ಮನವಿ ಮಾಡಿದ್ದಾರೆ. ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ನೋಂದಣಿ ಪಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿತಾಯವಾಗಲಿದೆ. ನೋಂದಣಿಯಲ್ಲಿ ಪಾರದರ್ಶಕತೆ ಹೆಚ್ಚಲಿದ್ದು, ವಿಳಂಬವನ್ನು ತಡೆಗಟ್ಟಲಿದೆ. ಸಾರ್ವಜನಿಕರು ಸ್ಲಾಟ್ ಲಭ್ಯವಿರುವಂತಹ ಸಮೀಪದ ನೋಂದಣಿ ಕಚೇರಿಯನ್ನು ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಬಹುದು. ಇದರಿಂದ ಉಪ ನೋಂದಣಿ ಕಛೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುವುದಲ್ಲದೆ ಕಛೇರಿ ಸಿಬ್ಬಂದಿಗಳ ಮೇಲಿನ ಕೆಲಸದ ಒತ್ತಡ ಸಹ ಕಡಿಮೆಯಾಗಲಿದೆ ಎಂದರು.

# ಸ್ವಾರ್ಥ ರಹಿತ ಬದುಕಿಗೆ ಬೆಲೆ ಬಲವಿದೆ

**ಶ್ರೀ ರಂಭಾಪುರಿ ಪೀಠ(ಬಾಳೆಹೊನ್ನೂರು):** ಬದುಕು ಕೊಟ್ಟ ಭಗವಂತನ ಶಕ್ತಿ ಅದ್ಭುತ. ಆಧ್ಯಾತ್ಮಿಕತೆ ಬದುಕಿಗೆ ಧರ್ಮ ಆಶಾಕಿರಣ. ಸ್ವಾರ್ಥ ರಹಿತ ಬದುಕಿಗೆ ಬೆಲೆ ಮತ್ತು ಬಲವಿದೆ ಎಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ಶ್ರೀರಂಭಾಪುರಿ ಪೀಠದಲ್ಲಿ ಜರುಗಿದ ಶ್ರಾವಣ ಪುರಾಣ ಪ್ರವಚನ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಸಂಸ್ಕಾರ ಬದುಕನ್ನು ಉಜ್ವಲಗೊಳಿಸುತ್ತದೆ. ಸ್ವಾರ್ಥವನ್ನು ಗೆದ್ದವನು ಶಾಂತಿಯನ್ನು ಪಡೆದವನು ಮತ್ತು ಸತ್ಯವನ್ನು ತಿಳಿದವನು ನಿಜವಾದ ಸುಖಿ. ಹಸಿದು ಉಣ್ಣುವುದು ಪ್ರಕೃತಿ ಧರ್ಮ. ಹಂಚಿ ಉಣ್ಣುವುದು ಸಂಸ್ಕೃತಿಯ ಗುಣ. ಮನಸ್ಸಿಟ್ಟು ಮಾಡಿದ ಕೆಲಸ, ಕಷ್ಟಪಟ್ಟು ದುಡಿದ ಹಣ, ಹಲವರೊಂದಿಗೆ ಹಂಚಿ ತಿನ್ನುವ ಗುಣ, ಭಕ್ತಿಯಿಂದ ಮಾಡುವ ದೇವರ ಪೂಜೆ ಎಂದಿಗೂ ನಮ್ಮನ್ನು ಕೈ ಬಿಡುವುದಿಲ್ಲವೆಂಬ ನಂಬಿಕೆ ಕಳೆದುಕೊಳ್ಳಬಾರದು. ಕತ್ತಲಲ್ಲಿ ನಡೆಯುವಾಗ ಬೆಳಕಿನ, ಬಿಸಿಲಿನಲ್ಲಿ ನಡೆಯುವಾಗ ನೆರಳಿನ ಅವಶ್ಯಕತೆಯಿದೆ ಜೀವನದ ದಾರಿಯಲ್ಲಿ ಸಾಗುವಾಗ ಒಳ್ಳೆಯ ಸ್ನೇಹಿತರ ಮತ್ತು ಮಾರ್ಗದರ್ಶಕರ ಅವಶ್ಯಕತೆಯಿದೆ. ಬಾಳಿಗೊಂದು ಗೊನೆಯಿರುವಂತೆ ಬಾಳಿಗೊಂದು ಗುರಿ ಇರಬೇಕೆಂದು ಮಹಾತ್ಮರು ನುಡಿದಿದ್ದಾರೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ನೊಂದವರ ಬೆಂದವರ ಧ್ವನಿಯಾಗಿ ಸತ್ಕಾರ್ಯಗಳನ್ನು ಮಾಡಿದ ಶ್ರೇಯಸ್ಸು ಅವರಿಗಿದೆ. ಮೌಲ್ಯಾಧಾರಿತ ಬದುಕನ್ನು ಅಳವಡಿಸಿಕೊಂಡು ಬಾಳಿದರೆ ಶ್ರೇಯಸ್ಸು ಕಟ್ಟಿಟ್ಟ ಬುತ್ತಿ ಎಂದರು. ಇದೇ ಸಂದರ್ಭದಲ್ಲಿ ಸಪ್ಟಂಬರ್ ತಿಂಗಳ ''ರಂಭಾಪುರಿ ಬೆಳಗು'' ಪತ್ರಿಕೆಯನ್ನು ಬಿಡುಗಡೆ ಮಾಡಿದರು.

ಪುರಾಣ ಪ್ರವಚನ ಮಾಡಿದ ಉಟಗಿ ಹಿರೇಮಠದ ಶಿವಪ್ರಸಾದ ದೇವರು ಮಾತನಾಡಿ ಹೊಗಳಿಕೆ ಮತ್ತು ತೆಗಳಿಕೆ ಸಹಜವಾಗಿದ್ದು ಎಲ್ಲರ ಜೀವನದಲ್ಲಿ ನಡೆಯುವ ಘಟನೆಗಳನ್ನು ಸ್ವೀಕರಿಸಿ. ಹೂವು ಅರಳಿ ಮಿನುಗಲು ಸೂರ್ಯನ ಬೆಳಕು ಮತ್ತು ಮಳೆ ಎರಡೂ ಬೇಕು. ಶ್ರೀ ಜಗದ್ಗುರು ರೇಣುಕಾಚಾರ್ಯರು ಸಮಚಿತ್ತ ಬದುಕನ್ನು ಕಟ್ಟಿಕೊಳ್ಳಲು ಕೊಟ್ಟ ಸಂದೇಶಗಳನ್ನು ಯಾರೂ ಮರೆಯಬಾರದೆಂದರು.

ನೇತೃತ್ವ ವಹಿಸಿದ ಹುಡಗಿ ಹಿರೇಮಠದ ವಿರೂಪಾಕ್ಷಲಿಂಗ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ ಒಳ್ಳೆಯ ನಡತೆಯಿಂದ ನಮಗೆ ಯಾವುದೇ ಲಾಭ ಸಿಗದೇ ಇರಬಹುದು. ಆದರೆ ಅಂತಹ ಗುಣಕ್ಕೆ ಸುಮಾರು ಹೃದಯಗಳನ್ನು ಗೆಲ್ಲುವ ಶಕ್ತಿಯಿದೆ ಎಂದರು.

ಈ ಧರ್ಮ ಸಮಾರಂಭದಲಿ ಮಳಖೇಡ ಕಾರ್ತಿಕೇಶ್ವರ ಮಠದ ಅಭಿನವ ಕಾರ್ತಿಕೇಶ್ವರ ಶ್ರೀಗಳು, ದೇವರಭೂಪುರ ಬೃಹನ್ಮಠದ ಅಭಿನವ ಗಜದಂಡ ಶ್ರೀಗಳು, ರಾಮಗೇರಿ ಮಠದ ಉಮೇಶ್ವರ ಶ್ರೀಗಳು, ಮಾವನೂರು ಬೃಹನ್ಮಠದ ವಿರೂಪಾಕ್ಷ ಶ್ರೀಗಳು, ರಟ್ಟೀಹಳ್ಳಿ ವಿಶ್ವೇಶ್ವರ ದೇವರು ಪಾಲ್ಗೊಂಡಿದ್ದರು. ವಿವಿಧ ರಂಗಗಳಲ್ಲಿ ಸೇವೆ ಸಲ್ಲಿಸಿದವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆಯಿತ್ತು ಶುಭ ಹಾರೈಸಿದರು.

# ಜಿಲ್ಲೆಯಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆ ಜಾರಿ

**ಚಾಮರಾಜನಗರ:** ರಾಜ್ಯದ ಮೂರು ಜಿಲ್ಲೆಗಳಲ್ಲಿ ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತಿರುವ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ಚಾಮರಾಜನಗರ ಜಿಲ್ಲೆಯ ಉಪನೋಂದಣಿ ಕಚೇರಿಗಳಿಗೂ ವಿಸ್ತರಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ತಿಳಿಸಿದ್ದಾರೆ. ಪುಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪನೋಂದಣಿ ಕಚೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿತ್ತು. ಆದರೆ ಎನಿವೇರ್ ನೋಂದಣಿಯಲ್ಲಿ ದಸ್ತಾವೇಜನ್ನು ಸ್ಥಿರಾಸ್ತಿ ಇರುವ ಜಿಲ್ಲೆಯ ಯಾವುದಾದರೂ ಉಪನೋಂದಣಿ ಕಚೇರಿಯಲ್ಲಿ ನೋಂದಾಯಿಸಿಕೊಳ್ಳಬಹುದಾಗಿದೆ. 2024-25ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ರಾಜ್ಯದ ಎಲ್ಲಾ ಜಿಲ್ಲೆಗಳಿಗೂ ವಿಸ್ತರಿಸಲಾಗುವುದೆಂದು ಸರ್ಕಾರದಿಂದ ಘೋಷಿಸಲಾಗಿರುತ್ತದೆ. ಈ ವ್ಯವಸ್ಥೆಯನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ 2011ರಲ್ಲಿ, ತುಮಕೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಮಾರ್ಚ್ 2024ರಲ್ಲಿ ನೋಂದಣಿ ಕಾಯ್ದೆ 1908ರ ಕಲಂ (5) ಹಾಗೂ ಕಲಂ (6) ರಡಿಯಲ್ಲಿ ಜಾರಿಗೆ ಅನುಷ್ಠಾನಗೊಳಿಸಲಾಗಿರುತ್ತದೆ. ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ದಸ್ತಾವೇಜಿನ ನೋಂದಣಿಯಲ್ಲಿ ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ. ನೋಂದಣಿಯಲ್ಲಿ ವಿಳಂಬವನ್ನು ತಡೆಗಟ್ಟುತ್ತದೆ. ಸಾರ್ವಜನಿಕರು ಸಮೀಪದಲ್ಲಿರುವ ಉಪನೋಂದಣಿ ಕಚೇರಿಯಲ್ಲಿ ದಸ್ತಾವೇಜನ್ನು ನೋಂದಾಯಿಸಬಹುದು. ಸ್ಲಾಟ್ ಲಭ್ಯವಿರುವಂತಹ ಕಚೇರಿಯನ್ನು ನೋಂದಣಿಗೆ ಆಯ್ಕೆ ಮಾಡಿಕೊಳ್ಳಬಹುದು. ನೋಂದಣಿ ಪ್ರಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿಯುತ್ತದೆ. ಉಪನೋಂದಣಿ ಕಚೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುತ್ತದೆ. ಕಚೇರಿ ಸಿಬ್ಬಂದಿ ಮೇಲೆ ಕೆಲಸದ ಒತ್ತಡ ಕಡಿಮೆಯಾಗುತ್ತದೆ ಹಾಗೂ ಕಚೇರಿಗಳಲ್ಲಿ ನೋಂದಣಿ ಕೆಲಸ ಸಮಾನವಾಗಿ ಹಂಚಿಕೆಯಾಗುತ್ತದೆ.

ಆದುದರಿಂದ ಸಾರ್ವಜನಿಕರು ಎನಿವೇರ್ ನೋಂದಣಿಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಚೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾರಿ ಶಿಲ್ಪಾ ನಾಗ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ರಹ್ಮಕುಮಾರಿ ಕೇಂದ್ರದಲ್ಲಿ ರಕ್ಷಾ ಬಂಧನ



**ಹುಳಿಯಾರು:** ಪಟ್ಟಣದ ಪ್ರಜಾಪಿತ ಬ್ರಹ್ಮಾಕುಮಾರಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ರಕ್ಷಾ ಬಂಧನ ಹಾಗೂ ಶ್ರೀಕೃಷ್ಣ ಜನ್ಮಾಷ್ಟಮಿ ಮತ್ತು ದಾದಿ ಪ್ರಕಾಶ್ ಮಣಿಜಿಯವರ ಸ್ಮೃತಿ ದಿವಸದ ಕಾರ್ಯಕ್ರಮ ಆಯೋಜಿಸಲಾಗಿತ್ತು. ಧಾರವಾಡದ ಬ್ರಹ್ಮಕುಮಾರಿ ರಾಜಯೋಗಿನಿ ಜಯಂತಿ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ ರಕ್ಷಾ ಬಂಧನ ಹಬ್ಬವು ವಿಶಿಷ್ಟವಾಗಿದ್ದು, ಭಾರತದ ಸಂಸ್ಕೃತಿ ಮತ್ತು ಮಾನವೀಯ ಮೌಲ್ಯಗಳನ್ನು ಎತ್ತಿ ತೋರಿಸುವ ಆಚರಣೆಯಾಗಿದೆ. ಸಹೋದರತೆಯನ್ನು ಗಟ್ಟಿಗೊಳಿಸುತ್ತದೆ. ಇದು ಮಾನವ ಜನಾಂಗದ ರಕ್ಷಣೆ ಪ್ರೇರಣೆ ನೀಡುತ್ತದೆ ಅಲ್ಲದೆ, ಮನಸ್ಸಿನ ಶುದ್ಧೀಕರಣ ಮಾಡುತ್ತದೆ ಎಂದರು. ಹುಳಿಯಾರು ಬ್ರಹ್ಮ ಕುಮಾರಿ ಕೇಂದ್ರದ ಪ್ರಧಾನ ಸಂಚಾಲಕಿ ಗಿತಕ್ಕ ಮಾತನಾಡಿ ಸೌಹಾರ್ದತೆಯ ಸಂಕೇತವೇ ರಕ್ಷಾ ಬಂಧನವಾಗಿದೆ. ಸರ್ವರನ್ನೂ ಸದ್ಭಾವನೆಯಿಂದ ಕಂಡು ಅವರಿಗೂ ಭಗವಂತನ ಶಕ್ತಿ ಇರಲಿ, ಎಲ್ಲ ಕ್ಷೇತ್ರಗಳಲ್ಲಿ ಬಲಿಷ್ಠವಾಗಿ ಬೆಳೆಯಲಿ ಎಂಬ ಒಳ್ಳೆಯ ಭಾವನೆಯಿಂದ ಕಟ್ಟುವ ರಾಖಿಯು ಅವರಿಗೆ ರಕ್ಷಣೆಯಾಗುತ್ತದೆ ಎಂದರು. ಮಲ್ಲಿಕಾರ್ಜುನಯ್ಯ, ತಿಮ್ಮಯ್ಯ, ನಿಜಲಿಂಗಪ್ಪ, ಮರಿಯಣ್ಣ,

ರಾಮಚಂದ್ರ, ಲಕ್ಷ್ಮಿ, ರೇಣುಕಾ, ಉಮಾ, ಗೌರಮ್ಮ, ಲಲಿತಮ್ಮ, ರಾಜಣ್ಣ, ದುರ್ಗರಾಜುಮತ್ತಿತರರು ಇದ್ದರು.

# ಬೆಳ್ಳಾರ ಶಾಲಾ ಮಕ್ಕಳಿಗೆ ಬಹುಮಾನ

**ಹುಳಿಯಾರು:** 2024-25 ನೇ ಸಾಲಿನ ಹುಳಿಯಾರು ಬಿ ವಿಭಾಗದ ಕ್ರೀಡಾಕೂಟದಲ್ಲಿ ಹುಳಿಯಾರು ಹೋಬಳಿಯ ಬೆಳ್ಳಾರದ ಸರ್ಕಾರಿ ಹಿರಿಯ ಪ್ರಾಥಮಿಕ ಪಾಠಶಾಲೆಯ ಮಕ್ಕಳು ಉತ್ತಮ ಸಾಧನೆ ಮಾಡಿದ್ದಾರೆ.

200 ಮೀ. ಓಟದಲ್ಲಿ ವೀರಭದ್ರ (ಪ್ರ), ಪ್ರಜ್ವಲ್ (ದ್ವಿ), ಮಾನ್ಯ (ತೃ), 600 ಮೀ. ಓಟದಲ್ಲಿ ಅರುಣ್ ಕುಮಾರ್ (ಪ್ರ), ಅಪ್ಸರ (ತೃ), 400 ಮೀ.ಓಟದಲ್ಲಿ ಕಿಶನ್ (ಪ್ರ), ಕಿರಣ್ ಕುಮಾರ್ (ದ್ವಿ) ಬಹುಮಾನ ಪಡೆದಿದ್ದಾರೆ.

ಗಂಡು ಮಕ್ಕಳ ಖೋಖೋದಲ್ಲಿ ಪ್ರಥಮ, ರಿಲೇಯಲ್ಲಿ ದ್ವಿತೀಯ, ಹೆಣ್ಣು ಮಕ್ಕಳ ಖೋಖೋದಲ್ಲಿ ದ್ವಿತೀಯ ಬಹುಮಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಮುಖ್ಯಶಿಕ್ಷಕಿ ಟಿ.ಎಂ. ಶಂಕರಮ್ಮ, ದೈಹಿಕ ಶಿಕ್ಷಣ ಶಿಕ್ಷಕರಾದ ಕೆ.ಚಂದ್ರನಾಯ್ಕ, ಎಸ್.ಡಿ.ಎಂ.ಸಿ ಅಧ್ಯಕ್ಷರಾದ ಎಸ್.ಮಹೇಶ್, ಉಪಾಧ್ಯಕ್ಷರಾದ ರಮ್ಯ, ಶಿಕ್ಷಕರಾದ ಕೆ.ಎಲ್.ಪದ್ಮಾ, ಜಿ.ಸಿ.ಅನಿತಾ, ಎಸ್.ಮಂಜುನಾಥ್, ಎನ್.ಭಾಗ್ಯ ಅಭಿನಂಧಿಸಿದ್ದಾರೆ.



# ಗ್ರಾಮ ಸಹಾಯಕರ ಹುದ್ದೆಗೆ ಅರ್ಜಿ ಆಹ್ವಾನ

**ಕೋಲಾರ:** ವಕ್ಕಲೇರಿ ಹೋಬಳಿ ಸೂಲೂರು ಕಂದಾಯ ವೃತ್ತದ ಗ್ರಾಮ ಸಹಾಯಕರ ಹುದ್ದೆ ಖಾಲಿಯಾಗಿರುವುದರಿಂದ ಈ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಇಚ್ಚೆಯುಳ್ಳ ಅಭ್ಯರ್ಥಿಗಳು ಸಂಬಂಧಪಟ್ಟ ಕಂದಾಯ ವೃತ್ತದಲ್ಲಿ ವಾಸವಿರುವ ಕೆಳದರ್ಜೆ ಗ್ರಾಮ ನೌಕರರರ ಕುಟುಂಬಕ್ಕೆ ಸೇರಿರುವ ಅರ್ಜಿದಾರರು 25 ವರ್ಷಗಳು ಮೇಲ್ಪಟ್ಟು 65 ವರ್ಷದೊಳಗಿರಬೇಕು. ಸಾಮಾನ್ಯ ಅಕ್ಷರ ಜ್ಞಾನ ಹೊಂದಿರಬೇಕು. ರಿಗ್ಯಾಂಟ್ ಪ್ರಮಾಣ ಪತ್ರ, ಹಾಗೂ ಜಾತಿ ಮತ್ತು ಆದಾಯ ಪ್ರಮಾಣ ಪತ್ರ. ಅರ್ಜಿಯೊಂದಿಗೆ ಗಣಕೀಕೃತ ವಾಸಸ್ಥಳ ದೃಡೀಕರಣ ಪತ್ರ, ಆಧಾರ್ ಕಾರ್ಡ್, ಪೊಲೀಸ್ ನಿರಾಕ್ಷೇಪಣೆ ಪತ್ರ, ವೈದ್ಯಕೀಯ ಫಿಟ್ನೆಸ್ ಪ್ರಮಾಣ ಪತ್ರ, ನಿರುದ್ಯೋಗ ಪ್ರಮಾಣ ಪತ್ರಗಳ ಲಗತ್ತಿಸಬೇಕು. ಅರ್ಜಿಗಳನ್ನು ಸೆಪ್ಟೆಂಬರ್ 13 ರಂದು ಸಂಜೆ 5:00 ಗಂಟೆಯೊಳಗಾಗಿ ತಾಲ್ಲೂಕು ಕಛೇರಿಯಲ್ಲಿ ಸಲ್ಲಿಸಬಹುದು ಎಂದು ಕೋಲಾರ ತಾಲ್ಲೂಕು ತಹಶೀಲ್ದಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೇರ ಸಂದರ್ಶನ

**ಕೋಲಾರ:** ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿ ಅಭಿಯಂತರ ವಿಭಾಗಕ್ಕೆ ಸಂಬಂಧಿಸಿದಂತೆ, ಕಾಮಗಾರಿಗಳ ಕಾರ್ಯವೈಖರಿಗಳನ್ನು ನೋಡಿಕೊಳ್ಳಲು ಹಾಗೂ ಸಮಾಲೋಚಕರಾಗಿ ಕಾರ್ಯನಿರ್ವಹಿಸಲು ಸಿವಿಲ್ ಇಂಜನಿಯರಿಂಗ್ ಅಡಿಯ ಸರ್ಕಾರಿ ಸಂಸ್ಥೆಗಳಲ್ಲಿ ಕನಿಷ್ಠ 10 ವರ್ಷ ಕೆಲಸ ಮಾಡಿ ಅನುಭವ ಹೊಂದಿರತಕ್ಕದ್ದು ಹಾಗೂ ವಯಸ್ಸು 65 ವರ್ಷ ಮೀರಿರಬಾರದು. ನೇರ ಸಂದರ್ಶನವನ್ನು ಸೆಪ್ಟೆಂಬರ್ 18 ಸಮಯ ಮಧ್ಯಾಹ್ನ 3:00 ಗಂಟೆಗೆ ಟಮಕ ಶ್ರೀ ದೇವರಾಜ ಅರಸು ಬಡಾವಣೆ ಬೆಂಗಳೂರು ಉತ್ತರ ವಿಶ್ವವಿದ್ಯಾನಿಲಯದ ಆಡಳಿತ ಕಛೇರಿಯಲ್ಲಿ ಏರ್ಪಡಿಸಲಾಗಿದ್ದು, ಅರ್ಹ ಅಭ್ಯರ್ಥಿಗಳು ಸಂದರ್ಶನಕ್ಕೆ ಹಾಜರಾಗಬಹುದು. ಹೆಚ್ಚಿನ ಮಾಹಿತಿಗಾಗಿ ವಿಶ್ವವಿದ್ಯಾಲಯ ಅಧಿಕೃತ ವೆಬ್ ಸೈಟ್‌ನ್ನು ಸಂಪರ್ಕಿಸಬಹುದು ಎಂದು ಕೋಲಾರ, ಟಮಕ, ಬೆಂಗಳೂರು ಉತ್ತರ ವಿಶ್ವವಿದ್ಯಾಲಯದ ಕುಲಸಚಿವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್ ಸಮೀಕ್ಷೆ

**ಕೋಲಾರ:** ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಸಮೀಕ್ಷೆಯನ್ನು ವೇಮಗಲ್ ಕುರುಗಲ್ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ನಡೆಸುತ್ತಿದ್ದು, "The Prohibition of Employment as manual Scavengers and their Rehabilitaion Act, 2013ರ ಸೆಕ್ಷನ್‌ರಲ್ಲಿ ಮ್ಯಾನ್ಯುಯಲ್ ಸ್ಕ್ಯಾವೆಂಜರ್ಸ್‌ಗಳ ಕುರಿತು ವ್ಯಾಖ್ಯಾನಿಸಿರುವಂತೆ, ಒಣ ಶೌಚಾಲಯಗಳನ್ನು ಸ್ವಚ್ಛಗೊಳಿಸುವುದು. ಅನ್ನೈರ್ಮಲ್ಯ ಶೌಚಾಲಯಗಳಿಂದ ಹೊರಹೋಗಿ ತೆರೆದ ಚರಂಡಿಯಲ್ಲಿ ಸಂಗ್ರಹವಾಗುವ ಮಾನವ ಮಲವನ್ನು ಸ್ವಚ್ಛಗೊಳಿಸುವುದು. ಶೌಚಾಲಯದ ಮಲಗುಂಡಿಗಳನ್ನು ದೈಹಿಕವಾಗಿ ಸ್ವಚ್ಛಗೊಳಿಸುವುದು. ಈ ವರ್ಗದಲ್ಲಿನ ಯಾವುದೇ ವ್ಯಕ್ತಿಗಳು ಇದ್ದಲ್ಲಿ, ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿ ಕಾರ್ಯಾಲಯ ಸ್ಥಳಗಳಲ್ಲಿ ಆಯೋಜಿಸಿರುವ ಸಮೀಕ್ಷೆ ಮತ್ತು ಗುರುತಿಸುವಿಕೆಯ ಶಿಬಿರದಲ್ಲಿ ಸ್ವಯಂ ಭಾಗವಹಿಸಿ, ದಾಖಲೆಗಳೊಂದಿಗೆ ಆಗಸ್ಟ್ 30 ರಂದು ಸಂಜೆ 5.30 ಗಂಟೆಯೊಳಗೆ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಶಿಬಿರದಲ್ಲಿ ನೊಂದಣಿ ಮಾಡಿಸಲು ದಾಖಲೆಗಳು ಪಾಸ್ ಪೋರ್ಟ್ ಅಳತೆಯ ಒಂದು ಭಾವಚಿತ್ರ. ಕುಟುಂಬದ ಸದಸ್ಯರುಗಳನ್ನು ಒಳಗೊಂಡ ಒಂದು ಭಾವಚಿತ್ರ. ಬ್ಯಾಂಕ್ ಖಾತೆಯ ಪಾಸ್‌ಬುಕ್‌ನ ಮುಖ ಪುಟದ ಪ್ರತಿ. ಆಧಾರ್ ಪ್ರತಿ. ಮ್ಯಾನ್ಯುಯಲ್ ಸ್ಕ್ಯಾವೆಂಜಿಂಗ್ ಕಾರ್ಯನಿರ್ವಹಿಸುತ್ತಿರುವ ಅನ್ನೈರ್ಮಲ್ಯ ಶೌಚಾಲಯ ಸ್ಥಳದ ವಿವರಗಳನ್ನು ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ವೇಮಗಲ್ ಕುರುಗಲ್ ಪಟ್ಟಣ ಪಂಚಾಯಿತಿ ಆರೋಗ್ಯ ಶಾಖೆಯ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪಂಚಾಯಿತಿಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಥಮ ಸೆಮಿಸ್ಟರ್ ಡಿಪ್ಲೊಮಾ ಕೋರ್ಸುಗಳಿಗೆ ಅರ್ಜಿ ಆಹ್ವಾನ

**ಕೋಲಾರ:** ಪ್ರಸಕ್ತ ಸಾಲಿನಲ್ಲಿ ಆಫ್‌ಲೈನ್ ಮುಖಾಂತರ ಮೆರಿಟ್ ಮತ್ತು ರೋಷ್ಟರ್‌ಗನು ಗುಣವಾಗಿ ಎಸ್.ಎಸ್.ಎಲ್.ಸಿಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ಪ್ರಥಮ ಸೆಮಿಸ್ಟರ್ ಡಿಪ್ರೋಮಾ ಕೋರ್ಸುಗಳಿಗೆ ಪ್ರವೇಶ ಅರ್ಜಿ ಆಹ್ವಾನಿಸಲಾಗಿದೆ. ಡಿಪ್ಲೋಮಾ ಕೋಸ್‌ಗಳಿಗೆ ಅರ್ಹ ಅಭ್ಯರ್ಥಿಗಳಿಂದ ಆಫ್‌ಲೈನ್ ಮೂಲಕ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ, ಮೆರಿಟ್ ಮತ್ತು ರೋಷ್ಟರ್‌ಗನು ಗುಣವಾಗಿ ಆಫ್‌ಲೈನ್ ಮುಖಾಂತರ ಸೀಟು ಹಂಚಿಕೆ ಪ್ರವೇಶಾತಿ ಪಡೆಯಬಹುದು. ಡಿಪ್ರೋಮಾ ಪ್ರವೇಶ ಬಯಸುವ ಅರ್ಹ ಅಭ್ಯರ್ಥಿಗಳು ಸೆಪ್ಟೆಂಬರ್ 05 ರೊಳಗೆ ಭರ್ತಿ ಮಾಡಿದ ಅರ್ಜಿ ಮತ್ತು ಸೂಕ್ತ ದಾಖಲಾತಿಗಳೊಂದಿಗೆ ಈ ಸಂಸ್ಥೆಗೆ ಸಲ್ಲಿಸಬೇಕಾಗಿರುತ್ತದೆ. ಸೆಪ್ಟೆಂಬರ್ 06ರ ಬೆಳಿಗ್ಗೆ 10.30ಕ್ಕೆ ಮೆರಿಟ್ ಪಟ್ಟಿಯನ್ನು ಪ್ರಕಟಿಸಲಾಗುತ್ತದೆ ಮತ್ತು ಆ ದಿನವೇ ಸೂಕ್ತ ದಾಖಲೆಯೊಂದಿಗೆ ಪ್ರವೇಶ ಪಡೆಯಬಹುದು. ಅರ್ಜಿ ನಮೂನೆ ಮತ್ತು ಹೆಚ್ಚಿನ ಮಾಹಿತಿಗಾಗಿ ಈ ಸಂಸ್ಥೆಯ ಸಿಬ್ಬಂದಿ ವರ್ಗದವರು ಎಂ.ಎನ್ ಗಿರೀಶ್-8310440596, ಎಲ್ ರಾಜನ್-9449527575, ಲಕ್ಷ್ಮೀಕಾಂತ್.ಸಿ.ಹೆಚ್.-9019630841, ಮುನಿಕೃಷ್ಣಪ್ಪ. ಎಂ.ಇ-9740500194, ಕೆ.ಶಿವಶಂಕರ್-9902722822 ಯನ್ನು ಸಂಪರ್ಕಿಸಬಹುದು ಎಂದು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆಯ ಗಣಿ ಶಿಕ್ಷಣ ಶಾಲೆಯ ಪ್ರಾಂಶುಪಾಲರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಚಾಮರಾಜನಗರದಲ್ಲಿ ಎಂಎಸ್‌ಐಎಲ್ ಚಿಟ್ ಫಂಡ್: ಸದುಪಯೋಗಕ್ಕೆ ಮನವಿ

**ಚಾಮರಾಜನಗರ:** ಎಂಎಸ್‌ಐಎಲ್ ಸಂಸ್ಥೆಯು ಹೊಸ ಚಿಟ್‌ಫಂಡ್ ಶಾಖೆಯನ್ನು ಆಗಸ್ಟ್ 30ರಂದು ಚಾಮರಾಜನಗರದಲ್ಲಿ ಪ್ರಾರಂಭಿಸುತ್ತಿದ್ದು, ಚಾಮರಾಜನಗರದ ವ್ಯಾಪ್ತಿಗೆ ಬರುವ ಸಾರ್ವಜನಿಕರು ಇದರ ಸದುಪಯೋಗ ಪಡಿಸಿಕೊಳ್ಳಬಹುದಾಗಿದೆ.

ಎಂಎಸ್‌ಐಎಲ್ ಸಂಸ್ಥೆಯು ಕರ್ನಾಟಕ ಸರ್ಕಾರದ ಒಂದು ಅಂಗ ಸಂಸ್ಥೆಯಾಗಿದ್ದು, ಬಹು ವಿಭಾಗೀಯ ಮಾರುಕಟ್ಟೆಯನ್ನು ಹೊಂದಿದೆ. ಕಂಪನಿಯ ಪ್ರಮುಖ ವ್ಯವಹಾರವು ಕರ್ನಾಟಕ ರಾಜ್ಯದಲ್ಲಿ ಚಿಲ್ಲರೆ ಮದ್ಯ ಮಾರಾಟ ಕಾರ್ಯಾಚರಣೆಗಳು, ಚಿಟ್ ಫಂಡ್ ವ್ಯವಹಾರ, ನೋಟ್ ಪುಸ್ತಕಗಳು ಮತ್ತು ಲೇಖನ ಸಾಮಾಗ್ರಿ, ಟೂರ್ಸ್ ಮತ್ತು ಟ್ರಾವೆಲ್ಸ್, ಜನೌಷಧಿ ಹಾಗೂ ಗ್ರಾಹಕ ಮತ್ತು ಕೈಗಾರಿಕಾ ಉತ್ಪನ್ನ ವ್ಯವಹಾರಗಳಲ್ಲಿ ತೊಡಗಿಸಿಕೊಂಡಿದೆ. ಸಂಸ್ಥೆಯು ಪ್ರಸಕ್ತ ವರ್ಷದಲ್ಲಿ 3,769 ರೂ. ಕೋಟಿಗಳ ವ್ಯವಹಾರ ಹೊಂದಿರುತ್ತದೆ.

ಎಂಎಸ್‌ಐಎಲ್ ಸಂಸ್ಥೆಯು 2005ರಲ್ಲಿ ಚಿಟ್ ಫಂಡ್ ವ್ಯವಹಾರದಲ್ಲಿ ತೊಡಗಿಸಿಕೊಂಡಿದ್ದು, ಚಿಟ್‌ಫಂಡ್ ವ್ಯವಹಾರದ ಮೇಲೆ ಸಾಮಾಜಿಕ ನಿಯಂತ್ರಣವನ್ನು ತರುವ ಉದ್ದೇಶದಿಂದ ಮತ್ತು ಸಾರ್ವಜನಿಕರನ್ನು, ನೊಂದಾಯಿತವಲ್ಲದ, ಅನಿಶ್ಚಿತ ಚಿಟ್ ಆಪರೇಟರ್‌ಗಳ ಶೋಷಣೆಯಿಂದ ರಕ್ಷಿಸುವ ಉದ್ದೇಶ ಹೊಂದಿದೆ. ಸಂಸ್ಥೆಯ ಚಿಟ್‌ಫಂಡ್ ವ್ಯವಹಾರವು ಹೂಡಿಕೆ ಮತ್ತು ಎರವಲು ಎರಡಕ್ಕೂ ಒಂದು ಅನನ್ಯ ಅವಕಾಶವನ್ನು ಒದಗಿಸುತ್ತದೆ. ಸಣ್ಣ ಉಳಿತಾಯವನ್ನು ಏಕರೂಪವಾಗಿ ಸಜ್ಜುಗೊಳಿಸಲು ಜನರನ್ನು ಸಕ್ರಿಯಗೊಳಿಸುತ್ತದೆ.

ಎಂಎಸ್‌ಐಎಲ್ ಸಂಸ್ಥೆಯು ಕರ್ನಾಟಕ ರಾಜ್ಯಾದ್ಯಂತ 26 ಶಾಖೆಗಳನ್ನು ಹೊಂದಿದ್ದು, ಮಾರ್ಚ್ 2024ಕ್ಕೆ 412 ಕೋಟಿ ರೂ. ವಹಿವಾಟು ಹೊಂದಿರುತ್ತದೆ. ಸುಮಾರು 616 ಚಿಟ್ ಗ್ರೂಪ್‌ಗಳು ಚಾಲನೆಯಲ್ಲಿವೆ. ಸದ್ಯ 24,770 ಚಂದಾದಾರರು ಸಂಸ್ಥೆಯ ಚಿಟ್‌ಗಳಲ್ಲಿ ತೊಡಗಿಸಿಕೊಂಡಿಸಿದ್ದು, ಇಲ್ಲಿಯವರೆಗೂ ಸುಮಾರು 3 ಲಕ್ಷ ಚಂದಾದಾರರು ಸಂಸ್ಥೆಯ ಚಿಟ್‌ಫಂಡ್ ಫಲಾನುಭವಿಗಳಾಗಿರುತ್ತಾರೆ. 2024ರ ವರ್ಷಾಂತ್ಯಕ್ಕೆ 550 ಕೋಟಿ ರೂ.ಗಳ ವಹಿವಾಟಿನ ಯೋಜನೆ ಹೊಂದಿದೆ.

ಸರ್ಕಾರದ ಆದೇಶದಂತೆ ಸ್ವಸಹಾಯ ಸಂಘ (ಎಸ್‌ಹೆಚ್‌ಜಿ)ಗಳಿಗೆ ವಿಶೇಷವಾಗಿ ಪ್ರಾಯೋಗಿಕ ಚಿಟ್ ಯೋಜನೆಯನ್ನು ನಡೆಸಲು ಗ್ರಾಮಾಂತರ ಪ್ರದೇಶಗಳಿಗೆ ವಿಶೇಷವಾಗಿ ಮೈಕ್ರೋಚಿಟ್ ಯೋಜನೆಯನ್ನು ಸಹ ರೂಪಿಸಲಾಗಿದೆ. ಚಾಮರಾಜನಗರದಲ್ಲೂ ಎಂಎಸ್‌ಐಎಲ್ ಸಂಸ್ಥೆಯು ಹೊಸ ಚಿಟ್ ಫಂಡ್ ಶಾಖೆಯನ್ನು ಆಗಸ್ಟ್ 30ರಿಂದ ಪ್ರಾರಂಭಿಸುತ್ತಿದೆ. ಸಾರ್ವಜನಿಕರು ಹೊಸ ಚಿಟ್ ತೆರೆಯಲು ಮೈಸೂರ್ ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್, ರಂಗಶ್ರೀ ನಂ.265/260, ವಾರ್ಡ್ ನಂ.20, ಚಿಕ್ಕ ಅಂಗಡಿ ಬೀದಿ, ಚಾಮರಾಜೇಶ್ವರ ದೇವಸ್ಥಾನದ ಹತ್ತಿರ, ಚಾಮರಾಜನಗರ ಇಲ್ಲಿ ಸಂಪರ್ಕಿಸಬಹುದು. ವಿವರಗಳಿಗೆ ಹೆಚ್.ಎನ್. ಸಂದೀಪ್ ಮೊ.ಸಂ 9448256378, ಕೆಂಪಯ್ಯ ಮೊ.ಸಂ 9740129353 ಸಂಪರ್ಕಿಸಬಹುದು. ಚಾಮರಾಜನಗರ ವ್ಯಾಪ್ತಿಗೆ ಬರುವ ಸಾರ್ವಜನಿಕರು ಚಿಟ್ ಫಂಡ್ ಯೋಜನೆಯನ್ನು ಸದುಪಯೋಗ ಮಾಡಿಕೊಳ್ಳಬೇಕೆಂದು ಎಂಎಸ್‌ಐಎಲ್ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ವಿಳಂಬಿತ ಯೋಜನೆಗಳನ್ನು ಶೀಘ್ರ ಪೂರ್ಣಗೊಳಿಸಲು ಡಿಸಿ ಸೂಚನೆ

**ಕೋಲಾರ:** ನಾಗರೀಕ ಕೇಂದ್ರಿತ ಸುಧಾರಣೆ ಭಾಗವಾಗಿ ಪ್ರಸಕ್ತ 2024-25 ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿರುವಂತೆ ಕೋಲಾರ ಜಿಲ್ಲೆಯಾದ್ಯಂತ ಸ್ಥಿರಾಸ್ತಿಯನ್ನು ಜಿಲ್ಲೆಯ ಯಾವುದೇ ಉಪ ನೊಂದಣಿ ಕಚೇರಿಯಲ್ಲಿ ನೋಂದಣಿ ಮಾಡಲು ಅನುಕೂಲವಾಗುವಂತೆ ''ಎನಿವೇರ್ ನೋಂದಣಿ'' ವ್ಯವಸ್ಥೆ ಜಾರಿಗೆ ತರಲಾಗಿದೆ ಎಂದು ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದ್ದಾರೆ.



ನೋಂದಣಿ ಕಾಯ್ದೆ-1908ರ ಕಲಂ (5) ಹಾಗೂ ಕಲಂ(6)ರಂತೆ 2011ರಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಮತ್ತು ಕಳೆದ ಮಾರ್ಚ್ ಮಾಹೆಯಲ್ಲಿ ತುಮಕೂರು ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಈ ವ್ಯವಸ್ಥೆಯನ್ನು ಪ್ರಾಯೋಗಿಕವಾಗಿ ಜಾರಿಗೆ ತರಲಾಗಿತ್ತು. ಅಲ್ಲಿ ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಇದೀಗ ಎನಿವೇರ್ ನೋಂದಣಿ ವ್ಯವಸ್ಥೆಯನ್ನು ರಾಜ್ಯದ ಎಲ್ಲಾ ಜಿಲ್ಲಾ ಘಟಕವನ್ನು ಒಂದು ಯೂನಿಟ್ ಎಂದು ಪರಿಗಣಿಸಿ ಆ ಜಿಲ್ಲೆಯ ಎಲ್ಲಾ ಉಪ ನೋಂದಣಿ ಕಛೇರಿಗಳಿಗೂ ವಿಸ್ತರಿಸಿ ಸರ್ಕಾರ ಆದೇಶಿಸಿದೆ ಎಂದರು.

ಪ್ರಸ್ತುತ ಸಾರ್ವಜನಿಕರು ಸ್ಥಿರಾಸ್ತಿ ಇರುವ ವ್ಯಾಪ್ತಿಯ ಉಪ ನೋಂದಣಿ ಕಛೇರಿಯಲ್ಲಿ ಮಾತ್ರ ದಸ್ತಾವೇಜನ್ನು ನೋಂದಣಿ ಮಾಡಲು ಅವಕಾಶವಿದೆ. ಎನಿವೇರ್ ನೋಂದಣಿ ವ್ಯವಸ್ಥೆ ಜಾರಿಯಿಂದ ಸಿರಾಸ್ತಿ ಇರುವ ಕೋಲಾರ ಜಿಲ್ಲೆಯ ಯಾವುದಾದರೂ ಉಪ ನೋಂದಣಿ ಕಛೇರಿಯಲ್ಲಿ ದಸ್ತಾವೇಜು ನೋಂದಾಯಿಸಿಕೊಳ್ಳಬಹುದಾಗಿದೆ.

ಸಾರ್ವಜನಿಕರು ಎನಿವೇರ್ ನೋಂದಣಿ ವ್ಯವಸ್ಥೆಯ ಸದುಪಯೋಗಪಡಿಸಿಕೊಂಡು ತಮಗೆ ಹತ್ತಿರದ ಅಥವಾ ನೋಂದಣಿಗೆ ಸ್ಲಾಟ್ ಲಭ್ಯವಿರುವಂತಹ ಕಛೇರಿ ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಅಕ್ರಂ ಪಾ? ಅವರು ಮನವಿ ಮಾಡಿದ್ದಾರೆ. ಎನಿವೇರ್ ನೋಂದಣಿ ವ್ಯವಸ್ಥೆಯು ಸಾರ್ವಜನಿಕರಿಗೆ ಹಲವಾರು ರೀತಿಯಲ್ಲಿ ಉಪಯುಕ್ತವಾಗಿದ್ದು, ನೋಂದಣಿ ಪಕ್ರಿಯೆ ಸುಲಭವಾಗುವುದಲ್ಲದೆ ಸಮಯವು ಸಹ ಉಳಿತಾಯವಾಗಲಿದೆ. ನೋಂದಣಿಯಲ್ಲಿ ಪಾರದರ್ಶಕತೆ ಹೆಚ್ಚಲಿದ್ದು, ವಿಳಂಬವನ್ನು ತಡೆಗಟ್ಟಲಿದೆ. ಸಾರ್ವಜನಿಕರು ಸ್ಲಾಟ್ ಲಭ್ಯವಿರುವಂತಹ ಸಮೀಪದ ನೋಂದಣಿ ಕಚೇರಿಯನ್ನು ಆಯ್ಕೆ ಮಾಡಿಕೊಂಡು ದಸ್ತಾವೇಜನ್ನು ನೋಂದಾಯಿಸಬಹುದು. ಇದರಿಂದ ಉಪ ನೋಂದಣಿ ಕಛೇರಿಗಳಲ್ಲಿ ಜನದಟ್ಟಣೆ ಕಡಿಮೆಯಾಗುವುದಲ್ಲದೆ ಕಛೇರಿ ಸಿಬ್ಬಂದಿಗಳ ಮೇಲಿನ ಕೆಲಸದ ಒತ್ತಡ ಸಹ ಕಡಿಮೆಯಾಗಲಿದೆ ಎಂದರು.

# ಸಂಜೆ ಟಿಪ್ಸ್




## ಬೀಸ್ಪೋಕ್ ಎಐ ವಾಶಿಂಗ್ ಮೆಷಿನ್ ಬಿಡುಗಡೆ ಮಾಡಿದ ಸ್ಯಾಮ್ಸಂಗ್

ಭಾರತದ ಅತಿದೊಡ್ಡ ಗ್ರಾಹಕ ಎಲೆಕ್ಟ್ರಾನಿಕ್ಸ್ ಬ್ರ್ಯಾಂಡ್ ಆಗಿರುವ ಸ್ಯಾಮ್ಸಂಗ್ ಇಂದು ತನ್ನ ದೊಡ್ಡ ಗಾತ್ರದ 10 ಹೊಚ್ಚ ಹೊಸ ಫ್ರಂಟ್ ಲೋಡ್ ವಾಶಿಂಗ್ ಮೆಷಿನ್ಗಳನ್ನು ಬಿಡುಗಡೆ ಮಾಡಿದೆ. ಈ ಎಐ ಆಧರಿತ ಉತ್ಪನ್ನ ಶ್ರೇಣಿಯು ಲಾಂಡ್ರಿ ವಿಭಾಗದಲ್ಲಿ ಹೊಸ ಅಧ್ಯಾಯವನ್ನು ಆರಂಭಿಸುತ್ತಿದ್ದು, ಭಾರತೀಯ ಗ್ರಾಹಕರಿಗೆ ವಿಶಿಷ್ಟ ಎಐ ಫೀಚರ್ ಗಳನ್ನು ಒದಗಿಸುವ ಮೂಲಕ ಬಟ್ಟೆ ತೊಳೆಯುವ ಪ್ರಕ್ರಿಯೆಯನ್ನು ತುಂಬಾ ಸರಳಗೊಳಿಸುತ್ತದೆ. ಹೊಚ್ಚ ಹೊಸ ದೊಡ್ಡ ವಾಶಿಂಗ್ ಮೆಷಿನ್ಗಳು 12 ಕೆಜಿ ಸಾಮರ್ಥ್ಯವನ್ನು ಹೊಂದಿದ್ದು, ಭಾರತೀಯ ಗ್ರಾಹಕರು ಬಹುತೇಕ ಎಲ್ಲಾ ದಿರಿಸುಗಳನ್ನು ಒಂದೇ ಸಲ ತೊಳೆಯಲು ಅನುವು ಮಾಡಿಕೊಡುತ್ತದೆ. ಈ ವಾಶಿಂಗ್ ಮೆಷಿನ್ ಗಳು ಪರದೆಗಳು, ಹೊದಿಕೆಗಳು ಮತ್ತು ಸೀರೆಗಳಂತಹ ದೊಡ್ಡ ಗಾತ್ರದ ಬಟ್ಟೆಗಳನ್ನು ತೊಳೆಯಲು ಈ ಉತ್ಪನ್ನವು ಸೂಕ್ತವಾಗಿದೆ.

ಈ ಕುರಿತು ಮಾತನಾಡಿರುವ ಸ್ಯಾಮ್ಸಂಗ್ ಇಂಡಿಯಾದ ಡಿಜಿಟಲ್ ಉಪಕರಣಗಳ ಹಿರಿಯ ನಿರ್ದೇಶಕ ಸೌರಭ್ ಬೈಶಾಖಿಯಾ ಅವರು, ಭಾರತೀಯ ಗ್ರಾಹಕರು ಕಡಿಮೆ ಶ್ರಮದಲ್ಲಿ ವಿಭಾಗದಲ್ಲಿಯೇ ಅತ್ಯುತ್ತಮವಾಗಿ ಬಟ್ಟೆ ತೊಳೆಯುವ ಮತ್ತು ಅದರ ಜೊತೆಗೆ ಸಮಯ ಮತ್ತು ವಿದ್ಯುತ್ ಅನ್ನು ಉಳಿಸುವ ಹೊಸ ಕಾಲದ ಡಿಜಿಟಲ್ ವಾಶಿಂಗ್ ಮೆಷಿನ್ ಗಳನ್ನು ಬಯಸುತ್ತಿದ್ದಾರೆ. ಈ ಹೊಸ ಶ್ರೇಣಿಯ ಫ್ರಂಟ್ ಲೋಡ್ ಬೀಸ್ಪೋಕ್ ಎಐ ವಾಶಿಂಗ್ ಮೆಷಿನ್ ಗಳು ಅನುಕೂಲಕತೆ ಒದಗಿಸುತ್ತವೆ ಮತ್ತು ಪರಿಣಾಮಕಾರಿಯಾಗಿ ಬಟ್ಟೆ ತೊಳೆಯುವ ಸೌಕರ್ಯ ಒದಗಿಸುವ ಮೂಲಕ ವಿಶಿಷ್ಟವಾಗಿ ನಿಲ್ಲುತ್ತವೆ. ಹೆಚ್ಚಿನ ಸಾಮರ್ಥ್ಯದ ವಾಶಿಂಗ್ಮೆಷಿನ್ ಅನ್ನು ಬಯಸುವ ಗ್ರಾಹಕರ ಆಸೆಯನ್ನು ಪೂರೈಸುವ ಗುರಿಯನ್ನು ಹೊಂದಿದ್ದೇವೆ'' ಎಂದು ಹೇಳಿದರು.

## ಸೋಯಾ ಹಾಲಿನ ತೋಫು

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಒಣಗಿದ ಸೋಯಾ ಕಾಳುಗಳು– 2 ಕಪ್, ನೀರು– 10 ಕಪ್, ವಿನೇಗರ್ ಅಥವಾ ನಿಂಬೆರಸ– 3 ದೊಡ್ಡ ಚಮಚ

### ಮಾಡುವ ವಿಧಾನ

ಸುಮಾರು 10–12 ತಾಸುಗಳಷ್ಟು ಕಾಲ ಸೋಯಾ ಕಾಳುಗಳನ್ನು ನೆನೆಸಿಡಿ. ಅವು ಉಬ್ಬಿದಂತಾಗಿ ಇರುವ ಗಾತ್ರಕ್ಕೆ ದುಪ್ಪಟ್ಟಾಗುತ್ತವೆ. ಅದನ್ನು ನೆನೆಸಿದ ನೀರನ್ನು ಚೆಲ್ಲಿ, ಕಾಳುಗಳನ್ನು ಚೆನ್ನಾಗಿ ತೊಳೆಯಿರಿ. ಇದಕ್ಕೆ ಒಂದೊಂದೇ ಕಪ್ ನೀರು ಹಾಕುತ್ತಾ ಮಿಕ್ಸಿಯಲ್ಲಿ ರುಬ್ಬುತ್ತಾ ಬನ್ನಿ. ಸಣ್ಣ ಗ್ರೈಂಡರ್ ಇದ್ದರೆ, ಅದನ್ನೂ ಉಪಯೋಗಿಸಬಹುದು. ಇದಿಷ್ಟೂ ಕಾಳುಗಳು ನಯವಾದ ಪೇಸ್ಟ್ ಆಗಿ, ಹಾಲಿನಂತಾಗುವುದಕ್ಕೆ ಸುಮಾರು 8–10 ಕಪ್ಗಳಷ್ಟು ನೀರು ಬೇಕಾಗುತ್ತದೆ.ಈ ಹಾಲನ್ನು ಅಗಲ ಬಾಯಿಯ ಕಡಾಯಿಗೆ ಹಾಕಿ ಕುದಿಯುವುದಕ್ಕೆ ಇಡಿ. ಆಗಾಗ ಕೈಯಾಡಿಸದಿದ್ದರೆ ತಳ ಸೀದು ಹೋಗಬಹುದು. ಕುದಿಯಲು ಪ್ರಾರಂಭಿಸಿದ 10 ನಿಮಿಷಗಳ ನಂತರ, ಇದನ್ನು ತೆಳುವಾದ ಮಲ್ಲಿನಂಥ ಬಟ್ಟೆಗೆ ಹಾಕಿ ಶೋಧಿಸಿಕೊಳ್ಳಿ. ಇದರಿಂದ ಸೋಯಾ ಕಾಳುಗಳ ಪಲ್ಪ್ ಬೇರೆಯಾಗುತ್ತದೆ. ಬಿಳಿ ಬಣ್ಣದ ದ್ರವ ಮಾತ್ರವೇ ಉಳಿದುಕೊಳ್ಳುತ್ತದೆ. ಇದನ್ನೇ ಸೋಯಾ ಹಾಲು ಎಂದು ಕರೆಯಲಾಗುತ್ತದೆ. ಪಲ್ಪ್ನಲ್ಲಿ ಉಳಿದ ಹಾಲನ್ನು ಸಹ ಹಿಂಡಿ ತೆಗೆದುಕೊಳ್ಳಿ. ಹೀಗೆ ಶೋಧಿಸಿ ತೆಗೆದ ಹಾಲನ್ನು ಮತ್ತೆ ಉರಿಯಲ್ಲಿಡಿ. ಆದರೆ ಕುದಿಯಲು ಪ್ರಾರಂಭಿಸುವ ಮುನ್ನವೇ ಇದಕ್ಕೆ ವಿನೇಗರ್ ಅಥವಾ ನಿಂಬೆ ರಸ ಸೇರಿಸಿ. ಚೆನ್ನಾಗಿ ಕೈಯಾಡಿಸಿ, ಉರಿಯಿಂದ ಪಾತ್ರೆಯನ್ನು ತೆಗೆಯಿರಿ. 15 ನಿಮಿಷಗಳ ಕಾಲ ಹಾಗೆಯೇ ಬಿಡಿ. ಈಗ ಪನೀರ್ ಮಾಡುವುದಕ್ಕೆ ಹಾಲು ಒಡೆಸಿದಂತೆಯೇ ಸೋಯಾ ಹಾಲು ಸಹ ಒಡೆದು ನೀರು ಪ್ರತ್ಯೇಕವಾಗಿರುತ್ತದೆ. ಇದರ ನೀರು ತೆಗೆಯುವುದಕ್ಕೆ ಬಟ್ಟೆಯಲ್ಲಿ ಕಟ್ಟಿ ನೇತಾಡಿಸಬಹುದು ಅಥವಾ ಇತರ ಯಾವುದೇ ಕ್ರಮ ಸೂಕ್ತವಾಗಿದ್ದಲ್ಲಿ ಅನುಸರಿಸಬಹುದು. ನಂತರ ಥೇಟ್ ಪನೀರ್ನಂತೆಯೇ ತಟ್ಟೆಯಲ್ಲಿ ಹರವಿ, ಬೇಕಾದ ಆಕಾರಕ್ಕೆ ಕತ್ತರಿಸಿಕೊಳ್ಳಬಹುದು. ಮನೆಯಲ್ಲೇ ಮಾಡಿದ ತೋಫು ಈಗ ಸಿದ್ಧ.

## 'ಸೂರ್ಯನ ಸಾಟರ್ಡೆ' ಚಿತ್ರದ ಪ್ರಚಾರ ನಡೆಸಿದ ನಟ ನಾನಿ



ತೆಲುಗಿನಲ್ಲಿ ನ್ಯಾಚುರಲ್ ಸ್ಟಾರ್ ಎಂದೇ ಖ್ಯಾತಿ ಪಡೆದಿರುವ ನಟ ನಾನಿ ಬೆಂಗಳೂರಿಗೆ ಆಗಮಿಸಿದ್ದಾರೆ. ಅವರ ನಟನೆಯ 'ಸರಿಪೋದಾ ಶನಿವಾರಂ' ತಮಿಳು ಸಿನಿಮಾ ಕನ್ನಡದಲ್ಲಿ 'ಸೂರ್ಯನ ಸಾಟರ್ಡೆ' ಹೆಸರಲ್ಲಿ ಬಿಡುಗಡೆ ಆಗಲಿದೆ. ಈ ಸಿನಿಮಾದ ಪ್ರಚಾರಕ್ಕೆ ನಟ ನಾನಿ ಬೆಂಗಳೂರಿಗೆ ಆಗಮಿಸಿದ್ದಾರೆ.

ಪ್ರಚಾರದ ಅಂಗವಾಗಿ ಬೆಂಗಳೂರಿನ ಖಾಸಗಿ ಹೋಟೆಲ್ ನಲ್ಲಿ ಸುದ್ದಿಗೋಷ್ಠಿ ಆಯೋಜಿಸಲಾಗಿತ್ತು. ಈ ವೇಳೆ ಮಾತನಾಡಿದ ನಾನಿ, ಕನ್ನಡ ಸಿನಿಮಾಗಳು ಹಾಗೂ ಪ್ರಶಸ್ತಿಗಳ ಬಗ್ಗೆ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದರು. ಇದೇ 28ಕ್ಕೆ 'ಸೂರ್ಯನ ಸಾಟರ್ಡೆ' ಚಿತ್ರ ಬಿಡುಗಡೆಯಾಗುತ್ತಿದೆ. ಕನ್ನಡದಲ್ಲಿಯೂ ಸಿನಿಮಾ ತೆರೆಗೆ ಬರುತ್ತಿದ್ದು, ಥಿಯೇಟರ್ ನಲ್ಲಿ ಸಿನಿಮಾ ನೋಡುವಂತೆ ಮನವಿ ಮಾಡಿಕೊಂಡರು.

ನಾನಿ ದೊಡ್ಮನೆಗೂ ವಿಸಿಟ್ ಹಾಕಿದ್ದಾರೆ. ಹ್ಯಾಟ್ರಿಕ್ ಹೀರೋ ಶಿವರಾಜ್ ಕುಮಾರ್ ಅವರನ್ನು ಭೇಟಿ ಮಾಡಿ ತಮ್ಮ ಚಿತ್ರದ ಬಗ್ಗೆ ಒಂದಷ್ಟು ಮಾತಕಥೆ ನಡೆಸಿದ್ದಾರೆ. ಈ ಹಿಂದೆ ನಾನಿ ನಟನೆಯ ಹಾಯ್ ನಾನ್ನ ಸಿನಿಮಾವನ್ನು ನೋಡಿ ಶಿವಣ್ಣ ಬಹಳಷ್ಟು ಮೆಚ್ಚುಗೆ ವ್ಯಕ್ತಪಡಿಸಿದ್ದರು.

'ಸೂರ್ಯನ ಸಾಟರ್ಡೆ' ಚಿತ್ರವನ್ನ ವಿವೇಕ್ ಆತ್ರೇಯಾ ಡೈರೆಕ್ಷನ್ ಮಾಡುತ್ತಿದ್ದಾರೆ. ಈ ಮೂಲಕ ನಾನಿಗೆ ಎರಡನೇ ಬಾರಿಗೆ ವಿವೇಕ್ ಆತ್ರೇಯಾ ಡೈರೆಕ್ಷನ್ ಮಾಡುತ್ತಿದ್ದಾರೆ. ಈ ಹಿಂದೆ ಅಂಟೆ ಸುಂದರಾನಿಕಿ ಸಿನಿಮಾವನ್ನ ವಿವೇಕ್ ಆತ್ರೇಯಾ ಮಾಡಿದ್ದರು. ಈ ಚಿತ್ರದಲ್ಲಿ ನಾನಿನೇ ಹೀರೋ ಆಗಿದ್ದರು. ಇದು ಫ್ಯಾಮಿಲಿ ಎಂಟರಟೈನಮೆಂಟ್ ಇರೋ ಹಾಸ್ಯಮಯ ಚಿತ್ರವೇ ಆಗಿತ್ತು. ಸೂರ್ಯನ ಸಾಟರ್ಡೆ ಸಿನಿಮಾ ಪ್ಯಾನ್ ಇಂಡಿಯಾ ಚಿತ್ರವಾಗಿದ್ದು, ತೆಲುಗು, ತಮಿಳು, ಹಿಂದಿ, ಮಲೆಯಲಾಂ, ಕನ್ನಡ ಹಿಂಗೆ ಎಲ್ಲ ಭಾಷೆಯಲ್ಲಿಯೇ ಈ ಚಿತ್ರ ರಿಲೀಸ್ ಆಗುತ್ತದೆ. ಸೂರ್ಯನ ಸಾಟರ್ಡೆ ಸಿನಿಮಾವನ್ನ ದಾನಯ್ಯ ಹಾಗೂ ಕಲ್ಯಾಣ್ ದಾಸರಿ ನಿರ್ಮಾಣ ಮಾಡಿದ್ದಾರೆ. ನಾನಿಗೆ ಜೋಡಿಯಾಗಿ ಪ್ರಿಯಾಂಕಾ ಮೋಹನ್ ನಟಿಸಿದ್ದು, ಎಸ್ ಜೆ ಸೂರ್ಯ ಖಳನಾಯಕನಾಗಿ ಅಬ್ಬರಿಸಿದ್ದಾರೆ. ಆಗಸ್ಟ್–29 ತೆರೆಗೆ ಬರ್ತಿರುವ ಚಿತ್ರಕ್ಕೆ ಮುರಳಿ ಜಿ ಕ್ಯಾಮರಾವರ್ಕ್ ಮಾಡಿದ್ದಾರೆ. ಜೇಕ್ಸ್ ಬಿಜೋಯ್ ಸಂಗೀತ ಕೊಟ್ಟಿದ್ದಾರೆ.

## 100 ಕೋಟಿ ಮೌಲ್ಯದ ಮನೆಗೆ ಶಿಫ್ಟ್ ಆಗಲಿದ್ದಾರೆ ದೀಪಿಕಾ ಪಡುಕೋಣೆ ದಂಪತಿ



ಬಾಲಿವುಡ್ ಬೆಡಗಿ ದೀಪಿಕಾ ಪಡುಕೋಣೆ ಮತ್ತು ರಣ್ವೀರ್ ಸಿಂಗ್ ದಂಪತಿ ಮೊದಲ ಮಗುವಿನ ನಿರೀಕ್ಷೆಯಲ್ಲಿದ್ದಾರೆ. ಮಗುವಿಗಾಗಿ ದಿಟ್ಟ ನಿರ್ಧಾರವೊಂದನ್ನು ಕೈಗೊಂಡಿದ್ದಾರೆ. ಚೊಚ್ಚಲ ಮಗುವಿನ ಆಗಮನಕ್ಕೂ ಮುನ್ನ 100 ಕೋಟಿ ರೂ. ಐಷಾರಾಮಿ ಮನೆಗೆ ಶಿಫ್ಟ್ ಆಗಲಿದ್ದಾರೆ.

ಮನ್ನತ್‌ನ ಶಾರುಖ್ ಖಾನ್ ಮನೆಯ ಸಮೀಪ ರಣವೀರ್ ಸಿಂಗ್ ಹಾಗೂ ದೀಪಿಕಾ 100 ಕೋಟಿ ರೂ. ಮೌಲ್ಯದ ಫ್ಲ್ಯಾಟ್ ಖರೀದಿಸಿದ್ದಾರೆ. ನಾಲ್ಕು ಫ್ಲೋರ್‌ನ ಮನೆ ಇದಾಗಿದೆ. ಈ ಮನೆ ಸಮುದ್ರ ತೀರದಲ್ಲಿದೆ. ಈ ಮನೆಯ ಅಳತೆ 11,266 ಚದರ ಅಡಿ ಇದೆ. ಇದರ ಜೊತೆಗೆ ಟೆರೇಸ್ ಕೂಡ ಇದೆ. ನಟಿಯ ಹೊಸ ಮನೆ ಕೆಲಸ ಅಂತಿಮ ಹಂತದಲ್ಲಿದೆ. ಇನ್ನೂ ಮುಂಬೈನ ಮನ್ನತ್‌ನಲ್ಲಿ ಬಹುತೇಕ ಸೆಲೆಬ್ರಿಟಿಗಳು ಇಲ್ಲಿಯೇ ವಾಸವಾಗಿದ್ದಾರೆ.

ದೀಪಿಕಾ ಪಡುಕೋಣೆ ಅವರಿಗೆ ಚಿತ್ರರಂಗದಲ್ಲಿ ಬೇಡಿಕೆ ಇದೆ. ಇತ್ತೀಚೆಗೆ ಪಠಾಣ್, ಜವಾನ್, ಫೈಟರ್, 'ಕಲ್ಕಿ 2898 ಎಡಿ' ರೀತಿಯ ಹಿಟ್ ಚಿತ್ರಗಳಲ್ಲಿ ದೀಪಿಕಾ ನಟಿಸಿ ಟಾಪ್ ಲಿಸ್ಟ್‌ನಲ್ಲಿದ್ದಾರೆ. ಇನ್ನೂ ಬೇಡಿಕೆ ಇರುವಾಗಲೇ ತಾಯಿ ಆಗುವ ನಿರ್ಧಾರ ತೆಗೆದುಕೊಂಡಿದ್ದಾರೆ. ಅವರು ಈ ವರ್ಷದ ಆರಂಭದಲ್ಲಿ ತಾಯಿ ಆಗುವ ಘೋಷಣೆ ಮಾಡಿದರು. ಸೆಪ್ಟೆಂಬರ್‌ನಲ್ಲಿ ದೀಪಿಕಾ ಪಡುಕೋಣೆ ಮಗುವಿಗೆ ಜನ್ಮ ನೀಡಲಿದ್ದಾರೆ.

## ಕ್ಯಾಲ್ಸಿಯಂನ ಆಗರ ನುಗ್ಗೆಸೊಪ್ಪು

### ಹೆಲ್ತ್ ಟಿಪ್ಸ್



ನುಗ್ಗೆಸೊಪ್ಪು ಸೇವಿಸುವುದರಿಂದ ಸಾಕಷ್ಟು ರೋಗಗಳನ್ನು ಗುಣಪಡಿಸಬಹುದು ಎಂದು ಹೇಳಲಾಗುತ್ತದೆ. ಇದು ತಿನ್ನುವುದಕ್ಕೆ ರುಚಿಕರವಲ್ಲವೆಂದು ಕೆಲವರು ನುಗ್ಗೆಸೊಪ್ಪು ಎಂದರೆ ಮೂಗು ಮುರಿಯುತ್ತಾರೆ. ಇದರ ಪ್ರಯೋಜನದ ಬಗ್ಗೆ ತಿಳಿದುಕೊಂಡರೆ ಇನ್ನೆಂದೂ ನೀವು ನುಗ್ಗೆಸೊಪ್ಪನ್ನು ತೆಗಳುವುದಿಲ್ಲ?!

ಒಂದು ಬಟ್ಟಲು ನುಗ್ಗೆ ಸೊಪ್ಪಿಗೆ ಒಂದೂವರೆ ಬಟ್ಟಲು ನೀರು ಹಾಕಿ ಚೆನ್ನಾಗಿ ಕುದಿಸಿ ಬಣ್ಣ ಬದಲಾದಾಗ ಸೋಸಿಕೊಳ್ಳಿ. ಅದಕ್ಕೆ ಸೈಂಧವ ಲವಣ ಸೇರಿಸಿ ನಂತರ ಸ್ವಲ್ಪ ಕರಿಮೆಣಸಿನ ಪುಡಿಯನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿ. ಈ ಕಷಾಯವನ್ನು ಕುಡಿಯುವುದರಿಂದ ಹಲವು ರೋಗಗಳಿಂದ ದೂರವಿರಬಹುದು.

ಹಾಲಿನಲ್ಲಿ ಸಿಗುವ ಕ್ಯಾಲ್ಸಿಯಂಗಿಂತ ಈ ನುಗ್ಗೆಸೊಪ್ಪಿನ ಕಷಾಯದಲ್ಲಿ 10 ಪಟ್ಟು ಹೆಚ್ಚು ಕ್ಯಾಲ್ಸಿಯಂ ಇರುತ್ತದೆ. ಹಾಗೆ ಮೊಸರಿನಿಂದ ಸಿಗುವ ಪ್ರೊಟೀನ್ ಗಿಂತ 8 ಪಟ್ಟು ಹೆಚ್ಚು ಪ್ರೋಟಿನ್ಸ್ ನುಗ್ಗೆಸೊಪ್ಪಿನ ರಸವನ್ನು ಕುಡಿಯುವುದರಿಂದ ಸಿಗುತ್ತದೆ.

ಬಾಳೆ ಹಣ್ಣನ್ನು ತಿಂದಾಗ ಸಿಗುವ ಪೊಟ್ಯಾಷಿಯಂ ಗಿಂತ 15 ಪಟ್ಟು ಹೆಚ್ಚು ಪೊಟ್ಯಾಷಿಯಂ ಇದನ್ನು ಸೇವಿಸುವುದರಿಂದ ಪಡೆಯಬಹುದು.

ಅಧ್ಯಯನದ ಪ್ರಕಾರ ಈ ನುಗ್ಗೆಸೊಪ್ಪಿನ ರಸವನ್ನು ನಿರಂತರವಾಗಿ ಕುಡಿಯುವುದರಿಂದ ರಕ್ತದಲ್ಲಿನ ಸಕ್ಕರೆ ಮಟ್ಟ ನಿಯಂತ್ರಣಕ್ಕೆ ಬರುತ್ತದೆ. ಶ್ವಾಸಕೋಶ ಮತ್ತು ಯಕೃತ್ ಗೂ ಇದು ತುಂಬಾ ಒಳ್ಳೆಯದು. ಥೈರಾಯ್ಡ್ ಅನ್ನು ನಿಯಂತ್ರಣದಲ್ಲಿ ಇಡುವ ಗುಣ ಈ ನುಗ್ಗೆಸೊಪ್ಪಿನ ರಸಕ್ಕಿದೆಯಂತೆ.

## ಚರ್ಮದ ಸೌಂದರ್ಯಕ್ಕೆ ಟಿಪ್ಸ್

### ಬ್ಯೂಟಿ ಟಿಪ್ಸ್



ಬಹುತೇಕ ಎಲ್ಲ ಹುಡುಗಿಯರೂ ಸೌಂದರ್ಯ ವೃದ್ಧಿಸಿಕೊಳ್ಳಲು ಬ್ಯೂಟಿಪಾರ್ಲರ್ ಮೊರೆ ಹೋಗ್ತಾರೆ. ಇದ್ರ ಜೊತೆಗೆ ದುಬಾರಿ ಸೌಂದರ್ಯ ವರ್ಧಕಗಳನ್ನು ಬಳಸ್ತಾರೆ. ಆದ್ರೆ, ಆರೋಗ್ಯಕ್ಕಾಗಿ ಸೇವನೆ ಮಾಡುವ ಆಹಾರದ ಮೂಲಕವೂ ಸೌಂದರ್ಯ ಹೆಚ್ಚಿಸಿಕೊಳ್ಳಬಹುದು. ಮನೆಯಲ್ಲಿ ಉಳಿದಿರುವ ಆಹಾರ ನಿಮ್ಮ ಮುಖದ ಸುಂದರತೆ ಹೆಚ್ಚಿಸುತ್ತದೆ. ರೊಟ್ಟಿ ಕೂಡ ನಿಮ್ಮ ಮುಖವನ್ನು ಕಾಂತಿಯುತಗೊಳಿಸಬಹುದು. ರೊಟ್ಟಿಯನ್ನು ಸಣ್ಣ ತುಂಡುಗಳಾಗಿ ಮಾಡಿ. ಅದಕ್ಕೆ ಹಾಲನ್ನು ಹಾಕಿ 15 ನಿಮಿಷ ಬಿಡಿ. ರೊಟ್ಟಿ ಮೃದುವಾಗ್ತಿದ್ದಂತೆ ಅದನ್ನು ಪೇಸ್ಟ್ ಮಾಡಿ. ಇದನ್ನು ಮುಖ ಅಥವಾ ದೇಹದ ಬೇರೆ ಭಾಗಕ್ಕೆ ಹಚ್ಚಿ 20 ನಿಮಿಷ ಬಿಡಿ. ನಂತ್ರ ತೊಳೆದುಕೊಳ್ಳಿ. ಚರ್ಮ ಮೃದುವಾಗುತ್ತದೆ. ಮೊಸರು ಹೆಚ್ಚಿದ್ದರೆ ಮೊಸರಿಗೆ ಅಲೋವೇರಾ ಹಾಗೂ ಜೇನು ತುಪ್ಪವನ್ನು ಹಾಕಿ ಮಿಕ್ಸ್ ಮಾಡಿ. ಈ ಫೇಸ್ ಮಾಸ್ಕನ್ನು ಮುಖಕ್ಕೆ ಹಚ್ಚಿ 20 ನಿಮಿಷ ಬಿಡಿ. ನಂತ್ರ ಮುಖ ತೊಳೆದುಕೊಳ್ಳಿ. ಅವಲಕ್ಕಿ ಕೂಡ ಸ್ಕಬ್ ರೀತಿಯಲ್ಲಿ ಕೆಲಸ ಮಾಡುತ್ತದೆ. ಅವಲಕ್ಕಿಯನ್ನು ಮೊದಲು ಬಿಸಿ ನೀರಿನಲ್ಲಿ ಸ್ವಚ್ಛಗೊಳಿಸಿ. ನಂತ್ರ ಜೇನುತುಪ್ಪವನ್ನು ಹಾಕಿ ಇಡೀ ದೇಹಕ್ಕೆ ಹಚ್ಚಿ ತಿಕ್ಕಿ. ನಂತ್ರ ಸ್ನಾನ ಮಾಡಿ.

## 'ದಿ' ಎಸ್ಯುವಿ: ಥಾರ್ ರಾಕ್ಸ್ ಬಿಡುಗಡೆ ಮಾಡಿದ ಮಹೀಂದ್ರಾ



ಭಾರತದ ಪ್ರಮುಖ ಎಸ್ಯುವಿ ತಯಾರಕರಾದ ಮಹೀಂದ್ರಾ, ಮಹೀಂದ್ರಾ ಲಿಮಿಟೆಡ್, ಹೊಚ್ಚ ಹೊಸ 'ದಿ' ಎಸ್ಯುವಿ ಥಾರ್ ರಾಕ್ಸ್ ಅನ್ನು ಹೆಮ್ಮೆಯಿಂದ ಬಿಡುಗಡೆ ಮಾಡಿದೆ. ದೇಶದಲ್ಲಿನ ಎಸ್ಯುವಿ ಕ್ಷೇತ್ರದ ಪ್ರಸ್ತುತ ರೂಢಿಗಳನ್ನು ಮುರಿದು, ಈ ಕ್ಷೇತ್ರದಲ್ಲಿ ಹೊಸತನವನ್ನು ತರುವ ನಿಟ್ಟಿನಲ್ಲಿ ರೂಪುಗೊಳಿಸಲಾದ ವರ್ಗದಲ್ಲಿಯೇ ವಿಶಿಷ್ಟವಾದ ಎಸ್ಯುವಿ ಇದು. 12.99 ಲಕ್ಷದ ಆರಂಭಿಕ ಬೆಲೆಯಲ್ಲಿ ದೊರೆಯುವ ಥಾರ್ ರಾಕ್ಸ್ ಮಹೀಂದ್ರಾದ ಬೋಲ್ಡ್ ಸ್ವಭಾವ ಮತ್ತು ಅಸಾಂಪ್ರದಾಯಿಕ ಹುಮ್ಮಸ್ಸನ್ನು ತನ್ನೊಳಗೆ ಧರಿಸಿಕೊಂಡಿದೆ. ಅತ್ಯಾಕರ್ಷಕವಾಗಿ ವಿನ್ಯಾಸಗೊಳಿಸಲಾಗಿರುವ ಮತ್ತು ದೃಢವಾಗಿ ಎಂಜಿನಿಯರಿಂಗ್ ಮಾಡಲಾಗಿರುವ ಎಸ್ಯುವಿ ಸೊಗಸಾದ ಡ್ರೈವ್ ಒದಗಿಸುವಂತೆ ಮತ್ತು ಅತ್ಯುತ್ತಮ ಸುರಕ್ಷತೆ ನೀಡುವಂತೆ ರೂಪುಗೊಂಡಿದೆ. ಲಕ್ಷುರಿ ಫೀಚರ್ ಗಳನ್ನು ಒಳಗೊಂಡಿರುವ ಥಾರ್ ರಾಕ್ಸ್ ಎಂಥಾ ರಸ್ತೆಯಲ್ಲಾದರೂ ಸುಗಮವಾಗಿ ಸಾಗುವ ಸಾಮರ್ಥ್ಯ ಹೊಂದಿದೆ.

ಮಹೀಂದ್ರಾದ ಹೊಚ್ಚ ಹೊಸ ಎಗ್ಲೈಡ್ ಪ್ಲಾಟ್ಫಾರ್ಮ್ನಲ್ಲಿ ನಿರ್ಮಿಸಲಾಗಿರುವ ಥಾರ್ ರಾಕ್ಸ್ ಸುಲಭವಾದ ನಿರ್ವಹಣಾ ಸಾಮರ್ಥ್ಯ ಮತ್ತು ವರ್ಗದಲ್ಲಿಯೇ ಶ್ರೇಷ್ಠವಾದ ಕಾರ್ಯನಿರ್ವಹಣೆ ಒದಗಿಸುತ್ತಿದ್ದು, ಸುಗಮವಾಗಿ ಡ್ರೈವ್ ಮಾಡುವ ಆನಂದ ನೀಡುತ್ತದೆ. ಆಧುನಿಕ ಕಾಲದ ಶ್ರೇಷ್ಠತೆಯನ್ನು ಥಾರ್ನ ಹೊರಾಂಗಣ ಡಿಎನ್ಎ ಜೊತೆ ಸೊಗಸಾಗಿ ಸೇರಿಸಲಾಗಿದ್ದು, ಇದು ಪ್ರೀಮಿಯಂ ಎಸ್ಯುವಿ ಅನುಭವವನ್ನು ನೀಡುತ್ತದೆ. ತಮ್ಮ ಜೀವನದಲ್ಲಿ ಎಲ್ಲವೂ ಶ್ರೇಷ್ಠವಾಗಿರಬೇಕು ಎಂದು ಬಯಸುವವರಿಗಾಗಿಯೇ ಇದು ರೂಪುಗೊಂಡಿದೆ.

ಈ ಥಾರ್ ರಾಕ್ಸ್ ಅನ್ನು +50 ಲಿ ಅ ಉಷ್ಣತೆ ಇರುವ ಥಾರ್ ಮರುಭೂಮಿಯ ಸುಡುವ ಮರಳು ದಿಬ್ಬಗಳು, ಉಮ್ಲಿಂಗ್ ಲಾ ಪ್ರದೇಶದ ಎತ್ತರದ ಪ್ರದೇಶಗಳು, ಕೂರ್ಗ್ನಲ್ಲಿನ ಸವಾಲಿನ ಕೆಸರು ಮೇಲ್ಮೈಗಳು ಮತ್ತು ಕಾರ್ಘಾದ –20 ಲಿಅ ಯಂತಹ ಘನೀಕರಿಸುವ ಚಳಿಯ ವಾತಾವರಣ ಸೇರಿದಂತೆ ವಿವಿಧ ರೀತಿಯ ಸಂಕೀರ್ಣ ಮತ್ತು ಎತ್ತರದ ಭೂಪ್ರದೇಶಗಳಲ್ಲಿ ತೀವ್ರವಾಗಿ ಮತ್ತು ಕಟ್ಟುನಿಟ್ಟಾಗಿ ಪರೀಕ್ಷೆ ನಡೆಸಲಾಗಿದೆ. ಈ ವಿಸ್ತಾರವಾದ ಮತ್ತು ಸಂಕೀರ್ಣವಾದ ಪರೀಕ್ಷಾ ಪ್ರಕ್ರಿಯೆಯು ಹೃದಯದಲ್ಲಿ ಭಾರತೀಯರಾಗಿರುವ, ಆದರೆ ಜಾಗತಿಕ ಮನಸ್ಥಿತಿ ಹೊಂದಿರುವ ಜಾಗತಿಕ ಮಟ್ಟದ ಭಾರತೀಯರಿಗೆ ಥಾರ್ ರಾಕ್ಸ್ ಒಂದು ದೃಢವಾದ ಮತ್ತು ವಿಶ್ವಾಸಾರ್ಹ ಆಯ್ಕೆಯಾಗಿದೆ ಎಂಬುದನ್ನು ತೋರಿಸುತ್ತದೆ. ಈ ಸಂದರ್ಭದಲ್ಲಿ ಮಾತನಾಡಿರುವ ಮಹೀಂದ್ರಾ ಆಂಡ್ ಮಹೀಂದ್ರಾ ಲಿಮಿಟೆಡ್ನ ಆಟೋಮೋಟಿವ್ ವಿಭಾಗದ ಅಧ್ಯಕ್ಷರಾದ ವೀಜಯ್ ನಕ್ರಾ ಅವರು, ಥಾರ್ ಬ್ರ್ಯಾಂಡ್ ಸ್ವಾತಂತ್ರ್ಯ ಮತ್ತು ಗಟ್ಟಿಯಾದ ಸಮುದಾಯಪ್ರತಿಪಾದಿಸುವ ಒಂದು ಸಾಂಸ್ಕೃತಿಕ ವಿದ್ಯಮಾನವಾಗಿದೆ. ಈ ಪರಂಪರೆಯ ಮುಂದುವರಿದ ಭಾಗವಾಗಿ 'ದಿ' ಎಸ್ಯುವಿ ಥಾರ್ ರಾಕ್ಸ್ ಬಿಡುಗಡೆ ಆಗಿದೆ. ಇದು ಅತ್ಯಾಕರ್ಷಕ ವಿನ್ಯಾಸ, ಪರಿಷ್ಕರಿಸಿದ ಡ್ರೈವಿಂಗ್ ಸಾಮರ್ಥ್ಯ, ಶಕ್ತಿಯುತ ಕಾರ್ಯ ನಿರ್ವಹಣೆ, ಉತ್ತಮ ಆಫ್–ರೋಡಿಂಗ್ ಸಾಮರ್ಥ್ಯ, ಅದ್ಭುತ ಸುರಕ್ಷತೆ, ಐಷಾರಾಮಿ ಸ್ಥಳಾವಕಾಶ ಮತ್ತು ಅತ್ಯಾಧುನಿಕ ತಂತ್ರಜ್ಞಾನವನ್ನು ಹೊಂದಿದೆ. ಥಾರ್ ರಾಕ್ಸ್ ಮೂಲಕ ನಾವು ಕೇವಲ ಎಸ್ಯುವಿ ಅನುಭವವನ್ನು ಹೆಚ್ಚಿಸುವುದು ಮಾತ್ರವಲ್ಲ, ಮುಂದಿನ 3 ರಿಂದ 5 ವರ್ಷಗಳಲ್ಲಿ ಪರಿಮಾಣದ ಪ್ರಕಾರ ಥಾರ್ ಬ್ರ್ಯಾಂಡ್ ಅನ್ನು ನಂ.1 ಎಸ್ಯುವಿ ( ರು.12.5 ಲಕ್ಷ ಬೆಲೆ ವಿಭಾಗ) ಪಟ್ಟಕ್ಕೇರಿಸುವ ಗುರಿಯನ್ನು ಹೊಂದಿದ್ದೇವೆ'' ಎಂದು ಹೇಳಿದರು.

, ಥಾರ್ ರಾಕ್ಸ್ ನಮ್ಮ ಹೊಚ್ಚ ಹೊಸ ಎಂಗ್ಲೈಡ್ ಈ ಕುರಿತು ಮಾತನಾಡಿದ ಮಹೀಂದ್ರಾ, ಮಹೀಂದ್ರಾ ಲಿಮಿಟೆಡ್ ನ ಆಟೋಮೋಟಿವ್ ಟೆಕ್ನಾಲಜಿ ಆಂಡ್ ಪ್ರೊಡಕ್ಟ್ ಡೆವಲಪ್ ಮೆಂಟ್ ವಿಭಾಗದ ಪ್ರೆಸಿಡೆಂಟ್ ಆರ್. ವೇಲುಸಾಮಿ ಅವರು ಪ್ಲಾಟ್ಫಾರ್ಮ್ನಲ್ಲಿ ನಿರ್ಮಿಸಲಾಗಿರುವ, ಪರಿಷ್ಕೃತ ಬಾಡಿ–ಆನ್ –ಫ್ರೇಮ್ ಎಸ್ಯುವಿಗಳ ಹೊಸ ಅಧ್ಯಾಯವನ್ನು ಸೂಚಿಸುತ್ತದೆ. ಈ ಅತ್ಯಾಧುನಿಕ ಪ್ಲಾಟ್ಫಾರ್ಮ್ ಎಕ್ಸ್ ಯು ವಿ 700 ನಂತಹ ಮಾನೋಕಾಕ್ ಎಸ್ಯುವಿಗಳಲ್ಲಿ ಸಾಮಾನ್ಯವಾಗಿ ಕಂಡುಬರುವ ಅಸಾಧಾರಣ, ಟೆಕ್–ಆಧರಿತ ಆಫ್ ರೋಡ್ ಸಾಮರ್ಥ್ಯಗಳ ಜೊತೆಗೆ ನಗರಕ್ಕೆ ಬೇಕಾಗುವ ಅತ್ಯಾಧುನಿಕತೆಯನ್ನು ಸಂಯೋಜಿಸುವ ಮೂಲಕ, ಎರಡೂ ಜಗತ್ತಿನಲ್ಲಿಯೂ ಮೆಚ್ಚುಗೆ ಸಿಗುವ ಅತ್ಯುತ್ತಮವಾದ ಉತ್ಪನ್ನಗಳನ್ನು ನೀಡಲು ನಮಗೆ ಅನುವು ಮಾಡಿಕೊಡುತ್ತದೆ. ಪ್ಯಾನೋರಾಮಿಕ್ ಸ್ಕೈರೂಫ್, ಅತ್ಯಾಧುನಿಕ ಲೆವೆಲ್ 2 ಎಡಿಎಎಸ್ ಮತ್ತು ಹರ್ಮನ್ ಕಾರ್ಡನ್ ಬ್ರಾಂಡೆಡ್ ಆಡಿಯೋ ಸೌಲಭ್ಯಗಳು ಥಾರ್ ರಾಕ್ಸ್ ಮಾಲೀಕತ್ವದ ಖುಷಿಯನ್ನು ಮತ್ತಷ್ಟು ಹೆಚ್ಚಿಸುತ್ತದೆ. ಈ ಎಸ್ ಯು ವಿ ಐಷಾರಾಮಿತನ ಮತ್ತು ಸುರಕ್ಷತೆಯಲ್ಲಿ ಹೊಸ ಮಾನದಂಡಗಳನ್ನು ಸ್ಥಾಪಿಸುತ್ತದೆ'' ಎಂದು ಹೇಳಿದರು.

## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಧಾರ್ಮಿಕ ಕೆಲಸಗಳಿಗೆ ಖರ್ಚು, ಆರೋಗ್ಯದಲ್ಲಿ ವ್ಯತ್ಯಾಸ, ಉದ್ಯೋಗ ಲಾಭ, ಶತ್ರು ಉಪಟಳ, ಸಾಲದ ಚಿಂತೆ

**ವೃಷಭ:** ಆರ್ಥಿಕ ಚೇತರಿಕೆ, ಕುಟುಂಬದಿಂದ ಸಹಕಾರ, ಮಕ್ಕಳಿಂದ ಯೋಗ ಫಲ, ಉದ್ಯೋಗ ಲಾಭ

**ಮಿಥುನ:** ವ್ಯವಹಾರದಲ್ಲಿ ಅನುಕೂಲ, ಪಾಲುದಾರಿಕೆಯಲ್ಲಿ ಉತ್ತಮ ಅವಕಾಶ, ದೈವ ಕಾರ್ಯಗಳ ಆಲೋಚನೆ, ವಿದ್ಯಾಭ್ಯಾಸದಲ್ಲಿ ಆಸಕ್ತಿ

**ಕಟಕ:** ಯತ್ನ ಕಾರ್ಯಗಳಲ್ಲಿ ಯಶಸ್ಸು, ಪಿತ್ರಾರ್ಜಿತ ಸ್ವತಿನಿಂದ ಅನಾನುಕೂಲ ಉನ್ನತ ವಿದ್ಯಾಭ್ಯಾಸದಲ್ಲಿ ಅನುಕೂಲ, ಬಂಧು ಬಾಂಧವರಿಂದ ನಷ್ಟ

**ಸಿಂಹ:** ವ್ಯಾಪಾರ ವ್ಯವಹಾರದಲ್ಲಿ ಚೇತರಿಕೆ, ಅನಿರೀಕ್ಷಿತ ಅವಕಾಶ, ಸ್ನೇಹಿತರಿಂದ ಸಹಕಾರ, ವಿದ್ಯಾಭ್ಯಾಸದಲ್ಲಿ ಒತ್ತಡ,

**ಕನ್ಯಾ:** ಬುದ್ಧಿವಂತಿಕೆಯಿಂದ ಕಾರ್ಯಜಯ, ಸಂಗಾತಿಯಿಂದ ಅನುಕೂಲ, ಉದ್ಯೋಗ ಸ್ಥಳದಲ್ಲಿ ಪ್ರಗತಿ, ಶುಭ ಕಾರ್ಯದಲ್ಲಿ ಯಶಸ್ಸು

**ತುಲಾ:** ಉದ್ಯೋಗದಲ್ಲಿ ಅಸಮಾಧಾನ, ಕೆಲಸಗಾರರಿಂದ ಸಮಸ್ಯೆ, ಆರೋಗ್ಯದಲ್ಲಿ ವ್ಯತ್ಯಾಸ, ಪ್ರಯಾಣದಲ್ಲಿ ಅನಾನುಕೂಲ

**ವೃಶ್ಚಿಕ:** ಆರ್ಥಿಕ ಸುಧಾರಣೆ, ಮಕ್ಕಳಿಂದ ಅನುಕೂಲ, ಸಂತಾನ ದೋಷದಿಂದ ಮುಕ್ತಿ, ಆರೋಗ್ಯದಲ್ಲಿ ಚೇತರಿಕೆ,

**ಧನಸ್ಸು:** ಸ್ಥಿರಾಸ್ತಿ ಮತ್ತು ವಾಹನದ ಕಡೆ ಒಲವು, ಉದ್ಯೋಗದಲ್ಲಿ ಅನುಕೂಲ, ವಿದ್ಯಾಭ್ಯಾಸದಲ್ಲಿ ಪ್ರಗತಿ, ಅಧಿಕಾರಿಗಳಿಂದ ಅನುಕೂಲ ಹೆಸರು

**ಮಕರ:** ವ್ಯವಹಾರದಲ್ಲಿ ಆರ್ಥಿಕ ಬೆಳವಣಿಗೆ, ಬಂದು ಬಾಂಧವರೊಂದಿಗೆ ಮನಸ್ತಾಪ, ದೂರ ಪ್ರಯಾಣದಲ್ಲಿ ಅನುಕೂಲ, ಉದ್ಯೋಗದಲ್ಲಿ ಲಾಭ

**ಕುಂಭ:** ವ್ಯವಹಾರದಲ್ಲಿ ಆತಂಕ ಸೃಷ್ಟಿ, ಮಕ್ಕಳಿಂದ ಲಾಭ, ಆತ್ಮೀಯರಿಂದ ಸಹಕಾರ, ಮಾತಿನಿಂದ ಸಮಸ್ಯೆ

**ಮೀನ:** ಆರ್ಥಿಕ ಮುಗ್ಗಟ್ಟು, ವಾಹನ ಖರೀದಿಗೆ ಅನುಕೂಲಕರ, ತಾಯಿಯಿಂದ ಸಹಕಾರ, ಶುಭ ಕಾರ್ಯಗಳಲ್ಲಿ ಯಶಸ್ಸು

## ಇಂಟರ್‌ನ್ಯಾಷನಲ್ ವೇಲ್ ಶಾರ್ಕ್ ದಿನ

ಆಗಸ್ಟ್ 30 ರಂದು ಅಂತರರಾಷ್ಟ್ರೀಯ ತಿಮಿಂಗಿಲ ಶಾರ್ಕ್ ದಿನವನ್ನಾಗಿ ಆಚರಿಸಲಾಗುವುದು. ಬೃಹತ್ ಮೀನುಗಳು ಗ್ರಹದ ಅತಿದೊಡ್ಡ ಶಾರ್ಕ್ ಜಾತಿಯಾಗಿದೆ, ಇದು ಹುಟ್ಟಿದ ಸಮಯದಿಂದ 60 ಅಡಿಗಳಷ್ಟು ಬೆಳೆಯುತ್ತದೆ. ತಿಮಿಂಗಿಲ ಶಾರ್ಕ್ ತನ್ನ ನಿಧಾನ ಮತ್ತು ಸೌಮ್ಯ ನಡವಳಿಕೆಗೆ ಹೆಸರುವಾಸಿಯಾಗಿದೆ. ಇದು ಸಾಮಾನ್ಯವಾಗಿ ಆಳವಿಲ್ಲದ ಆಳದಲ್ಲಿ ಈಜಲು ಆದ್ಯತೆ ನೀಡುತ್ತದೆ, ಆದರೆ ಇದು 3,000 ಅಡಿಗಳಷ್ಟು ಆಳದ ನೀರಿನಲ್ಲಿ ಕಂಡುಬರುತ್ತದೆ. ಅಂತಹ ಅಂಶಗಳಿಂದಾಗಿ, ತಿಮಿಂಗಿಲ ಶಾರ್ಕ್ ಮೀನುಗಳಿಗೆ ಅತ್ಯಂತ ಸುಲಭವಾಗಿದೆ. ಜನರು ತಮ್ಮ ಮಾಂಸ ಮತ್ತು ರೆಕ್ಕೆಗಳಿಗಾಗಿ ಅವುಗಳನ್ನು ಬಳಸುತ್ತಿದ್ದಾರೆ. ತಿಮಿಂಗಿಲ ಶಾರ್ಕ್ ಮಾರುಕಟ್ಟೆಯು ಮೀನಿನ ಜನಸಂಖ್ಯೆಯಲ್ಲಿ ಕನಿಷ್ಠ 50% ಇಳಿಕೆಗೆ ಕಾರಣವಾಗಿದೆ. ಇದು ಆತಂಕಕಾರಿ ಪರಿಸ್ಥಿತಿಯಾಗಿದ್ದು, ದೈತ್ಯವನ್ನು ಈಗ ಅಳಿವಿನಂಚಿನಲ್ಲಿರುವ ಜಾತಿಗಳ ಪಟ್ಟಿಗೆ ಸೇರಿಸಲಾಗಿದೆ. ಕ್ಷೀಣಿಸುತ್ತಿರುವ ಸಂಖ್ಯೆಗಳು ತಿಮಿಂಗಿಲ ಶಾರ್ಕ್ಗಳ ಪ್ರಾಥಮಿಕ ಆಹಾರ ಮೂಲಗಳಲ್ಲಿ ಒಂದಾದ ದೊಡ್ಡ ಸಂಖ್ಯೆಯ ಪ್ಲ್ಯಾಂಕ್ಟನ್ಗಳ ಬೆದರಿಕೆಯಿಂದಾಗಿ ಸಾಮಾನ್ಯ ಸಮುದ್ರ ಪರಿಸರವು ಅಪಾಯದಲ್ಲಿದೆ ಎಂದು ಅರ್ಥೈಸುತ್ತದೆ.

ಅಂತರರಾಷ್ಟ್ರೀಯ ತಿಮಿಂಗಿಲ ಶಾರ್ಕ್ ದಿನವನ್ನು ಮೊದಲು 2008 ರಲ್ಲಿ ಇಸ್ಲಾ ಹೋಲ್ಬಾಕ್ಸ್ನಲ್ಲಿ ನಡೆದ ಅಂತರರಾಷ್ಟ್ರೀಯ ತಿಮಿಂಗಿಲ ಶಾರ್ಕ್ ಸಮ್ಮೇಳನದಲ್ಲಿ ಸ್ಮರಿಸಲಾಯಿತು. ಸಮ್ಮೇಳನವು 40 ಸಾಗರ ತಜ್ಞರು, ಕಾರ್ಯಕರ್ತರು ಮತ್ತು ವಿಜ್ಞಾನಿಗಳಿಗೆ ಆತಿಥ್ಯ ವಹಿಸಿತು, ಅವರು ತಿಮಿಂಗಿಲ ಶಾರ್ಕ್ನ ಕ್ಷೀಣಿಸುತ್ತಿರುವ ಜನಸಂಖ್ಯೆಯ ಬಗ್ಗೆ ಕಾಳಜಿಯನ್ನು ಹೊಂದಿದ್ದರು. ಶಾರ್ಕ್ಗಳು 240 ರಿಂದ 260 ಮಿಲಿಯನ್ ವರ್ಷಗಳಿಗಿಂತಲೂ ಹೆಚ್ಚು ಕಾಲ ಇವೆ ಎಂದು ಹೇಳಿದರೆ, 1820 ರ ದಶಕದವರೆಗೆ ದಕ್ಷಿಣ ಆಫ್ರಿಕಾದ ಕರಾವಳಿಯಲ್ಲಿ ತಿಮಿಂಗಿಲ ಶಾರ್ಕ್ ಅನ್ನು ಮೊದಲು ಕಂಡುಹಿಡಿಯಲಾಯಿತು. ಡಾ. ಆಂಡ್ರ್ಯೂ ಸ್ಮಿತ್ ಈ ಮೀನನ್ನು ಭೂಮಿಯ ಮೇಲೆ ಇರುವ ಅತಿದೊಡ್ಡ ಶಾರ್ಕ್ ಎಂದು ಸರಿಯಾಗಿ ವಿವರಿಸಿದ್ದಾರೆ. ಅವುಗಳ ಅಗಾಧ ಗಾತ್ರದ ಹೊರತಾಗಿಯೂ ಮತ್ತು ಅವರ ಚಿಕ್ಕ ಸೋದರಸಂಬಂಧಿಗಳು ಹೆಚ್ಚು ಪ್ರತಿಕೂಲವೆಂದು ಸಾಬೀತುಪಡಿಸಬಹುದು ಎಂಬ ಅಂಶದ ಹೊರತಾಗಿಯೂ, ತಿಮಿಂಗಿಲ ಶಾರ್ಕ್ಗಳು ಸೌಮ್ಯವಾದ ನಡವಳಿಕೆಯನ್ನು ಹೊಂದಿವೆ ಎಂದು ತಿಳಿದುಬಂದಿದೆ. ಜನನದ ಸಮಯದಲ್ಲಿ, ಅವರು 16 ರಿಂದ 24 ಇಂಚುಗಳಿಗಿಂತ ದೊಡ್ಡದಾಗಿರುವುದಿಲ್ಲ, ಆದರೆ ಅವರು ಬೆಳೆಯುವುದನ್ನು ಮುಂದುವರಿಸಿ, 25 ಕ್ಕೆ ತಮ್ಮ ಉತ್ತುಂಗವನ್ನು ತಲುಪುತ್ತಾರೆ, ಅವರು 46 ರಿಂದ 60 ಅಡಿಗಳಷ್ಟು ಉದ್ದವಿರಬಹುದು. ಅವರು 3,000 ಹಲ್ಲುಗಳ 300 ಸಾಲುಗಳನ್ನು ಹೊಂದಿದ್ದಾರೆ, ಅದು ಕೇವಲ 0.2 ಇಂಚು ಉದ್ದವಾಗಿದೆ! ಸುಮಾರು 12 ಟನ್ನಳಷ್ಟು ತೂಕವಿರುವ, ತಿಮಿಂಗಿಲ ಶಾರ್ಕ್ಗಳು ಫಿಲ್ಟರ್–ಫೀಡರ್ ಆಗಿದ್ದು, ಹೆಚ್ಚಾಗಿ ಪ್ಲ್ಯಾಂಕ್ಟನ್ಗಳು, ಸ್ಕ್ವಿಡ್ಗಳು ಮತ್ತು ಮೀನುಗಳನ್ನು ಸೇವಿಸುತ್ತವೆ. ಅವುಗಳ ಗಾತ್ರದಂತೆಯೇ, ಅವರು ಪ್ರತಿದಿನ 44 ಪೌಂಡ್ ಆಹಾರವನ್ನು ತಿನ್ನಲು ಕಾರಣವಾಗುವ ಅಗಾಧವಾದ ಹಸಿವನ್ನು ಹೊಂದಿದ್ದಾರೆ.



# ಕಮಲಾ ಹ್ಯಾರಿಸ್ ವಿರುದ್ಧ ಅಸಭ್ಯ ಪೋಸ್ಟ್ ಪ್ರಕಟಿಸಿದ ಟ್ರಂಪ್ : ಆಕ್ರೋಶ



**ವಾಶಿಂಗ್ಟನ್:** ಅಮೆರಿಕದ ಉಪಾಧ್ಯಕ್ಷೆ ಹಾಗೂ ಅಧ್ಯಕ್ಷೀ ಚುನಾವಣೆಗೆ ಡೆಮಾಕ್ರಾಟ್ ಪಕ್ಷದ ಅಭ್ಯರ್ಥಿಯಾದ ಕಮಲಾ ಹ್ಯಾರಿಸ್ ಕುರಿತಾದ ಅಸಭ್ಯ ಹೇಳಿಕೆಯುಳ್ಳ ಪೋಸ್ಟ್ ಒಂದನ್ನು ತನ್ನ ಸಾಮಾಜಿಕ ಜಾಲತಾಣದಲ್ಲಿ ಮರುಪ್ರಕಟಿಸುವ ಮೂಲಕ ಅಮೆರಿಕ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿವಾದದ ಕಿಚ್ಚು ಹಚ್ಚಿದ್ದಾರೆ.

ಟ್ರಂಪ್ ಈ ನಡವಳಿಕೆಗೆ ಅಮೆರಿಕದಲ್ಲಿ ರಾಜಕಾರಣಿಗಳು, ಚಿಂತಕರು ಸೇರಿದಂತೆ ವ್ಯಾಪಕ ಖಂಡನೆ ವ್ಯಕ್ತವಾಗಿದೆ. ಲೈಂಗಿಕ ಸಂಬಂಧಗಳ ಮೂಲಕ ಕಮಲಾ ಹ್ಯಾರಿಸ್ ತನ್ನ ರಾಜಕೀಯ ಜೀವನದಲ್ಲಿ ಉನ್ನತಿಯನ್ನು ಸಾಧಿಸಿದ್ದಾರೆಂದು ಟ್ರಂಪ್ ಅವರ ಬೆಂಬಲಿಗರೊಬ್ಬರು ಪೋಸ್ಟ್ ಮಾಡಿದ್ದರು. ಅದನ್ನು ಟ್ರಂಪ್ ಅವರು ತನ್ನ ಸಾಮಾಜಿಕ ಜಾಲತಾಣ ಟ್ರೂತ್ ಸೋಶಿಯಲ್ನಲ್ಲಿ ಮರುಪ್ರಕಟಿಸಿದ್ದರು. ಸ್ಯಾನ್ ಫ್ರಾನ್ಸಿಸ್ಕೊದ ಮಾಜಿ ಮೇಯರ್ ವಿಲ್ಲಿ ಬ್ರೌನ್ ಅವರೊಂದಿಗೆ ಕಮಲಾ ಹ್ಯಾರಿಸ್ಗೆ ಇದ್ದ ಸಂಬಂಧವನ್ನು ಪೋಸ್ಟ್ನಲ್ಲಿ ಉಲ್ಲೇಖಿಸಲಾಗಿತ್ತು. ಕಮಲಾ ಹ್ಯಾರಿಸ್ ಜೊತೆ ಪ್ರೇಮಸಂಬಂಧವಿದ್ದ ಸಮಯದಲ್ಲಿ ಬ್ರೌನ್ ಅವರು ಕ್ಯಾಲಿಫೋರ್ನಿಯಾ ರಾಜ್ಯ ಅಸೆಂಬ್ಲಿಯ ಸ್ಪೀಕರ್ ಆಗಿದ್ದರು.

# ಎನ್ ಸಿಪಿ ಮುಖ್ಯಸ್ಥನ ಪಕ್ಕ ಕುಳಿತು ಹೊರಬಂದರೆ ವಾಂತಿ ಮಾಡಿಕೊಳ್ಳುತ್ತೇನೆ: ಶಿವಸೇನೆ ಸಚಿವ

**ಮುಂಬೈ:** ಸಂಪುಟ ಸಭೆಯಲ್ಲಿ ಎನ್ ಸಿಪಿ ಮುಖಂಡ ಹಾಗೂ ಉಪ ಮುಖ್ಯಮಂತ್ರಿ ಅಜಿತ್ ಪವಾರ್ ಪಕ್ಕ ಕುಳಿತುಕೊಂಡಿದ್ದ ನಾನು ಹೊರಬಂದ ತಕ್ಷಣ ವಾಂತಿ ಮಾಡಿಕೊಳ್ಳಬೇಕಾಯಿತು ಎಂದು ಶಿವಸೇನೆ ಸಚಿವ ತಾನಾಜಿ ಸಾವಂತ್ ಗುರುವಾರ ಹೇಳಿಕೆ ನೀಡುವ ಮೂಲಕ ಮಹಾಯುತಿ ಸರ್ಕಾರವನ್ನು ಮುಜುಗರಕ್ಕೆ ಸಿಲುಕಿಸಿದ್ದಾರೆ. ನಾನೆಂದೂ ಎನ್ ಸಿಪಿ ನಾಯಕತ್ವದ ಸಾಮೀಪ್ಯದಲ್ಲಿ ಇರಲಿಲ್ಲ. ಅವರ ಪಕ್ಕದಲ್ಲಿ ಕುಳಿತದ್ದೇ ವ್ಯತಿರಿಕ್ತ ಶಾರೀರಿಕ ಪರಿಣಾಮಕ್ಕೆ ಕಾರಣವಾಯಿತು ಎಂದು ಸಾವಂತ್ ಹೇಳಿದ್ದಾರೆ. ಜೀವನದಲ್ಲಿ ನಾನೆಂದೂ ಎನ್ ಸಿಪಿ ಜತೆಗೆ ಇರಲಿಲ್ಲ. ನಾವು ಅಕ್ಕಪಕ್ಕ ಕುಳಿತೆವು. ಆದರೆ ಹೊರಬಂದ ಬಳಿಕ ವಾಂತಿ ಮಾಡಿಕೊಂಡೆವು ಎಂದು ವಿವರಿಸಿದ್ದಾರೆ. ನಾನು ಕಟ್ಟಾ ಶಿವ ಸೈನಿಕ. ಕಾಂಗ್ರೆಸ್ ಹಾಗೂ ಎನ್ ಸಿಪಿ ಜತೆ ನಾನು ಜೀವನದಲ್ಲಿ ಎಂದೂ ಸನಿಹದಲ್ಲಿ ಇರಲಿಲ್ಲ. ವಿದ್ಯಾರ್ಥಿ ಜೀವನದಿಂದಲೂ ಅಂಥ ಪರಿಸ್ಥಿತಿ ಬರಲಿಲ್ಲ. ಇದು ವಾಸ್ತವ. ಇಂದು ಕೂಡಾ ಸಂಪುಟ ಸಭೆಯಲ್ಲಿ ನಾನು ಅವರ ಪಕ್ಕ ಕುಳಿತರೆ ಹೊರಬಂದ ಬಳಿಕ ವಾಂತಿ ಮಾಡಿಕೊಳ್ಳುತ್ತೇನೆ. ಈ ಹೇಳಿಕೆಗೆ ನಾನು ಬದ್ಧ ಎಂದು ಸಾರ್ವಜನಿಕ ಸಮಾರಂಭದಲ್ಲಿ ಹೇಳಿದರು. ಆದರೆ ಎನ್ ಸಿಪಿ ನಾಯಕರು ಇದಕ್ಕೆ ಸೌಮ್ಯವಾಗಿ ಪ್ರತಿಕ್ರಿಯಿಸಿದ್ದಾರೆ. ತಾನಾಜಿ ಸಾವಂತ್ ಅವರ ವಾಂತಿಗೆ ಕಾರಣ ಏನು ಗೊತ್ತಿಲ್ಲ. ತಾನಾಜಿ ಸಾವಂತ್ ಆರೋಗ್ಯ ಸಚಿವರು. ಬಹುಶಃ ಆರೋಗ್ಯ ಪರಿಸ್ಥಿತಿ ಅದಕ್ಕೆ ಕಾರಣವಾಗಿರಬೇಕು. ಆದರೆ ಮಹಾಯುತಿಯಲ್ಲಿ ಇದ್ದುಕೊಂಡು, ಅವರು ವಾಂತಿ ಮಾಡಿಕೊಳ್ಳುತ್ತಾರೆ ಎಂದಾದರೆ, ಅದಕ್ಕೆ ಕಾರಣ ಏನು ಎಂದು ಏಕನಾಥ್ ಶಿಂಧೆಯವರೇ ಹೇಳಬೇಕು ಎಂದು ಎನ್ ಸಿಪಿ ಶಾಸಕ ಅಮೋಲ್ ಮಿಟ್ಕರಿ ಹೇಳಿದ್ದಾರೆ.

# ಅಫ್ಘಾನಿಸ್ತಾನದಲ್ಲಿ 5.7 ತೀವ್ರತೆಯ ಪ್ರಬಲ ಭೂಕಂಪ

**ಅಫ್ಘಾನಿಸ್ತಾನ:** ಅಫ್ಘಾನಿಸ್ತಾನದಲ್ಲಿ ಪ್ರಬಲ ಭೂಕಂಪ ಸಂಭವಿಸಿದ್ದು, ದೆಹಲಿ-ಎನ್ಸಿಆರ್ ಸೇರಿದಂತೆ ಈ ಪ್ರದೇಶದಾದ್ಯಂತ ಬಲವಾದ ಕಂಪನ ಉಂಟಾಗಿದೆ. ರಿಕ್ಟರ್ ಮಾಪಕದಲ್ಲಿ ಭೂಕಂಪದ ತೀವ್ರತೆ 5.7 ರಷ್ಟಿದ್ದು, ರಾಜಧಾನಿ ಮತ್ತು ಅದರ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಗಮನಾರ್ಹ ನಡುಕ ಉಂಟಾಗಿದೆ. 255 ಕಿಲೋಮೀಟರ್ ಆಳದಲ್ಲಿ ಭೂಕಂಪ ಸಂಭವಿಸಿದೆ ಎಂದು ರಾಷ್ಟ್ರೀಯ ಭೂಕಂಪಶಾಸ್ತ್ರ ಕೇಂದ್ರ, (ಎನ್ಸಿಎಸ್) ತಿಳಿಸಿದೆ.''ಇಕ್ಯೂ ಆಫ್ ಎಂ: 5.7, ಆನ್: 29/08/2024 11:26:38 IST, ಲ್ಯಾಟ್: 36.51 ಎನ್, ಉದ್ದ: 71.12 ಇ, ಆಳ: 255 ಕಿ.ಮೀ, ಸ್ಥಳ: ಅಫ್ಘಾನಿಸ್ತಾನ'' ಎಂದು ಎನ್ಸಿಎಸ್ ಎಕ್ಸ್‌ನಲ್ಲಿ ಪೋಸ್ಟ್‌ನಲ್ಲಿ ತಿಳಿಸಿದೆ.



# ಮುಸ್ಲಿಂ ವಿವಾಹ ಕಾಯ್ದೆ ರದ್ದು ಮಸೂದೆ ಅಂಗೀಕರಿಸಿದ ಅಸ್ಸಾಂ ರಾಜ್ಯ



**ನವದೆಹಲಿ:** ಮಹತ್ವದ ಬೆಳವಣಿಗೆ ಎಂಬಂತೆ ಮುಸ್ಲಿಂ ಸಮುದಾಯಗಳ ವಿವಾಹ ಮತ್ತು ವಿಚ್ಛೇದನ ನೋಂದಾಯಿಸುವ ಮುಸ್ಲಿಂ ವಿವಾಹ ಕಾನೂನು ರದ್ದುಗೊಳಿಸುವ ಮಸೂದೆಯನ್ನು ಇಂದು ಅಸ್ಸಾಂ ವಿಧಾನಸಭೆಯು ಅಂಗೀಕರಿಸಿದೆ.

ಈ ಬಗ್ಗೆ ಪ್ರತಿಕ್ರಿಯೆ ನೀಡಿರುವ ಸಿಎಂ ಹಿಮಂತ ಬಿಸ್ವಾ ಶರ್ಮಾ, ಮಸೂದೆಯ ಉದ್ದೇಶ ಬಾಲ್ಯವಿವಾಹ ನಿರ್ಮೂಲನೆ ಮಾಡುವುದು ಹಾಗೂ ಈ ಸಮುದಾಯದಲ್ಲಿರುವ ಖಾಜಿ ಪದ್ಧತಿಯಿಂದ ದೂರವಾಗಿಸುವುದೂ ಒಳಗೊಂಡಿದೆ.

ಈ ಮೂಲಕ ಮುಸ್ಲಿಂ ವಿವಾಹಗಳು ವಿಚ್ಛೇದನಗಳ ಪ್ರಕ್ರಿಯೆಗಳು ಸರ್ಕಾರಿ ವ್ಯವಸ್ಥೆಯಡಿ ನೋಂದಣಿಯನ್ನು ತರಲು ಇಚ್ಛಿಸಿರುವುದಾಗಿ ಘೋಷಿಸಿದರು.

ಅಸ್ಸಾಂ ಮುಸ್ಲಿಂ ವಿವಾಹಗಳು ಮತ್ತು ವಿಚ್ಛೇದನಗಳ ನೋಂದಣಿ ಕಾಯಿದೆ-1935 ರದ್ದುಗೊಳಿಸುವ ಮಸೂದೆ ಮತ್ತು ರದ್ದುಗೊಳಿಸುವ ಸುಗ್ರೀವಾಜ್ಞೆ 2024 ಅನ್ನು ಕಂದಾಯ ವಿಪತ್ತು ನಿರ್ವಹಣಾ ಸಚಿವ ಜೋಗೆನ್ ಮೋಹನ್ ಆ.22ರಂದೇ ವಿಧಾನಸಭೆಯಲ್ಲಿ ಮಂಡಿಸಿದ್ದು ಗೊತ್ತೇ ಇದೆ.

ಮುಸ್ಲಿಂ ವಿವಾಹ ಕಾಯ್ದೆ ದುರುಪಯೋಗವಾಗುತ್ತಿದ್ದು, ಪೋಷಕರ ಒಪ್ಪಿಗೆ ಇಲ್ಲದೆ ಬಲವಂತದಿಂದ ಅಪ್ರಾಪ್ತರ ವಿವಾಹಗಳನ್ನು ಮಾಡಲಾಗುತ್ತಿದೆ. ಇದನ್ನು ತಡೆಯಲು ಈ ಹೊಸ ಮಸೂದೆ ಸಹಾಯವಾಗಲಿದೆ ಎಂದು ಮೋಹನ್ ಒತ್ತಿ ಹೇಳಿದರು.

# ಎಸ್ಸಿಓ ಸಮಾವೇಶದಲ್ಲಿ ಭಾಗವಹಿಸಲು ನರೇಂದ್ರ ಮೋದಿಗೆ ಪಾಕ್ ಆಹ್ವಾನ



**ಇಸ್ಲಾಮಾಬಾದ್:** ಇಸ್ಲಾಮಾಬಾದ್‌ನಲ್ಲಿ ಅಕ್ಟೋಬರ್ ತಿಂಗಳಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಘಟನೆ (ಎಸ್ಸಿಓ)ಯ ಶೃಂಗಸಭೆಯಲ್ಲಿ ಪಾಲ್ಗೊಳ್ಳುವಂತೆ ಪಾಕಿಸ್ತಾನವು ಪ್ರಧಾನಿ ನರೇಂದ್ರ ಮೋದಿಯವರನ್ನು ಗುರುವಾರ ಆಹ್ವಾನಿಸಿದೆ. ಎಸ್ಸಿಓ ಸಮಾವೇಶದಲ್ಲಿ ಪಾಲ್ಗೊಳ್ಳುವಂತೆ ಇಸ್ಲಾಮಾಬಾದ್, ವಿವಿಧ ದೇಶಗಳ ವರಿಷ್ಠರಿಗೆ ಆಹ್ವಾನಪತ್ರಿಕೆಗಳನ್ನು ಕಳುಹಿಸಿದೆ ಎಂದು ಪಾಕ್ ವಿದೇಶಾಂಗ ಸಚಿವಾಲಯದ ವಕ್ತಾರೆ ಮುಮ್ತಾಝ್ ಝುಹ್ರಾ ಬಲೋಚ್ ಹೇಳಿದರು.

ಇಸ್ಲಾಮಾಬಾದ್‌ನಲ್ಲಿ ಸಾಪ್ತಾಹಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡುತ್ತಿದ್ದ ಅವರು, ಪ್ರಧಾನಿ ನರೇಂದ್ರ ಮೋದಿಯವರಿಗೆ ಆಹ್ವಾನವನ್ನು ಕಳುಹಿಸಲಾಗಿದೆ. ಈಗಾಗಲೇ ಕೆಲವು ದೇಶಗಳು ಸಮಾವೇಶದಲ್ಲಿ ತಮ್ಮ ಪಾಲ್ಗೊಳ್ಳುವಿಕೆಯನ್ನು ಖಚಿತಪಡಿಸಿವೆ ಎಂದರು. ಸಮಾವೇಶದಲ್ಲಿ ತಮ್ಮ ಭಾಗವಹಿಸುವಿಕೆಯನ್ನು ಖಾತರಿಪಡಿಸಿದ ದೇಶಗಳ ಹೆಸರನ್ನು ಮುಂದಿನ ದಿನಗಳಲ್ಲಿ ತಿಳಿಸಲಾಗುವುದು'' ಎಂದು ಬಲೋಚ್ ಹೇಳಿದ್ದಾರೆ. ಇಸ್ಲಾಮಬಾದ್‌ನಲ್ಲಿ ಅಕ್ಟೋಬರ್ 15-16ರಂದು ಶಾಂಘೈ ಸಹಕಾರ ಸಂಘಟನೆಯ ಸದಸ್ಯ ರಾಷ್ಟ್ರಗಳ ವರಿಷ್ಠ ರಸಭೆ ನಡೆಯಲಿದ್ದು, ಪಾಕ್ ಆತಿಥ್ಯ ವಹಿಸಲಿದೆ. ಸಮಾವೇಶದಲ್ಲಿ ಹಣಕಾಸು, ಆರ್ಥಿತೆ, ಸಾಮಾಜಿ-ಸಾಂಸ್ಕೃತಿ ಹಾಗೂ ಮಾನವೀಯ ಸಹಕಾರಗಳ ಕುರಿತು ಸದಸ್ಯ ರಾಷ್ಟ್ರಗಳ ನಡುವೆ ಮಾತುಕತೆಗಳು ನಡೆಯಲಿದೆ.

# ಶೇಖ್ ಹಸೀನಾ ವಿರುದ್ಧ ಮತ್ತೆ ನಾಲ್ಕು ಪ್ರಕರಣ

**ಢಾಕಾ:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ, ಅವರ ಮಾಜಿ ಕ್ಯಾಬಿನೆಟ್ ಸಚಿವರು ಮತ್ತು ಸಹಾಯಕರ ವಿರುದ್ಧ ಮತ್ತೆ ನಾಲ್ಕು ಪ್ರಕರಣಗಳನ್ನು ದಾಖಲಿಸಲಾಗಿದ್ದು, ಅವರ ವಿರುದ್ಧ ದಾಖಲಾಗಿರುವ ಒಟ್ಟು ಪ್ರಕರಣಗಳ ಸಂಖ್ಯೆ 75ಕ್ಕೆ ಏರಿದೆ ಎಂದು ವರದಿಯಾಗಿದೆ.ಬಾಂಗ್ಲಾದ ಸ್ಥಳೀಯ ಮಾಧ್ಯಮ ವರದಿಯ ಪ್ರಕಾರ ಮಂಗಳವಾರ ಢಾಕಾ ನ್ಯಾಯಾಲಯದಲ್ಲಿ ಮೂರು ಪ್ರಕರಣಗಳು ದಾಖಲಾವೆ. ಎರಡು ದಿನಗಳ ಹಿಂದೆ ಬೋಗುರಾದಲ್ಲಿ ಮತ್ತೊಂದು ಕೊಲೆ ಪ್ರಕರಣ ದಾಖಲಾಗಿದೆ. ಈ ಮೂಲಕ 76 ವರ್ಷದ ಹಸೀನಾ ವಿರುದ್ಧ ಇತ್ತೀಚಿನ ಪ್ರತಿಭಟನೆಗೆ ಸಂಬಂಧಿಸಿದ 75 ಪ್ರಕರಣಗಳು ದಾಖಲಾಗಿವೆ. ಈ 75 ಪ್ರಕರಣಗಳ ಪೈಕಿ 63 ಕೊಲೆ ಪ್ರಕರಣಗಳಾಗಿದ್ದು, 7 ಮಾನವೀಯತೆ ಮತ್ತು ನರಮೇಧದ ವಿರುದ್ಧದ ಅಪರಾಧಗಳ ಆರೋಪಗಳು, 3 ಅಪಹರಣ ಹಾಗೂ 2 ಇತರ ಆರೋಪಗಳು ಸೇರಿವೆ.ವಿವಾದಾತ್ಮಕ ಉದ್ಯೋಗ ಕೋಟಾ ವ್ಯವಸ್ಥೆಗೆ ಸಂಬಂಧಿಸಿದಂತೆ ಬಾಂಗ್ಲಾದೇಶದಾದ್ಯಂತ ಭಾರೀ ಪ್ರತಿಭಟನೆ ನಡೆದಿದೆ. ಹಿಂಸಾತ್ಮಕ ಪ್ರತಿಭಟನೆಯ ನಡುವೆ ಶೇಖ್ ಹಸೀನಾ ಆಗಸ್ಟ್ 5 ರಂದು ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿ ಭಾರತಕ್ಕೆ ಪಲಾಯನ ಮಾಡಿದರು.



# ವಿರೋಧ ಪಕ್ಷಗಳ ಬೇಡಿಕೆಗೆ ದನಿ

**ನವದೆಹಲಿ:** ರಾಷ್ಟ್ರೀಯ ಜಾತಿ ಗಣತಿಗೆ ಬೇಡಿಕೆ ಹೆಚ್ಚುತ್ತಿದ್ದು, ಎನ್‌ಡಿಎ ಸರಕಾರದ ಪ್ರಮುಖ ಮಿತ್ರಪಕ್ಷವಾದ ಜೆಡಿಯು ಇದೀಗ ವಿರೋಧ ಪಕ್ಷಗಳ ಇಂಡಿಯಾ ಬ್ಲಾಕ್ ಒಕ್ಕೂಟವನ್ನು ನ್ನು ಬೆಂಬಲಿಸುತ್ತಿದೆ. ಮೋದಿ ಸರ್ಕಾರದ ಅತಿ ದೊಡ್ಡ ಮಿತ್ರ ಪಕ್ಷವಾಗಿರುವ ಜೆಡಿಯು ಸಂಸತ್ತಿನ ಇತರೆ ಹಿಂದುಳಿದ ವರ್ಗಗಳ ಕಲ್ಯಾಣ ಸಮಿತಿಯಲ್ಲಿ ಜಾತಿ ಗಣತಿಯನ್ನು ಚರ್ಚೆಗೆ ವಿಷಯವಾಗಿ ತೆಗೆದುಕೊಳ್ಳಬೇಕು ಎಂದು ಒತ್ತಾಯಿಸಿದೆ. ನಿನ್ನೆ ದೆಹಲಿಯಲ್ಲಿ ಬಿಜೆಪಿ ಸಂಸದ ಗಣೇಶ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆದ ಸಮಿತಿಯ ಮೊದಲ ಸಭೆಯಲ್ಲಿ ಡಿಎಂಕೆ ಸದಸ್ಯ ಟಿಆರ್ ಬಾಲು ಈ ವಿಷಯವನ್ನು ಪ್ರಸ್ತಾಪಿಸಿದರು. ಸಮಿತಿಯು ಜಾತಿ ಗಣತಿಯನ್ನು ಚರ್ಚೆಗೆ ಮೊದಲ ವಿಷಯವಾಗಿ ಪಟ್ಟಿ ಮಾಡಬೇಕೆಂದು ಕಾಂಗ್ರೆಸ್ ಸದಸ್ಯ ಮಾಣಿಕಂ ಟ್ಯಾಗೋರ್ ಬೇಡಿಕೆ ಮುಂದಿಟ್ಟರು. ಅವರನ್ನು ಟಿಎಂಸಿ ಸಂಸದ ಕಲ್ಯಾಣ್ ಬ್ಯಾನರ್ಜಿ ಬೆಂಬಲಿಸಿದರು, ಜಾತಿ ಸಮೀಕ್ಷೆಯನ್ನು ನಡೆಸುವ ಕುರಿತು ಸಮಿತಿಯು ಕೇಂದ್ರ ಗೃಹ ಸಚಿವಾಲಯಕ್ಕೆ ಪತ್ರ ಬರೆಯಬೇಕೆಂದು ಒತ್ತಾಯಿಸಿದರು.

ಗುತ್ತಿಗೆ ಮತ್ತು ತಾತ್ಕಾಲಿಕ ಆಧಾರದ ಮೇಲೆ ಮಾಡಲಾದ ನೇಮಕಾತಿಗಳು ಮತ್ತು ತಾತ್ಕಾಲಿಕ ನೇಮಕಾತಿಗಳನ್ನು ಸಹ ಮೀಸಲಾತಿ ಒಳಗೊಂಡಿರಬೇಕು ಎಂದು ಬಿಜೆಪಿ ಸದಸ್ಯರೊಬ್ಬರು ಹೇಳಿದರು. ಪ್ರತಿಪಕ್ಷಗಳ ಜೊತೆಗೆ ಜೆಡಿಯು ಸಂಸದ ಗಿರಿಧಾರಿ ಯಾದವ್ ಜಾತಿ ಗಣತಿ ವಿಷಯವನ್ನು ಸಮಿತಿಯ ಚರ್ಚೆಗೆ ಪಟ್ಟಿ ಮಾಡಬೇಕೆಂದು ಒತ್ತಾಯಿಸಿದರು.

# ಪಾಕ್ ಸೇನಾಧಿಕಾರಿ ಸೇರಿ ನಾಲ್ವರನ್ನು ಅಪಹರಿಸಿದ ತಾಲಿಬಾನ್!



**ಇಸ್ಲಾಮಾಬಾದ್:** ಪಾಕಿಸ್ತಾನದ ಖೈಬರ್ ಪಖ್ತುಂಖ್ವಾ ಪ್ರಾಂತ್ಯದ ಡೇರಾ ಇಸ್ಮಾಯಿಲ್ ಖಾನ್ ಎಂಬಲ್ಲಿ ಲೆಫ್ಟಿನೆಂಟ್ ಕರ್ನಲ್ ಖಾಲಿದ್ ಖಾನ್ ಮತ್ತು ಇತರ ಮೂವರನ್ನು ತಾಲಿಬಾನ್ ಅಪಹರಿಸಿದೆ.

ಕೃತ್ಯದ ಹೊಣೆಯನ್ನು ಯಾವುದೇ ಸಂಘಟನೆ ಹೊತ್ತುಕೊಂಡಿಲ್ಲ, ಆದರೆ ಖಾಲಿದ್ ಖಾನ್ ತಾಲಿಬಾನ್ ವಶದಲ್ಲಿರುವ ವೀಡಿಯೊ ಕುಟುಂಬಕ್ಕೆ ತಲುಪಿದೆ ಎಂದು ಸ್ಥಳೀಯ ಅಧಿಕಾರಿಗಳು ತಿಳಿಸಿದ್ದಾರೆ.

ಲೆಫ್ಟಿನೆಂಟ್ ಕರ್ನಲ್ ಖಾಲಿದ್ ಖಾನ್ ಮಸೀದಿಯಲ್ಲಿ ತಂದೆಯ ಅಂತ್ಯಕ್ರಿಯೆ ನೆರವೇರಿಸಿದ ಬಳಿಕ ಪ್ರಾರ್ಥನೆ ಸಲ್ಲಿಸುತ್ತಿದ್ದಾಗ ಈ ಅಪಹರಣ ನಡೆದಿದೆ.

ಖಾನ್ ಅವರು ಶಸ್ತ್ರಧಾರಿಗಳ ಮುಂದೆ ಕುಳಿತು ತಾಲಿಬಾನ್ನ ಬೇಡಿಕೆಗಳನ್ನು ಒಪ್ಪಿಕೊಳ್ಳುವಂತೆ ವೀಡಿಯೊದಲ್ಲಿ ಒತ್ತಾಯಿಸುತ್ತಿರುವುದು ಕಾಣಿಸುತ್ತಿದೆ. ಅಪಹೃತರಲ್ಲಿ ಇಬ್ಬರು ಖಾನ್ ಸೋದರರಾಗಿದ್ದು ಅವರು ಸರ್ಕಾರಿ ಅಧಿಕಾರಿಗಳು ಮತ್ತು ಅವರ ಸೋದರಳಿಯ.

ಅಪಹೃತರನ್ನು ಪತ್ತೆ ಹಚ್ಚಲು ಕ್ರಮ ಕೈಗೊಂಡಿರುವುದಾಗಿ ಸ್ಥಳೀಯ ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ. ತೆಹ್ರಿಕ್-ಎ-ತಾಲಿಬಾನ್ ಪಾಕಿಸ್ತಾನ ಟಿಟಿಪಿ ಎಂದು ಕರೆಯಲಾಗುವ ಸಂಘಟನೆ ಪ್ರಕ್ಷುಬ್ಧ ವಾಯುವ್ಯ ಪಾಕಿಸ್ತಾನದಲ್ಲಿ ಪ್ರಬಲವಾಗಿದೆ. 2021 ರಲ್ಲಿ ಅಫ್ಘಾನಿಸ್ತಾನದಲ್ಲಿ ಅಫ್ಘಾನ್ ತಾಲಿಬಾನ್ ಅಧಿಕಾರವನ್ನು ವಶಪಡಿಸಿಕೊಂಡಾಗಿನಿಂದ ಪ್ರತ್ಯೇಕ ಗುಂಪು ಆಗಿ ಅಫ್ಘಾನ್ ತಾಲಿಬಾನ್ ಜೊತೆ ಟಿಟಿಪಿ ಮೈತ್ರಿ ಮಾಡಿಕೊಂಡಿದೆ.

# ಶಾಸಕನ ಮನೆ ಮುಂದೆ ಬೆಂಕಿ ಹಚ್ಚಿಕೊಂಡ ಕಾರ್ಯಕರ್ತ!

**ತಮಿಳುನಾಡು:** ತನಗೆ ಪಕ್ಷದಲ್ಲಿ ಕಡೆಗಣಿಸಲಾಗುತ್ತಿದ್ದು, ಸೂಕ್ತಸ್ಥಾನಮಾನ ನೀಡುತ್ತಿಲ್ಲ ಎಂದು ಮನನೊಂದು ಡಿಎಂಕೆ ಕಾರ್ಯಕರ್ತನೋರ್ವ ಶಾಸಕನ ಮನೆ ಮುಂದೆಯೇ ಬೆಂಕಿ ಹಚ್ಚಿಕೊಂಡು ಆತ್ಮಹತ್ಯೆ ಯತ್ನಿಸಿದ ಘಟನೆ ಮಧುರೈನಲ್ಲಿ ಇಂದು ನಡೆದಿದೆ. ಡಿಎಂಕೆ ಕಾರ್ಯಕರ್ತ ಗಣೇಶನ್ ಎಂಬುವವರು,



ತಾವು ಹಲವು ವರ್ಷಗಳಿಂದ ಪಕ್ಷಕ್ಕಾಗಿ ದುಡಿದ್ದೇನೆ. ಆದರೆ ಪಕ್ಷವು ಹಾಗೂ ತನ್ನ ಕ್ಷೇತ್ರದ ಶಾಸಕ ತಮ್ಮನ್ನು ಗುರಿತಿಸಿ ಸೂಕ್ತ ಸ್ಥಾನಮಾನ ನೀಡಿಲ್ಲ, ಹೀಗಾಗಿ ನೊಂದಿದ್ದೇನೆ ಎಂದು ಹೇಳುತಾ, ಡಿಎಂಕೆ ಮಧುರೈ ಶಾಸಕ ಜಿ.ದಳಪತಿ ನಿವಾಸದ ಮುಂದೆಯೇ ಆತ್ಮಹತ್ಯೆಗೆ ಯತ್ನಿಸಿದ್ದಾನೆ. ಶಾಸಕನ್ನು ಕೂಡಲೇ ಪದಚ್ಯುತಿಗೊಳಿಸಬೇಕು ಎಂದು ಘೋಷಣೆ ಕೂಗಿದ್ದಾನೆ ಎಂದು ತಿಳಿದುಬಂದಿದೆ. ಸದ್ಯ ಗಣೇಶನ್ಗೆ ತೀವ್ರವಾಗಿ ಸುಟ್ಟಗಾಯಗಳಾಗಿದ್ದು, ಅವರನ್ನು ತಿರುಪರಂಕುಂದ್ರಂ ಸರ್ಕಾರಿ ಆಸ್ಪತ್ರೆಯ ಖಅಗನಲ್ಲಿ ಚಿಕಿತ್ಸೆ ಮುಂದುವರಿಸಲಾಗಿದೆ. ಮೂಲಗಳ ಪ್ರಕಾರ, ಗಣೇಶನ್ ಅವರು ಈ ಹಿಂದೆ ಪಕ್ಷದ ಟ್ರೇಡ್ ಯೂನಿಯನ್ ವಿಭಾಗದಲ್ಲಿ ಮಹತ್ವದ ಸ್ಥಾನವನ್ನು ಹೊಂದಿದ್ದರು. ಆದರೆ, ಇತ್ತೀಚಿನ ದಿನಗಳಲ್ಲಿ ಅವರನ್ನು ಪಕ್ಷದಲ್ಲಿ ಪರಿಗಣಿಸುತ್ತಿಲ್ಲ. ಸೂಕ್ತ ಸ್ಥಾನ ನೀಡದೇ ಹಿಂಬಡ್ತಿ ಮಾಡಿದ್ದಾರಂತೆ. ಇದರಿಂದ ನೊಂದು ಆತ್ಮಹತ್ಯಗೆ ಪ್ರಯತ್ನಿಸಿದ್ದಾರೆಂದು ಹೇಳಲಾಗುತ್ತಿದೆ.

# ಇರಾನ್ ಸರ್ಕಾರದ ವಕ್ತಾರೆಯಾಗಿ ಮೊದಲ ಬಾರಿಗೆ ಮಹಿಳೆ ನೇಮಕ



**ಇರಾನ್:** ಇರಾನ್ ಸರ್ಕಾರದ ವಕ್ತಾರರಾಗಿ ಇದೇ ಮೊದಲ ಬಾರಿಗೆ ಮಹಿಳೆಯೊಬ್ಬರನ್ನು ನೇಮಿಸಲಾಗಿದೆ. ನೂತನವಾಗಿ ಅಸ್ತಿತ್ವಕ್ಕೆ ಬಂದಿರುವ ಮಸೂದ್ ಪೆಜೆಷ್ಕಿಯಾನ್ ಸರಕಾರದ ವಕ್ತಾರರಾಗಿ ಫತೇಮೆಹ್ ಮೊಹಜೆರಾನಿ ಅವರನ್ನು ನೇಮಕ ಮಾಡಲಾಗಿದೆ. ಕ್ಯಾಬಿನೆಟ್ ಸಭೆಯಲ್ಲಿ ಅಧ್ಯಕ್ಷ ಪೆಜೆಶ್ಕಿಯಾನ್ ಈ ಅವರು ಮಸೂದ್ ಪೆಜೆಷ್ಕಿಯಾನ್ ಅವರನ್ನುನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.

54 ವರ್ಷದ ಮೊಹಜೆರಾನಿ ಎಡಿನ್ ಬರ್ಗ್ ವಿಶ್ವವಿದ್ಯಾಲಯದಿಂದ ಡಾಕ್ಟರ್ ಆಫ್ ಬಿಸಿನೆಸ್ ಅಡ್ಮಿನಿಸ್ಟ್ರೇಷನ್ ಪದವಿಧರೆಯಾಗಿದ್ದು, ಈ ಹಿಂದಿನ 11ನೇ ಸರ್ಕಾರದಲ್ಲಿ ಶರಿಯಾತಿಯ ತಾಂತ್ರಿಕ ಮತ್ತು ವೃತ್ತಿಪರ ತರಬೇತಿ ವಿಶ್ವವಿದ್ಯಾಲಯದ (ಮಹಿಳೆಯರಿಗಾಗಿ) ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ್ದಾರೆ. 2017 ರಲ್ಲಿ ಆಗಿನ ಶಿಕ್ಷಣ ಸಚಿವ ಸಯ್ಯದ್ ಮೊಹಮ್ಮದ್ ಬಟ್ ಹೈ ಅವರು ಮೊಹಜೆರಾನಿ ಅವರನ್ನು ಸೆಂಟರ್ ಫಾರ್ ಬ್ರಿಲಿಯಂಟ್ ಟ್ಯಾಲೆಂಟ್ಸ್ ಮುಖ್ಯಸ್ಥರನ್ನಾಗಿ ನೇಮಿಸಿದ್ದರು. ಮೊಹಜೆರಾನಿ ಶಿಕ್ಷಣ ಸಚಿವಾಲಯದಲ್ಲಿ ಇನ್ನೂ ಹಲವಾರು ಹುದ್ದೆಗಳಲ್ಲಿ ಸೇವೆ ಸಲ್ಲಿಸಿದ್ದಾರೆ. ಮೊಹಜೆರಾನಿ ಮಾತ್ರವಲ್ಲದೆ ದೇಶದ ಕೆಲ ಪ್ರಮುಖ ಹುದ್ದೆಗಳಿಗೆ ಕೂಡ ಮಹಿಳೆಯರನ್ನು ನೇಮಿಸಲಾಗಿದೆ. ಅಧ್ಯಕ್ಷ ಪೆಜೆಷ್ಕಿಯಾನ್ ಕಳೆದ ವಾರ ಶಿನಾ ಅನ್ಸಾರಿ ಅವರನ್ನು ಇರಾನ್ನ ಉಪಾಧ್ಯಕ್ಷರಾಗಿ ಮತ್ತು ಪರಿಸರ ವಿಭಾಗದ ಮುಖ್ಯಸ್ಥರನ್ನಾಗಿ ನೇಮಿಸಿದ್ದರು. ಶಿನಾ ಅನ್ಸಾರಿ ಪರಿಸರ ಸೇವೆ ಮತ್ತು ತ್ಯಾಜ್ಯ ನಿರ್ವಹಣೆ, ಆರ್ ಸಿಆರ್‌ಎ, ಸುಸ್ಥಿರ ಅಭಿವೃದ್ಧಿ ಮತ್ತು ಪರಿಸರ ಅನುಸರಣೆಯಲ್ಲಿ ಅನುಭವಿ ಪರಿಸರ ತಜ್ಞೆಯಾಗಿದ್ದಾರೆ.

# ಸಮುದ್ರದಾಳದಲ್ಲಿ ಬೃಹತ್ ಪರ್ವತ ಪತ್ತೆ!

**ಸಾಕ್ರಾಮೆಂಟೊ:** ಪೆಸಿಫಿಕ್ ಸಮುದ್ರ ದಾಳದಲ್ಲಿ 3109 ಮೀ.ಗಳಷ್ಟು ಎತ್ತರದ ಬೃಹತ್ ಸಮುದ್ರ ಪರ್ವತವೊಂದನ್ನು ಕ್ಯಾಲಿಫೋರ್ನಿಯಾದ ಶ್ಮಿತ್ ಓಷನ್ ಇನ್ಸ್ಟಿಟ್ಯೂಟ್ನ ಸಾಗರ ರಚನ ತಜ್ಞರು ಪತ್ತೆ ಮಾಡಿದ್ದಾರೆ.

''ರಿಸರ್ಚ್ ವೆಸಲ್' ಹಡಗುಗಳಲ್ಲಿನ ಸೋನಾರ್ ತಂತ್ರಜ್ಞಾನದ ಮೂಲಕ ಸಮುದ್ರ ತಳದ ಭೂರಚನೆಯನ್ನು ಚಿತ್ರೀಕರಿಸುವ ಸಂದರ್ಭದಲ್ಲಿ ಈ ಪರ್ವತ ಪತ್ತೆಯಾಗಿದೆ ಎಂದು ಸಾಗರ ರಚನ ತಜ್ಞ ಸಂಸ್ಥೆಯ ಜ್ಯೋತಿಕಾ ವೀರ ಮಣಿ ತಿಳಿಸಿದ್ದಾರೆ. ಸದ್ಯ ಪತ್ತೆಯಾಗಿರುವ ಪರ್ವತವು ಸಾಗರದ ಅಸಂಖ್ಯ ಜೀವ ವೈವಿಧ್ಯಕ್ಕೆ ಆಶ್ರಯತಾಣವಾಗಿದ್ದು, ಸ್ಪಂಜು ಜೀವಿಗಳ ಗುಂಪು, ಪ್ರಾಚೀನ ಹವಳಗಳು, ಗೋಸ್ಟ್ಲಿ ವೈಟ್ ಕ್ಯಾಸ್ಪರ್ ಆಕ್ಟೋಪಸ್, ಫ್ಲೈಯಿಂಗ್ ಸ್ಪಾಗೆಟಿ ಮಾನ್ಸ್ಟರ್ಸ್, ಇದೇ ಮೊದಲು ಪತ್ತೆ ಯಾದ ಸ್ಕ್ವಿಡ್ನ ಪ್ರಜಾತಿ ಸೇರಿ ಹಲವು ಅಪರೂಪದ ಜೀವಿಗಳು ಪತ್ತೆಯಾಗಿವೆ. ಪರ್ವತದಲ್ಲಿ ಲಭ್ಯವಿರುವ ಜೀವ ವೈವಿಧ್ಯತೆಯ ಸಂಶೋಧನೆಗೆ ಸಮುದ್ರ ದಾಳದ ರೊಬೋಟನ್ನು ಬಳಸಿದ್ದರು. ಜಗತ್ತಿನ 71 ಭಾಗ ಸಮುದ್ರ ಆವರಿಸಿ ದ್ದರೂ, ಇದುವರೆಗೂ ಸಮುದ್ರದ 26 ಪ್ರತಿಶತ ಭಾಗದ ಭೂರಚನೆ ಅಧ್ಯಯನ ನಡೆಸಲಾಗಿದೆ ಎಂದು ಜ್ಯೋತಿಕಾ ಮಾಹಿತಿ ನೀಡಿದರು.



# ನೈಜೀರಿಯ ಭಾರೀ ನೆರೆಗೆ 179 ಬಲಿ



**ಲಾಗೋಸ್:** ಆಫ್ರಿಕನ್ ರಾಷ್ಟ್ರವಾದ ನೈಜೀರಿಯದ ವಿವಿಧೆಡೆ ಕಳೆದೊಂದು ವಾರದಿಂದ ಎಡೆಬಿಡದೆ ಸುರಿಯುತ್ತಿರುವ ಭಾರೀ ಮಳೆಯಿಂದಾಗಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಕನಿಷ್ಠ 179 ಮಂದಿ ಸಾವನ್ನಪ್ಪಿದ್ದಾರೆ ಹಾಗೂ 2 ಲಕ್ಷಕ್ಕೂ ಅಧಿಕ ಮಂದಿ ನಿರಾಶ್ರಿತರಾಗಿದ್ದಾರೆಂದು ತುರ್ತುಪರಿಸ್ಥಿತಿ ನಿರ್ವಹಣಾಧಿಕಾರಿಯೊಬ್ಬರು ಗುರುವಾರ ತಿಳಿಸಿದ್ದಾರೆ.

ಉತ್ತರ ನೈಜೀರಿಯದಲ್ಲಿ ಪ್ರವಾಹ ಪರಿಸ್ಥಿತಿ ಅತ್ಯಂತ ತೀವ್ರವಾಗಿದ್ದು, 2,65,885 ಎಕರೆ ಕೃಷಿಭೂಮಿಗಳು ಹಾನಿಗೀಡಾಗಿವೆ ಎಂದು ರಾಷ್ಟ್ರೀಯ ತುರ್ತುಸ್ಥಿತಿ ನಿರ್ವಹಣಾ ಏಜೆನ್ಸಿ (ಎನ್‌ಇಎಂಎ) ಬಹಿರಂಗಪಡಿಸಿರುವ ಅಂಕಿಅಂಶಗಳು ತೋರಿಸಿಕೊಟ್ಟಿವೆ. ಬಹುತೇಕ ಸಾವುಗಳು ದೇಶದ ಉತ್ತರ ಪ್ರಾಂತದಲ್ಲಿ ಸಂಭವಿಸಿದೆ. ಆದರೆ ನೈಜೀರಿಯದ ದಕ್ಷಿಣ ಹಾಗೂ ಮಧ್ಯಭಾಗಗಳು ಭಾರೀ ಮಳೆ ಇನ್ನೂ ಮುಂದುವರಿದಿದ್ದು, ಅಲ್ಲಿ ಪ್ರವಾಹ ಪರಿಸ್ಥಿತಿ ವಿಕೋಪಕ್ಕೆ ತಲುಪುವ ಸಾಧ್ಯತೆಯಿದೆಯೆಂದು ಎನ್‌ಇಎಂಎನ ವಕ್ತಾರೆ ಎಝುಕೀಲ್ ಮಂಝೆ ತಿಳಿಸಿದ್ದಾರೆ.

# ಇಸ್ರೇಲ್ ದಾಳಿಗೆ ಐವರು ಹಮಾಸ್ ಬೆಂಬಲಿಗರ ಬಲಿ



**ಜೆರುಸಲೇಂ:** ಆಕ್ರಮಿತ ಪಶ್ಚಿಮದಂಡೆಯಲ್ಲಿ ಗುರುವಾರ ನಸುಕಿನಲ್ಲಿ ತಾನು ನಡೆಸಿದ ಬೃಹತ್ ಕಾರ್ಯಾಚರಣೆಯೊಂದರಲ್ಲಿ ಐವರು ಹಮಾಸ್ ಹೋರಾಟಗಾರರನ್ನು ಹತ್ಯೆಗೈದಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ. ಹತ್ಯೆಯಾದವರಲ್ಲಿ ಹಮಾಸ್ ಬೆಂಬಲಿತ ಸಂಘಟನೆ 'ಇಸ್ಲಾಮಿಕ್ ಜಿಹಾದ್'ನ ಕಮಾಂಡರ್ ಮುಹಮ್ಮದ್ ಝುಬೇರ್ ಕೂಡಾ ಸೇರಿದ್ದಾನೆಂದು ಅದು ಹೇಳಿದೆ.

ಆದರೆ ಕಮಾಂಡರ್ ಮುಹಮ್ಮದ್ ಝುಬೇರ್, ಇಸ್ರೇಲ್ ದಾಳಿಗೆ ಬಲಿಯಾಗಿರುವ ವರದಿಯನ್ನು ಫೆಲೆಸ್ತೀನಿಯನಂ ಅಧಿಕಾರಿಗಳು ದೃಢಪಡಿಸಿಲ್ಲ. 'ಅಬು ಶುಜಾ' ಎಂಬ ಹೆಸರಿನಿಂದಲೇ ಜನಪ್ರಿಯನಾಗಿರುವ ಮುಹಮ್ಮದ್ ಝುಬೇರ್‌ನನ್ನು ಪಶ್ಚಿಮದಂಡೆಯ ತುಲ್ಕಾರೆಮ್ ನಗರದ ಹೊರವಲಯದಲ್ಲಿರುವ ನಿರಾಶ್ರಿತ ಶಿಬಿರದ ಬಳಿ ಹತ್ಯೆಗೈದಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ.

ಮಸೀದಿಯೊಂದರಲ್ಲಿ ಅವಿತುಕೊಂಡಿದ್ದ ಐವರು ಹಮಾಸ್ ಹೋರಾಟಗಾರರ ಮೇಲೆ ತನ್ನ ಪಡೆಗಳು ಗುರುವಾರ ನಸುಕಿನಲ್ಲಿ ದಾಳಿ ನಡೆಸಿದ್ದು, ಕಾರ್ಯಾಚರಣೆಯಲ್ಲಿ ಝುಬೇರ್ ಕೂಡಾ ಸಾವನ್ನಪ್ಪಿರುವುದಾಗಿ ಇಸ್ರೇಲ್ ಸೇನೆ ತಿಳಿಸಿದೆ. ತಕುಲ್ಕಾರೆಮ್ನಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಇನ್ನೋರ್ವ ಫೆಲೆಸ್ತೀನ್ ಹೋರಾಟಗಾರನನ್ನು ಬಂಧಿಸಿರುವುದಾಗಿ ಅದು ತಿಳಿಸಿದೆ.

ಪಶ್ಚಿದಂಡೆಯಲ್ಲಿ ಇಸ್ರೇಲಿ ಸೇನೆಯು ಬುಧವಾರ ಬೃಹತ್ ಮಟ್ಟದ ಮಿಲಿಟರಿ ಕಾರ್ಯಾಚರಣೆಯನ್ನು ಆರಂಭಿಸಿತ್ತು. ಇಸ್ರೇಲಿ ಸೈನಿಕರ ಜೊತೆ ಪ್ರದೇಶದ ವಿವಿಧ ಸ್ಥಳಗಳಲ್ಲಿ ನಡೆದ ಘರ್ಷಣೆಗಳಲ್ಲಿ ತನ್ನ 10 ಮಂದಿ ಹೋರಾಟಗಾರರು ಸಾವನ್ನಪ್ಪಿದ್ದಾರೆಂದು ಹಮಾಸ್ ಹೇಳಿದೆ.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

## ಬ್ಯಾಕ್‌ಲೆಸ್ ಬ್ಲೌಸ್ ಜೊತೆ ಸೀರೆಯುಟ್ಟು ಮಿಂಚಿದ 'ಉಪಾಧ್ಯಕ್ಷ' ನಟಿ

ನಟಿ ಮಲ್ಲೈಕಾ ವಸುಪಾಲ್ 'ಉಪಾಧ್ಯಕ್ಷ' ಸಿನಿಮಾದ ಸಕ್ಸಸ್ ನಂತರ ಹೊಸ ಪ್ರಾಜೆಕ್ಟ್‌ಗಳಲ್ಲಿ ಬ್ಯುಸಿಯಾಗಿದ್ದಾರೆ. ಇದರ ನಡುವೆ ಹೊಸದೊಂದು ಫೋಟೋಶೂಟ್ ಮಾಡಿಸಿದ್ದಾರೆ. ಬ್ಯಾಕ್‌ಲೆಸ್ ಬ್ಲೌಸ್ ಜೊತೆ ಸೀರೆಯುಟ್ಟು ಸಖತ್ ಗ್ಲ್ಯಾಮರಸ್ ಆಗಿ ನಟಿ ಕಾಣಿಸಿಕೊಂಡಿದ್ದಾರೆ.

ಚೆಂದದ ಫೋಟೋಶೂಟ್ ಹಂಚಿಕೊಳ್ಳುವ ಮೂಲಕ ಪಡ್ಡೆಹುಡುಗರ ನಿದ್ದೆಕದ್ದಿದ್ದಾರೆ ಮಲ್ಲೈಕಾ. ನಟಿ ಧರಿಸಿರುವ ಟ್ರೆಡಿಷನಲ್ ಸೀರೆಗೆ ವೆಸ್ಟರ್ನ್ ಲುಕ್ ಕೊಟ್ಟಿದ್ದಾರೆ. ವಿವಿಧ ಭಂಗಿಯಲ್ಲಿ ಫೋಟೋಗೆ ಪೋಸ್ ನೀಡಿದ್ದಾರೆ. ಕೆಂಪು ಮತ್ತು ಗೋಲ್ಡ್ ಮಿಶ್ರಿತ ಬಣ್ಣದ ಸೀರೆಯಲ್ಲಿ ನಟಿ ಕಂಗೊಳಿಸಿದ್ದಾರೆ.

ದಿಲೀಪ್ ರಾಜ್‌ಗೆ ಜೋಡಿಯಾಗಿ ಮಲ್ಲೈಕಾ ಕಿರುತೆರೆಗೆ ಎಂಟ್ರಿ ಕೊಟ್ಟರು. 'ಹಿಟ್ಲರ್ ಕಲ್ಯಾಣ' ಎಂಬ ಸೀರಿಯಲ್‌ನಲ್ಲಿ ಹೀರೋಯಿನ್ ಆಗಿ ನಟಿಸಿದರು.

ನಟಿಸಿದ ಮೊದಲ ಸೀರಿಯಲ್ ಸೂಪರ್ ಹಿಟ್ ಆಗಿತ್ತು. ಮಲ್ಲೈಕಾ ಅವರು ಎಡವಟ್ಟು ಲೀಲಾ ಎಂದೇ ಫೇಮಸ್ ಆಗಿದ್ದರು. ಅಷ್ಟರ ಮಟ್ಟಿಗೆ ಎಜೆ ಪತ್ನಿ ಲೀಲಾ ಆಗಿ ನಟಿ ಎಲ್ಲರ ಗಮನ ಸೆಳೆದಿದ್ದರು. ಹಿಟ್ಲರ್ ಕಲ್ಯಾಣ ಮೊದಲ ಪ್ರಾಜೆಕ್ಟ್ ನಟಿಯ ವೃತ್ತಿ ಬದುಕಿಗೆ ಬ್ರೇಕ್ ನೀಡಿತ್ತು.

ಬಳಿಕ ಕಳೆದ ವರ್ಷ ಚಿಕ್ಕಣ್ಣ ನಟನೆಯ 'ಉಪಾಧ್ಯಕ್ಷ' ಸಿನಿಮಾದಲ್ಲಿ ನಾಯಕಿಯಾಗಿ ಮಲ್ಲೈಕಾ ನಟಿಸಿದ್ದರು. ಈ ಸಿನಿಮಾಗೂ ಕೂಡ ಮೆಚ್ಚುಗೆ ಸಿಕ್ಕಿತ್ತು. 'ಉಪಾಧ್ಯಕ್ಷ' ಚಿತ್ರವನ್ನು ಉಮಾಪತಿ ಶ್ರೀನಿವಾಸ್ ನಿರ್ಮಾಣ ಮಾಡಿದ್ದರು.

ಪ್ರಸ್ತುತ ಡಾಲಿ ಧನಂಜಯ ನಿರ್ಮಾಣದ 'ವಿದ್ಯಾಪತಿ' ಸಿನಿಮಾದಲ್ಲಿ ನಾಗಭೂಷಣ್‌ಗೆ ಜೋಡಿಯಾಗಿ ನಟಿಸುತ್ತಿದ್ದಾರೆ. ಚಿತ್ರದಲ್ಲಿ ಮಲ್ಲೈಕಾ ಪಾತ್ರಕ್ಕೆ ಸ್ಕೋಪ್ ಇದೆ. ವಿಭಿನ್ನವಾಗಿರುವ ಕಥೆಯನ್ನೇ ನಟಿ ಒಪ್ಪಿಕೊಂಡಿದ್ದಾರೆ. ಹಿರಿಯ ನಟ ರಂಗಾಯಣ ರಘು ಪ್ರಮುಖ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ.



## ಪ್ರೀತಿ ಅಂದರೆ ಕಮಿಟ್‌ಮೆಂಟ್

**ಲೈಫ್ ಪಾರ್ಟನರ್ ಬಗ್ಗೆ ರಂಜನಿ ರಾಘವನ್ ಓಪನ್ ಟಾಕ್**

'ಕನ್ನಡತಿ' ಖ್ಯಾತಿಯ ರಂಜನಿ ರಾಘವ್ ಜೀವನ ಸಂಗಾತಿಯನ್ನು ಪರಿಚಯಿಸಿದ್ದಾರೆ. ಬಹುಕಾಲದ ಗೆಳೆಯನ ಬಗ್ಗೆ ನಟಿ ರಿಯಾಕ್ಟ್ ಮಾಡಿದ್ದಾರೆ. ಹಾಗಾದ್ರೆ ನಟಿಯ ಲೈಫ್ ಪಾರ್ಟ್ನರ್ ಯಾರು? ಏನ್ಮಾಡ್ತಾರೆ ಎಂಬುದರ ಬಗ್ಗೆ ರಂಜನಿ ಪಬ್ಲಿಕ್ ಟಿವಿ ಡಿಜಿಟಲ್‌ಗೆ ಎಕ್ಸ್‌ಕ್ಲೂಸಿವ್ ಆಗಿ ಮಾಹಿತಿ ಹಂಚಿಕೊಂಡಿದ್ದಾರೆ.

ನನ್ನ ಹುಡುಗ ಸಾಗರ್ ಭಾರಧ್ವಜ್ ನನ್ನ ಪಿಯುಸಿ ಕ್ಲಾಸ್‌ಮೇಟ್. ಜೀವನದಲ್ಲಿ ನನ್ನ ಏಳು-ಬೀಳುಗಳನ್ನು ನೋಡುತ್ತಾ ಬಂದಿದ್ದಾರೆ. ನನ್ನ ಅರ್ಥ ಮಾಡಿಕೊಂಡಿದ್ದಾರೆ. ನನ್ನ ಕೆಲಸ ಕಾರ್ಯಗಳ ಬಗ್ಗೆ ಅವರಿಗೆ ಗೊತ್ತಿದೆ. ಅವರು ಇಂಟರ್‌ನ್ಯಾಷನಲ್ ಬ್ಯಾಂಕ್‌ವೊಂದರಲ್ಲಿ ಉದ್ಯೋಗಿಯಾಗಿದ್ದಾರೆ. ಹವ್ಯಾಸವಾಗಿ ಸೈಕ್ಲಿಂಗ್, ಟ್ರಾವೆಲಿಂಗ್ ಮಾಡುತ್ತಾರೆ. ಒಳ್ಳೆಯ ವ್ಯಕ್ತಿ, ಸೆಲೆಬ್ರಿಟಿ ಹೊರತಾಗಿ ರಂಜನಿ ಬಗ್ಗೆ ತುಂಬಾ ತಿಳಿದುಕೊಂಡಿದ್ದಾರೆ. ಬೆಸ್ಟ್ ಫ್ರೆಂಡ್ಸ್ ಅಂತ ಇರುವವರೇ ಲೈಫ್ ಪಾರ್ಟನರ್ ಆದ್ರೆ ಚೆನ್ನಾಗಿರುತ್ತೆ. ನಾನು ಹೇಳಿದ ಹಾಗೆ ನನ್ನ ಜೀವನ ಚೆನ್ನಾಗಿದೆ ಎಂದು ನಟಿ ಮಾತನಾಡಿದ್ದಾರೆ. ಪ್ರೀತಿ ಅಂದರೆ ಅದೊಂದು ಕಮಿಟ್‌ಮೆಂಟ್ ಎಂದಿದ್ದಾರೆ. ಇವತ್ತು ಪ್ರೀತಿ ಮಾಡಿ ನಾಳೆ ಕೋಪ ಮಾಡಿಕೊಂಡು ಬದಲಾಗೋದು ಪ್ರೇಮ ಅಲ್ಲ. ಅವರು ಹೇಗೆ ಇರುತ್ತಾರೆ ಹಾಗೆ ಒಪ್ಪಿಕೊಂಡು ಮುಂದೆ ಹೋಗೋದೇ ಕಮಿಟ್‌ಮೆಂಟ್ ಎಂದು ಲವ್ ಲೈಫ್ ಬಗ್ಗೆ ರಂಜನಿ ಮಾತನಾಡಿದ್ದಾರೆ.

ಹಲವು ವರ್ಷಗಳ ಸ್ನೇಹವನ್ನು ಇಂದು ಅಧಿಕೃತಪಡಿಸಿರುವ ರಂಜನಿ, ಸದ್ಯ ಒಪ್ಪಿಕೊಂಡಿರುವ ಸಿನಿಮಾಗಳನ್ನು ಪೂರ್ಣಗೊಳಿಸಬೇಕಿದೆ. ಹಾಗಾಗಿ 2 ವರ್ಷಗಳ ಕಾಲ ಮದುವೆಯ ಬಗ್ಗೆ ಆಲೋಚನೆ ಮಾಡಿಲ್ಲ. ಆದರೆ ನಮ್ಮ ಎರಡು ಕುಟುಂಬದ ಕಡೆಯಿಂದಲೂ ಮದುವೆಗೆ ಸಮ್ಮತಿ ಇದೆ. ಮೊದಲಿಂದಲೂ ನಮ್ಮಿಬ್ಬರ ಬಗ್ಗೆ ಫ್ಯಾಮಿಲಿಯಲ್ಲಿ ಗೊತ್ತಿತ್ತು. ನನ್ನ ವೃತ್ತಿಗೆ ಸಾಗರ್ ಅವರ ಕುಟುಂಬದಿಂದಲೂ ಬೆಂಬಲವಿದೆ ಎಂದಿದ್ದಾರೆ.

ಇನ್ನೂ ನಟಿಯ ಪಾರ್ಟ್ನರ್ ಕುರಿತು ರಿವೀಲ್ ಮಾಡಿದ ಬೆನ್ನಲ್ಲೇ ರಂಜನಿ ಅವರ ಇತ್ತೀಚಿನ ಹೇಳಿಕೆಯೊಂದು ಭಾರೀ ಸದ್ದು ಮಾಡುತ್ತಿದೆ. ಬೆಸ್ಟ್ ಫ್ರೆಂಡ್ಸ್ ಅಂತ ಇರುವವರೇ ಲೈಫ್ ಪಾರ್ಟ್ನರ್ ಆದ್ರೆ ಚೆನ್ನಾಗಿರುತ್ತೆ. ನಮಗೆ ಯಾರಾದ್ರು ಬೆಸ್ಟ್ ಫ್ರೆಂಡ್ಸ್ ಇದ್ರೆ ನಮ್ಮ ಬಗ್ಗೆ ಎಲ್ಲಾ ತಿಳಿದುಕೊಂಡಿರುತ್ತಾರೆ. ನಮಗೆ ಬೇಸಿಕ್ ಬೇಕಾಗಿರೋದು ಫ್ರೆಂಡ್‌ಶಿಪ್ ಮತ್ತು ಒಡನಾಟ ಮಿಕ್ಕಿದೆಲ್ಲಾ ನಂತರ ಅಡ್ಜೆಸ್ಟ್ ಮಾಡಿಕೊಳ್ಳಬಹುದು ಆ ತರ ಇದ್ದರೆ ಚೆನ್ನಾಗಿರುತ್ತೆ ಎಂದು ರಂಜನಿ ಹೇಳಿದ್ದರು. ಅದರಂತೆ ತಮ್ಮ ಬೆಸ್ಟ್ ಫ್ರೆಂಡ್ ಸಾಗರ್ ಅವರನ್ನು ಲೈಫ್ ಪಾರ್ಟನರ್ ಆಗಿ ಸ್ವೀಕರಿಸಿದ್ದಾರೆ.





## ನನ್ನ ಸೋಲಿಗಾಗಿ ಒಂದು ವರ್ಗ ಕಾಯುತ್ತಿದೆ: ಕೃತಿ ಶೆಟ್ಟಿ



ಮಂಗಳೂರಿನ ಬೆಡಗಿ ಕೃತಿ ಶೆಟ್ಟಿ ಸೌತ್ ಸಿನಿಮಾಗಳಲ್ಲಿ ಸದ್ದು ಮಾಡುತ್ತಿದ್ದಾರೆ. ಈ ನಡುವೆ ನಟಿ ನೀಡಿರುವ ಹೇಳಿಕೆಯೊಂದು ಭಾರೀ ಸದ್ದು ಮಾಡುತ್ತಿದೆ. ನನ್ನ ಸಿನಿಮಾಗಳು ಸೋಲಬೇಕೆಂದು ಅನೇಕರು ಕಾಯುತ್ತಿದ್ದಾರೆ ಎಂದು ಸಂದರ್ಶನವೊಂದರಲ್ಲಿ ನಟಿ ಮಾತನಾಡಿದ್ದಾರೆ.

ಕೃತಿ ಶೆಟ್ಟಿ ಮಾತನಾಡಿ, ನಾನು ನಟಿಸಿದ ಮೊದಲ ಸಿನಿಮಾ 'ಉಪ್ಪೇನ' ಸೂಪರ್ ಹಿಟ್ ಆಯಿತು. ಆದರೆ ಕೆಲವರು ನಾನು ಸೋಲುತ್ತೇನೆ ಎಂದು ನಿರೀಕ್ಷಿಸಿದ್ದರು. ಮೊದಲ ಸಿನಿಮಾ ಫ್ಲಾಪ್ ಆಗಿದ್ದರೆ, ಒಂದು ವರ್ಗದ ಜನ ನನ್ನನ್ನು ತುಳಿಯಲು ಎದುರು ನೋಡುತ್ತಿದ್ದರು. ನಾನು ಗೆಲುವು ಮತ್ತು ಸೋಲನ್ನು ಸಮಾನವಾಗಿ ಸ್ವೀಕರಿಸುತ್ತೇನೆ. ನನ್ನ ಮೊದಲ ಸಿನಿಮಾ ಯಶಸ್ವಿಯಾದಾಗ ಅದರ ಸಂಪೂರ್ಣ ಕ್ರೆಡಿಟ್ ಅನ್ನು ನಾನು ತೆಗೆದುಕೊಳ್ಳಲಿಲ್ಲ. ಅದೇ ರೀತಿ ಸಿನಿಮಾ ಫ್ಲಾಪ್ ಆದಾಗಲೂ ಅದರ ಕ್ರೆಡಿಟ್ ಅನ್ನು ನಾನು ತೆಗೆದುಕೊಳ್ಳುವುದಿಲ್ಲ ಎಂದು ಮಾತನಾಡಿದ್ದಾರೆ.

ನನ್ನ ಕೆರಿಯರ್‌ನಲ್ಲಿ ಎಲ್ಲಿ ತಪ್ಪಾಯಿತು ಅನ್ನೋದನ್ನು ಅರಿತುಕೊಂಡಿದ್ದೇನೆ. ಗೆಲುವಿಗಿಂತ ಸೋಲಿನಿಂದಲೇ ಹೆಚ್ಚು ಪಾಠ ಕಲಿತಿದ್ದೇನೆ. ಸಿನಿಮಾ ಸೋಲು ಮತ್ತಷ್ಟು ನನ್ನನ್ನು ಗಟ್ಟಿಯಾಗಿ ನಿಲ್ಲುವಂತೆ ಮಾಡಿದೆ ಎಂದಿದ್ದಾರೆ. ನಟಿಯ ಸೋಲನ್ನು ನೋಡಲು ಯಾರು ಕಾಯ್ತಿದ್ದಾರೆ ಎಂಬುದನ್ನು ನಟಿ ಬಿಟ್ಟು ಕೊಟ್ಟಿಲ್ಲ. ಆದರೆ ಟೀಕೆ ಮಾಡುವವರಿಗೆ ಕೃತಿ ತಕ್ಕ ಉತ್ತರ ನೀಡಿದ್ದಾರೆ. ಅಂದಹಾಗೆ, ಮಲಯಾಳಂ ಪ್ರಾಜೆಕ್ಟ್‌ವೊಂದರಲ್ಲಿ ನಟಿಸುತ್ತಿದ್ದಾರೆ. ಜೊತೆಗೆ ನಯನತಾರಾ ನಿರ್ಮಾಣದ ತಮಿಳು ಸಿನಿಮಾದಲ್ಲಿ ಕೃತಿ ಶೆಟ್ಟಿ ನಾಯಕಿಯಾಗಿ ಆಯ್ಕೆ ಆಗಿದ್ದಾರೆ. ಈ ಚಿತ್ರಕ್ಕೆ ವಿಘ್ನೇಶ್ ಶಿವನ್ ನಿರ್ದೇಶನ ಮಾಡಲಿದ್ದಾರೆ.

## 2ನೇ ಟೆಸ್ಟ್ ಪಂದ್ಯಕ್ಕೆ ಪಾಕ್ ತಂಡ ಪ್ರಕಟ
# ಮಾಜಿ ನಾಯನಿಗೆ ಗೇಟ್ ಪಾಸ್

ಬಾಂಗ್ಲಾದೇಶ ವಿರುದ್ಧದ ಎರಡು ಪಂದ್ಯಗಳ ಟೆಸ್ಟ್ ಸರಣಿಯ ಎರಡನೇ ಪಂದ್ಯ ರಾವಲ್ಪಿಂಡಿಯಲ್ಲಿ ನಡೆಯಲಿದೆ. ಇದು ಆಗಸ್ಟ್ 30 ರಿಂದ ನಡೆಯಲಿದ್ದು, ಪಾಕಿಸ್ತಾನ ಕ್ರಿಕೆಟ್ ಮಂಡಳಿ ಈ ಪಂದ್ಯಕ್ಕಾಗಿ 12 ಸದಸ್ಯರ ಪಾಕ್ ತಂಡವನ್ನು ಇಂದು ಪ್ರಕಟಿಸಿದೆ. ಈ ಪಟ್ಟಿಯಲ್ಲಿ ತಂಡದ ಪ್ರಮುಖ ವೇಗದ ಬೌಲರ್ ಶಾಹೀನ್ ಅಫ್ರಿದಿ ಹೆಸರು ಕಾಣೆಯಾಗಿದ್ದು, ಸರಣಿಯ ಎರಡನೇ ಮತ್ತು ಕೊನೆಯ ಪಂದ್ಯದಿಂದ ಮಾಜಿ ನಾಯಕನನ್ನು ಹೊರಗಿಡಲು ಮಂಡಳಿ ನಿರ್ಧರಿಸಿದೆ. ಅವರ ಸ್ಥಾನದಲ್ಲಿ ಎಡಗೈ ವೇಗದ ಬೌಲರ್ ಮೀರ್ ಹಮ್ಜಾ ಮತ್ತು ಸ್ಪಿನ್ನರ್ ಅಬ್ರಾರ್ ಅಹ್ಮದ್ ಅವರನ್ನು ತಂಡಕ್ಕೆ ಆಯ್ಕೆ ಮಾಡಿಕೊಂಡಿದ್ದು, ಈ ಇಬ್ಬರಲ್ಲಿ ಒಬ್ಬರು ಮಾತ್ರ ಆಡುವ ಹನ್ನೊಂದರ ಬಳಗದಲ್ಲಿ ಸ್ಥಾನ ಪಡೆಯಲಿದ್ದಾರೆ.

**ಅಫ್ರಿದಿಗೆ ಕೋಕ್:** ಬಾಂಗ್ಲಾದೇಶ ವಿರುದ್ಧದ ಎರಡನೇ ಟೆಸ್ಟ್‌ಗೆ ಮಾಜಿ ನಾಯಕ ಹಾಗೂ ತಂಡದ ವೇಗದ ಬೌಲಿಂಗ್ ದಾಳಿಯನ್ನು ಮುನ್ನಡೆಸುವ ಶಾಹೀನ್ ಅಫ್ರಿದಿ ಆಯ್ಕೆಯಾಗದಿರುವುದಕ್ಕೆ ಯಾವುದೇ ಕಾರಣವನ್ನು ನೀಡಲಾಗಿಲ್ಲ. ಆದಾಗ್ಯೂ, ಅವರಿಗೆ ಅವಕಾಶ ನೀಡದಿರುವ ಹಿಂದೆ ಹಲವು ಕಾರಣಗಳಿದ್ದು, ಅದರಲ್ಲಿ ಮೊದಲ ಕಾರಣವೆಂದರೆ ಅವರ ಕಳಪೆ ಫಾರ್ಮ್. ಮೊದಲ ಟೆಸ್ಟ್‌ನಲ್ಲಿ ಪಾಕಿಸ್ತಾನ ತಂಡ ತನ್ನ ವೇಗದ ಬೌಲರ್‌ಗಳನ್ನು ನೆಚ್ಚಿಕೊಂಡಿತ್ತು. ಹೀಗಾಗಿಯೇ ನಾಲ್ವರು ವೇಗದ ಬೌಲರ್‌ಗಳನ್ನು ಕಣಕ್ಕಿಳಿಸಿತ್ತು.

ಪಿಚ್ ಅನ್ನು ವೇಗಿಗಳಿಗೆ ನೆರವಾಗುವಂತೆ ಸಿದ್ದಪಡಿಸಿದ್ದ ಕಾರಣ ಮಾಜಿ ನಾಯಕ ಶಾಹೀನ್ ಅಫ್ರಿದಿ ಮೇಲೆ ಸಾಕಷ್ಟು ನಿರೀಕ್ಷೆಗಳಿದ್ದವು. ಆದರೆ ಅಫ್ರಿದಿಗೆ ಯಾವುದೇ ಪ್ರಭಾವ ಬೀರಲು ಸಾಧ್ಯವಾಗಲಿಲ್ಲ. ಹೊಸ ಚೆಂಡನ್ನು ಸ್ವಿಂಗ್ ಮಾಡುವಲ್ಲಿ ಹೆಸರುವಾಸಿಯಾಗಿರುವ ಶಾಹೀನ್, ಮೊದಲ ಪಂದ್ಯದಲ್ಲಿ ಅಂತಹದ್ಯಾವುದೇ ಕರಾಮತ್ತು ತೋರಲಿಲ್ಲ. ಅಲ್ಲದೆ ಅವರ ವೇಗವು ತುಂಬಾ ಕಡಿಮೆಯಾಗಿತ್ತು. ಮೊದಲ ಟೆಸ್ಟ್ ಪಂದ್ಯದಲ್ಲಿ 32 ಓವರ್‌ಗಳನ್ನು ಎಸೆದ ಅಫ್ರಿದಿ ಕೇವಲ 2 ವಿಕೆಟ್‌ಗಳನ್ನು ಮಾತ್ರ ಉರುಳಿಸಿದ್ದರು.

ಇನ್ನೊಂದು ಪ್ರಮುಖ ಕಾರಣವೆಂದರೆ, ಮೊದಲ ಟೆಸ್ಟ್ ಪಂದ್ಯದ ವೇಳೆ ಶಾಹೀನ್ ಅಫ್ರಿದಿ ಅವರ ಮಡದಿ ಮೊದಲ ಮಗುವಿಗೆ ಜನ್ಮ ನೀಡಿದ್ದರು. ಹೀಗಾಗಿ ತಮ್ಮ ಕುಟುಂಬದೊಂದಿಗೆ ಸಮಯ ಕಳೆಯುವ ಸಲುವಾಗಿ ಅಫ್ರಿದಿ ಅವರೇ ಎರಡನೇ ಟೆಸ್ಟ್ ಪಂದ್ಯದಿಂದ ಹೊರಗುಳಿದಿರಬಹುದು. ಆದರೆ ಈ ಬಗ್ಗೆ ಪಿಸಿಬಿ ಅಧಿಕೃತ ಹೇಳಿಕೆ ಬಿಡುಗಡೆ ಮಾಡುವ ತನಕ ಯಾವುದನ್ನು ನಿರ್ದಿಷ್ಟವಾಗಿ ಹೇಳಲು ಸಾಧ್ಯವಿಲ್ಲ.



### ಬಾಬರ್ ಮೇಲೂ ತೂಗುಗತ್ತಿ?

**ಇದೀಗ ಎರಡನೇ ಟೆಸ್ಟ್‌ನಿಂದ ಶಾಹೀನ್ ಅವರನ್ನು ಹೊರಗಿಟ್ಟಿರುವ ನಂತರ, ಬಾಬರ್ ಆಝಂ ಅವರನ್ನು ತಂಡದಿಂದ ಕೈಬಿಡಲಾಗುವುದು ಎಂಬ ಊಹಾಪೋಹಗಳು ಪ್ರಾರಂಭವಾಗಿವೆ. ಇದಕ್ಕೆ ಕಾರಣವೂ ಇದ್ದು ಟೆಸ್ಟ್‌ನ ಕಳೆದ 14 ಇನ್ನಿಂಗ್ಸ್‌ಗಳಲ್ಲಿ ಒಂದೇ ಒಂದು ಶತಕ ಅಥವಾ ಅರ್ಧಶತಕವನ್ನು ಗಳಿಸಲು ಬಾಬರ್‌ಗೆ ಸಾಧ್ಯವಾಗಲಿಲ್ಲ. ಈ 14 ಇನ್ನಿಂಗ್ಸ್‌ಗಳಲ್ಲಿ ಕೇವಲ 161 ರನ್ ಗಳಿಸಲಷ್ಟೇ ಶಕ್ತರಾಗಿರುವ ಬಾಬರ್ ಮೊದಲ ಪಂದ್ಯದಲ್ಲಿ ಕೇವಲ 22 ರನ್ ಮಾತ್ರ ಕಲೆಹಾಕಿದ್ದರು. ಇದರಲ್ಲಿ ಮೊದಲ ಇನ್ನಿಂಗ್ಸ್‌ನಲ್ಲಿ ಶೂನ್ಯಕ್ಕೆ ವಿಕೆಟ್ ಒಪ್ಪಿಸಿದ್ದ ಬಾಬರ್, ಎರಡನೇ ಇನ್ನಿಂಗ್ಸ್‌ನಲ್ಲಿ 22 ರನ್ ಬಾರಿಸಿದ್ದರು.**

**ಎರಡನೇ ಟೆಸ್ಟ್‌ಗೆ ಪಾಕಿಸ್ತಾನ ತಂಡ:** ಶಾನ್ ಮಸೂದ್ (ನಾಯಕ), ಸೌದ್ ಶಕೀಲ್ (ಉಪನಾಯಕ), ಅಬ್ರಾರ್ ಅಹ್ಮದ್, ಮೊಹಮ್ಮದ್ ಅಲಿ, ಸಲ್ಮಾನ್ ಅಲಿ ಅಗಾ, ಸೈಮ್ ಅಯೂಬ್, ಬಾಬರ್ ಆಝಂ, ಮೀರ್ ಹಮ್ಜಾ, ಮೊಹಮ್ಮದ್ ರಿಜ್ವಾನ್, ಅಬ್ದುಲ್ಲಾ ಶಫೀಕ್, ನಸೀಮ್ ಶಾ ಮತ್ತು ಖುರ್ರಂ ಶಹಜಾದ್.

## ಮೂವರು ಆಟಗಾರರು, ಫಿಸಿಯೋಗೆ ಆಜೀವ ನಿಷೇಧ ಹೇರಿದ ಪಾಕ್



ಪಾಕಿಸ್ತಾನ ಹಾಕಿ ಫೆಡರೇಶನ್‌ಗೆ ತಿಳಿಯದಂತೆ ಯುರೋಪಿಯನ್ ದೇಶಕ್ಕೆ ಪರಾರಿಯಾಗಲು ಯತ್ನಿಸಿದ ಮೂವರು ಪಾಕಿಸ್ತಾನಿ ಹಾಕಿ ಆಟಗಾರರು ಮತ್ತು ಫಿಸಿಯೋಥೆರಪಿಸ್ಟ್‌ಗೆ ಆಜೀವ ನಿಷೇಧ ಹೇರಲಾಗಿದೆ. ವಾಸ್ತವವಾಗಿ, ಈ ಮೂವರು ಆಟಗಾರರು ಯಾವುದೇ ಮ್ಯಾಚ್ ಫಿಕ್ಸಿಂಗ್ ಆರೋಪವನ್ನಾಗಲಿ ಅಥವಾ ಬೇರೆ ಯಾವುದೇ ಆರೋಪದಲ್ಲಿ ಸಿಕ್ಕಿಬಿದ್ದು, ಆಜೀವ ನಿಷೇಧಕ್ಕೊಳಗಾಗಿಲ್ಲ. ಈ ಬಗ್ಗೆ ಮಾಹಿತಿ ನೀಡಿರುವ ಪಿಎಚ್‌ಎಫ್ ಪ್ರಧಾನ ಕಾರ್ಯದರ್ಶಿ ರಾಣಾ ಮುಜಾಹಿದ್, ಇದೀಗ ಆಜೀವ ನಿಷೇಧಕ್ಕೊಳಗಾಗಿರುವ ಮುರ್ತಾಜಾ ಯಾಕೂಬ್, ಇಹ್ತೇಶಾಮ್ ಅಸ್ಲಾಮ್ ಮತ್ತು ಅಬ್ದುರ್ ರೆಹಮಾನ್ ಮತ್ತು ಫಿಸಿಯೋಥೆರಪಿಸ್ಟ್ ವಕಾಸ್ ಕಳೆದ ತಿಂಗಳು ನೆದರ್ಲ್ಯಾಂಡ್ಸ್ ಮತ್ತು ಪೋಲೆಂಡ್‌ಗೆ ನೇಷನ್ಸ್ ಕಪ್ ಟೂರ್ನಿಗಾಗಿ ತಂಡದೊಂದಿಗೆ ಪ್ರವಾಸ ಮಾಡಿದ್ದರು. ಆದರೆ ಪ್ರವಾಸ ಮುಗಿದ ಕೂಡಲೇ ಇಡೀ ತಂಡ ದೇಶಕ್ಕೆ ವಾಪಸ್ಸಾಗಿತ್ತು. ಆ ಬಳಿಕ ಏಷ್ಯನ್ ಚಾಂಪಿಯನ್ಸ್ ಟ್ರೋಫಿಗಾಗಿ ಮಂಡಳಿ ತರಬೇತಿ ಶಿಬಿರವನ್ನು ಘೋಷಿಸಿದಾಗ, ಈ ಮೂವರೂ ದೇಶೀಯ ಸಮಸ್ಯೆಗಳಿಂದ ಶಿಬಿರಕ್ಕೆ ಹಾಜರಾಗಲು ಸಾಧ್ಯವಿಲ್ಲ ಎಂದು ನಮಗೆ ಹೇಳಿದ್ದರು. ಆ ಬಳಿಕ ಈ ಮೂವರು ತಂಡಕ್ಕೆ ನೀಡಲಾದ ಅದೇ ಷೆಂಗೆನ್ ವೀಸಾದಲ್ಲಿ ಮತ್ತೊಮ್ಮೆ ಹಾಲೆಂಡ್‌ಗೆ (ನೆದರ್ಲ್ಯಾಂಡ್ಸ್) ಹೋಗಿದ್ದಾರೆ ಮತ್ತು ಅಲ್ಲಿ ರಾಜಕೀಯ ಆಶ್ರಯ ಪಡೆದಿದ್ದಾರೆ ಎಂದು ನಮಗೆ ತಿಳಿದು ಬಂದಿದೆ. ಆಟಗಾರರ ಈ ನಡೆ ಪಾಕಿಸ್ತಾನ ಹಾಕಿಗೆ ನಿರಾಶಾದಾಯಕ ಪ್ರಕರಣವಾಗಿದೆ. ಇವರ ಈ ನಡುವಳಿಕೆಯಿಂದ ಅಂತರರಾಷ್ಟ್ರೀಯ ಸ್ಪರ್ಧೆಗಳಿಗೆ ಯುರೋಪಿಯನ್ ರಾಷ್ಟ್ರಗಳಿಗೆ ವೀಸಾಗಾಗಿ ಅರ್ಜಿ ಸಲ್ಲಿಸಲು ಕಷ್ಟವಾಗುತ್ತದೆ. ಹೌದು, ಪಿಎಚ್‌ಎಫ್ ನ ಆರ್ಥಿಕ ಪರಿಸ್ಥಿತಿಯು ಸಾಕಷ್ಟು ಸವಾಲಿನದ್ದಾಗಿದೆ. ಇದರಿಂದಾಗಿ ಆಟಗಾರರು ತಮ್ಮ ಪ್ರಯಾಣ ಭತ್ಯೆ ಮತ್ತು ವೇತನವನ್ನು ಸರಿಯಾದ ಸಮಯಕ್ಕೆ ಪಡೆಯಲಾಗುತ್ತಿಲ್ಲ. ಆದರೆ ಹಾಗಂದ ಮಾತ್ರಕ್ಕೆ ಆಟಗಾರರು ರಾಷ್ಟ್ರೀಯ ತಂಡವನ್ನು ತೊರೆಯಲು ಮತ್ತು ದೇಶಕ್ಕೆ ಅಪಖ್ಯಾತಿ ತರುವ ಕೆಲಸವನ್ನು ಮಾಡುವುದು ತರವಲ್ಲ. ಹೀಗಾಗಿ ಈ ಮೂವರು ಆಟಗಾರರ ಮೇಲೆ ಪಿಎಚ್‌ಎಫ್ ಜೀವಿತಾವಧಿ ನಿಷೇಧವನ್ನು ಅನುಮೋದಿಸಿದೆ. ಅಲ್ಲದೆ ಕಊಈ ಅಧ್ಯಕ್ಷರನ್ನು ಶಿಸ್ತು ಕ್ರಮಕ್ಕಾಗಿ ಅವರನ್ನು ಮರಳಿ ಕರೆತರಲು ಪಾಕಿಸ್ತಾನದ ದೂತಾವಾಸದ ಮೂಲಕ ಪ್ರಯತ್ನಗಳನ್ನು ಮಾಡುವಂತೆ ಕೇಳಿಕೊಳ್ಳಲಾಗಿದೆ. ಮುಂದಿನ ಕ್ರಮಕ್ಕಾಗಿ ನಾವು ಈಗಾಗಲೇ ಆಂತರಿಕ ಮತ್ತು ವಿದೇಶಾಂಗ ಸಚಿವಾಲಯಗಳಿಗೆ ತಿಳಿಸಿದ್ದೇವೆ ಎಂದು ಮುಜಾಹಿದ್ ಮಾಹಿತಿ ನೀಡಿದ್ದಾರೆ.

# ಮುಡಾ ಹಗರಣ ಮುಚ್ಚಾಕಲು ಕೈ ಷಡ್ಯಂತ್ರ

**ರಾಮನಗರ:** ಕುಮಾರಸ್ವಾಮಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರುವ ಮೂಲಕ ಮುಡಾ ಹಗರಣ ಮುಚ್ಚಿ ಹಾಕಲು ಕಾಂಗ್ರೆಸ್ ಷಡ್ಯಂತ್ರ ಮಾಡುತ್ತಿದೆ ಎಂದು ನಿಖಿಲ್ ಕುಮಾರಸ್ವಾಮಿ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್ ರಾಜಭವನ ಚಲೋ ವಿಚಾರವಾಗಿ ಮಾತನಾಡಿ, ಕುಮಾರಸ್ವಾಮಿ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೋರಿ ಕಾಂಗ್ರೆಸ್ ಮುಡಾ ಹಗರಣವನ್ನು ಮುಚ್ಚಿ ಹಾಕುವ ತಂತ್ರ ಮಾಡುತ್ತಿದ್ದಾರೆ. ಅದಕ್ಕಾಗಿಯೇ ಆ.31 ರಂದು ಕಾಂಗ್ರೆಸ್‌ನಿಂದ ರಾಜಭವನ ಚಲೋ ಹಮ್ಮಿಕೊಂಡಿದ್ದಾರೆ. ಇವರ ಹೋರಾಟದಲ್ಲಿ ಯಾವುದೇ ಹುರುಳಿಲ್ಲ. ಕುಮಾರಸ್ವಾಮಿ ಅವರು ವೆಂಕಟೇಶ್ವರ ಮೈನಿಂಗ್ ವಿಚಾರವಾಗಿ ಆರೋಪ ಮಾಡ್ತಿದ್ದಾರೆ. ಆದರೆ ಈ ವಿಚಾರ ಸುಪ್ರೀಂಕೋರ್ಟ್‌ನಲ್ಲಿದೆ. ಎಸ್‌ಐಟಿ, ಲೋಕಾಯುಕ್ತಗೆ ವರದಿ ಕೊಡುವಂತೆ ಕೋರ್ಟ್ ಸೂಚಿಸಿದ್ದರೂ ವರದಿ ಕೊಟ್ಟಿಲ್ಲ. ಈಗ ಹೆಚ್‌ಡಿಕೆ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ಕೇಳೋದು ಅನಗತ್ಯ ಎಂದು ಹೇಳಿದರು.

ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಕೋಡಂಬಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದ ಸಭೆಯಲ್ಲಿ ಮಾತನಾಡಿದ ಅವರು, ಕಳೆದ ಐದು ವರ್ಷ ಕುಮಾರಸ್ವಾಮಿ ಅವರ ನಾಯಕತ್ವಕ್ಕೆ ಕ್ಷೇತ್ರದ ಜನ ಬೆಂಬಲ ಕೊಟ್ಟಿದ್ದಾರೆ. ಈಗ ಕೇಂದ್ರ ಸಚಿವರಾಗಿ ಕೆಲಸ ಮಾಡ್ತಿದ್ದಾರೆ. ಉಪಚುನಾವಣೆ ಎದುರಾಗಿರುವ ಹಿನ್ನೆಲೆ ಮುಖಂಡರು, ಕಾರ್ಯಕರ್ತರ ಅಭಿಪ್ರಾಯ ಸಂಗ್ರಹಿಸುತ್ತಿದ್ದೇವೆ. ಕ್ಷೇತ್ರವನ್ನು ಜೆಡಿಎಸ್‌ಗೆ ಉಳಿಸಿಕೊಳ್ಳುವಂತೆ ಅವರು ಒತ್ತಾಯಿಸುತ್ತಿದ್ದಾರೆ ಎಂದರು. ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ಕಣಕ್ಕಿಳಿಯುತ್ತಾರೆ. ಜೆಡಿಎಸ್ ಕೂಡಾ ಎನ್‌ಡಿಎ ಕೂಟದ ಒಂದು ಭಾಗ. ಹಾಗಾಗಿ ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿ ಗೆಲ್ಲಬೇಕು. ಅದಕ್ಕಾಗಿ ಪಕ್ಷದ ಕಾರ್ಯಕರ್ತರು ಸಜ್ಜಾಗಬೇಕು. ಸಿಪಿವೈ ಪರ ಬಿಜೆಪಿ ನಾಯಕರು ಕಣಕ್ಕಿಳಿಯಲಿದ್ದಾರೆ. ಬಿಜೆಪಿಯ ಕೆಲ ರಾಜ್ಯನಾಯಕರು ಅವರವರ ಅಭಿಪ್ರಾಯ ತಿಳಿಸಿದ್ದಾರೆ. ಅದನ್ನ ನಾವು ವಿರೋಧ ಮಾಡಲ್ಲ, ಸ್ವಾಗತ ಮಾಡುತ್ತೇವೆ. ಆದರೆ ಅಂತಿಮವಾಗಿ ಬಿಜೆಪಿ ವರಿಷ್ಠರು ಹಾಗೂ ಕುಮಾರಸ್ವಾಮಿ ಅವರು ತೀರ್ಮಾನ ಮಾಡುತ್ತಾರೆ. ಸೂಕ್ತ ಅಭ್ಯರ್ಥಿಯನ್ನು ಆಯ್ಕೆ ಮಾಡಲಾಗುತ್ತದೆ. ಯಾರೇ ಅಭ್ಯರ್ಥಿ ಆದರೂ ಎರಡೂ ಪಕ್ಷಗಳು ಬೆಂಬಲ ಕೊಡಬೇಕು. ಬಿಜೆಪಿ-ಜೆಡಿಎಸ್ ಒಗ್ಗಟ್ಟಿನ ಮಂತ್ರ ಜಪಿಸಬೇಕು ಎಂದು ಹೇಳಿದರು.



ಬೆಂಗಳೂರು ಗ್ರಾಮಾಂತರದಲ್ಲಿ ಅವರ ಸಹೋದರ ಮೂರು ಬಾರಿ ಸಂಸದರಾಗಿದ್ದರು. ಆಗ ಆ ಕ್ಷೇತ್ರವನ್ನೇ ಕಳೆದುಕೊಂಡಿದ್ದರು. ಈ ಕ್ಷೇತ್ರವನ್ನು ಡಿಕೆಶಿ ಅವರು ಕಬ್ಜ ಮಾಡುವ ಪ್ಲ್ಯಾನ್‌ನಲ್ಲಿದ್ದಾರೆ. ಐದು ಕ್ಷೇತ್ರಗಳಲ್ಲಿ ಮಿತ್ರಪಕ್ಷಕ್ಕೆ ಹೆಚ್ಚು ಲೀಡ್ ಸಿಕ್ಕಿದೆ. ಎನ್‌ಡಿಎ ಪಕ್ಷಕ್ಕೆ ಜನರ ಬೆಂಬಲ, ಆಶೀರ್ವಾದ ಇರೋದು ಸ್ಪಷ್ಟವಾಗಿದೆ. ಕನಕಪುರ, ಚನ್ನಪಟ್ಟಣದಲ್ಲೂ ದೊಡ್ಡ ಮಟ್ಟದ ಲೀಡ್ ಸಿಕ್ಕಿದೆ. ಹಾಗಾಗಿ ಈ ಕ್ಷೇತ್ರದಲ್ಲಿ ಮೈತ್ರಿ ಪಕ್ಷದ ಗೆಲುವು ಖಚಿತ ಎಂದು ಸ್ಪಷ್ಟನೆ ನೀಡಿದ್ದಾರೆ.

ಇದೇ ವೇಳೆ ಡಿಕೆಶಿ ಕುರಿತು ಮಾತಾನಾಡಿದ ಅವರು, ಡಿಕೆಶಿಯವರು ಉದ್ಯೋಗ ಮೇಳ ಧ್ವಜಾರೋಹಣ ಮಾಡಿ ಕ್ಷೇತ್ರದ ಜನರನ್ನು ಓಲೈಕೆ ಮಾಡುವ ವಿಚಾರದಲ್ಲಿದ್ದಾರೆ. ಪ್ರೋಟೋಕಾಲ್ ಪ್ರಕಾರ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ಮಾಡಬೇಕು. ಆದರೆ ಉಪಚುನಾವಣೆ ಗಮನದಲ್ಲಿಟ್ಟುಕೊಂಡು ಚನ್ನಪಟ್ಟಣದಲ್ಲಿ ಧ್ವಜಾರೋಹಣ ಮಾಡಿದ್ದಾರೆ. ಅದೇನೋ 20 ಜನ ಪಿಡಿಓ ಬದಲಾವಣೆ ಮಾಡ್ತೀವಿ, ಸೈಟ್ ಕೊಡ್ತೀವಿ ಅಂತ ಆಶ್ವಾಸನೆ ಕೊಡ್ತಿದ್ದಾರೆ. ಆದರೆ ರಾಜ್ಯದ ಜನತೆಗೆ ಕೊಟ್ಟಿರುವ ಆಶ್ವಾಸನೆಗಳನ್ನೇ ಅವರು ಈಡೇರಿಸಿಲ್ಲ.

ಇನ್ನೂ ಚನ್ನಪಟ್ಟಣಕ್ಕೂ ಇದೇ ಸ್ಥಿತಿ ಬರುತ್ತದೆ. ಇದಕ್ಕೆ ದೊಡ್ಡಮಟ್ಟದ ಪ್ರಚಾರ ಕೊಡುವ ಅಗತ್ಯ ಇಲ್ಲ. ಸರ್ಕಾರದ ಸಾಕಷ್ಟು ಮಂತ್ರಿಗಳು ಪಂಚಾಯಿತಿ ಮಟ್ಟಕ್ಕೆ ಬರ್ತಿದ್ದಾರೆ. ರಾಜ್ಯದಲ್ಲಿ ಚನ್ನಪಟ್ಟಣ ಉಪಚುನಾವಣೆ ಗಮನ ಸೆಳೆಯಲಿದೆ. ಏನೇ ಇದ್ರೂ, ಕ್ಷೇತ್ರದ ಜನರು ಅಂತಿಮವಾಗಿ ತೀರ್ಮಾನ ಮಾಡುತ್ತಾರೆ. ಅವರೇ ಇದಕ್ಕೆ ತಕ್ಕ ಉತ್ತರ ಕೊಡುತ್ತಾರೆ ಎಂದರು.

## ಬೆಂಗಳೂರು ಅಭಿವೃದ್ಧಿಗೆ 27,000 ಕೋಟಿ ಅನುದಾನ ಬೇಡಿಕೆ ಇಟ್ಟ ಸಿಎಂ

**ಬೆಂಗಳೂರು:** 5 ವರ್ಷಗಳ ಅವಧಿಗೆ ನಗರದ ಅಭಿವೃದ್ಧಿಗಾಗಿ 16ನೇ ಹಣಕಾಸು ಆಯೋಗದ ಮುಂದೆ ರಾಜ್ಯ ಸರ್ಕಾರ 27 ಸಾವಿರ ಕೋಟಿ ರೂ. ಅನುದಾನ ಕೇಳಿದೆ. ರಾಜ್ಯಕ್ಕೆ ಆಗಮಿಸಿರುವ 16ನೇ ಹಣಕಾಸು ಆಯೋಗದ ಮುಂದೆ ತಮ್ಮ ಬೇಡಿಕೆ ಸಲ್ಲಿಸಿದ ಸಿಎಂ ಸಿದ್ದರಾಮಯ್ಯ ಅವರು, ಬೆಂಗಳೂರಿಗೆ 27 ಸಾವಿರ ಕೋಟಿ ರೂ. ಅನುದಾನ ಕೊಡುವಂತೆ ಮನವಿ ಮಾಡಿದರು. ಬೆಂಗಳೂರಿಗೆ ಮುಂದಿನ 5 ವರ್ಷಗಳಲ್ಲಿ 55,586 ಕೋಟಿ ರೂ. ಅನುದಾನ ಅವಶ್ಯಕತೆ ಇದೆ. ಇದರಲ್ಲಿ 27,799 ಕೋಟಿ ರೂ. ಅನುದಾನ ಕೊಡುವಂತೆ ಹಣಕಾಸು ಆಯೋಗಕ್ಕೆ ಅವರು ಮನವಿ ಮಾಡಿದ್ದಾರೆ. ಕಲ್ಯಾಣ ಕರ್ನಾಟಕದ ಸಮಾನ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ 25 ಸಾವಿರ ಕೋಟಿ ರೂ. ಹೂಡಿಕೆ ಮಾಡುತ್ತಿದೆ. ಆಯೋಗದಿಂದ 25 ಸಾವಿರ ಕೋಟಿ ರೂ. ಹೊಂದಾಣಿಕೆ ಅನುದಾನ ಬೇಕಿದೆ. ಇದರ ಜೊತೆಗೆ ಪಶ್ಚಿಮ ಘಟ್ಟಗಳ ಅತ್ಯಂತ ದುರ್ಬಲ ಪ್ರದೇಶಗಳಲ್ಲಿ ಪರಿಣಾಮಕಾರಿ ವಿಪತ್ತು ತಗ್ಗಿಸುವಿಕೆ ಮತ್ತು ಸಕಾಲ ಪರಿಹಾರ ಮತ್ತು ಪುನರ್ವಸತಿ ಕ್ರಮಗಳಿಗೆ 10 ಸಾವಿರ ಕೋಟಿ ರೂ. ಅನುದಾನದ ಬೇಡಿಕೆಯನ್ನ ಸಿಎಂ ಹಣಕಾಸು ಆಯೋಗದ ಮುಂದೆ ಇಟ್ಟಿದ್ದಾರೆ.



## ಮೈಕ್ ಹಾಕಿ ಊರಿಗೆಲ್ಲ ಕೇಳುವ ಹಾಗೆ ಕೂಗಿದ್ರೆ ಧಾರ್ಮಿಕ ಭಾವನೆಗೆ ಧಕ್ಕೆಯಾಗಲ್ವಾ?

**ಬೆಂಗಳೂರು:** ನಮ್ಮೆಲ್ಲರ ಆರಾಧ್ಯ ದೈವ ಹನುಮನ ಜನ್ಮಸ್ಥಳ ಅಂಜನಾದ್ರಿ ಬೆಟ್ಟದ ಬಳಿ ಇರುವ ತ್ರಿಶೂಲ-ತಿಲಕದ ಆಕಾರವಿರುವ ವಿದ್ಯುತ್ ದೀಪಗಳು ಧಾರ್ಮಿಕ ಭಾವನೆಗೆ ಧಕ್ಕೆ ತರುತ್ತವೆಯಂತೆ. ಇದು ಯಾವ ಸೀಮೆಯ ಲಾಜಿಕ್? ಪ್ರತಿನಿತ್ಯ ಮೈಕ್ ಹಾಕಿಕೊಂಡು ಊರಿಗೆಲ್ಲಾ ಕೇಳುವ ರೀತಿ ಕೂಗುವುದು ಇತರ ಧರ್ಮಿಯರ ಧಾರ್ಮಿಕ ನಂಬಿಕೆಗಳಿಗೆ ಧಕ್ಕೆ ತರುವುದಿಲ್ಲವಾ? ಎಂದು ಗಂಗಾವತಿ ತಹಶೀಲ್ದಾರರ ವಿರುದ್ಧ ಸಿ.ಟಿ ರವಿ ಕಿಡಿಕಾರಿದ್ದಾರೆ.



ವಿವಾದಿತ ವಿದ್ಯುತ್ ಕಂಬಗಳ ತೆರವಿಗೆ ಗಂಗಾವತಿ ತಹಸೀಲ್ದಾರ್ ಆದೇಶ ವಿಚಾರವಾಗಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರರು, ಆದೇಶ ನೀಡಿರುವ ತಹಸೀಲ್ದಾರ್ ಅಮಾನತ್ತಿಗೆ ಆಗ್ರಹಿಸಿದ್ದಾರೆ.

ಹಿಂದೂ ವಿರೋಧಿ ನಿರ್ಣಯ ಅಂಗೀಕರಿಸಿರುವ ಗಂಗಾವತಿಯ ತಹಶೀಲ್ದಾರ್ ಅವರನ್ನು ಕೂಡಲೇ ಅಮಾನತು ಮಾಡಬೇಕು. ಇಷ್ಟರ ಮೇಲೆಯೂ ತಹಶೀಲ್ದಾರ್ ಆದೇಶದಂತೆ ಗಂಗಾವತಿಯಲ್ಲಿ ವಿದ್ಯುತ್ ದೀಪಗಳನ್ನು ತೆರವುಗೊಳಿಸಲು ಮುಂದಾದರೇ ಗಂಗಾವತಿಗೆ ನಾವೇ ಬಂದು ವಿದ್ಯುತ್ ದೀಪಗಳನ್ನು ಅಳವಡಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ್ದಾರೆ. ಗಂಗಾವತಿ ನಗರದ ಜುಲೈನಗರದಿಂದ ರಾಣಾ ಪ್ರತಾಪ್ ವೃತ್ತದವರೆಗೆ ಅಭಿವೃದ್ಧಿಪಡಿಸಿದ ರಸ್ತೆ ಮಧ್ಯೆ ಹಾಕಿರುವ ವಿದ್ಯುತ್ ಕಂಬಗಳ ತೆರವಿಗೆ ತಹಶೀಲ್ದಾರ್ ಆದೇಶಿಸಿದ್ದರು. ಅಷ್ಟೇ ಅಲ್ಲದೇ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ಸಂಸ್ಥೆ ವಿರುದ್ಧವೇ ಪ್ರಕರಣ ದಾಖಲಿಸಲು ಸೂಚಿಸಿದ್ದರು.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com